ಸಂಪುಟ: 22, ಸಂಚಿಕೆ: 106, ಪುಟಗಳು: 8, ಭಾನುವಾರ, 26 ಜನವರಿ 2025 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ದೇಶದ ಜನತೆಗೆ 76ನೇ ಗಣರಾಜ್ಯೋತ್ಸವದ ಶುಭಾಷಯಗಳು..

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

### ಸುಭಾಷಿತ

ಪ್ರತಿಯೊಂದು ಜೀವಿಯಲ್ಲೂ ನೆಲೆಸಿರುವುದು ಒಬ್ಬನೇ ಪರಮಾತ್ಮ, ನೀರು ತುಂಬಿದ ಅಷ್ಟೂ ಕೊಡಗಳಲ್ಲಿ ಒಬ್ಬನೇ ಚಂದ್ರ ಪ್ರತಿಫಲಿಸುವಂತೆ, ಪರಮಾತ್ಮನೂ ಪ್ರತಿಯೊಂದು ಜೀವಿಯಲ್ಲಿ ನೆಲೆಸಿದ್ದಾನೆ.

### ಪಂಚಾಂಗ

(ಭಾನುವಾರ 26, ಜನವರಿ-2025)

- ಶ್ರೀ ಕ್ರೋಧಿನಾಮ ಸಂವತ್ಸರ,
- ಹೇಮಂತ ಋತು, ಉತ್ತರಾಯಣ
- ಪುಷ್ಯ ಮಾಸ, ಕೃಷ್ಣ ಪಕ್ಷ,
- ದ್ವಾದಶಿ, ಜ್ಯೇಷ್ಠಾ ನಕ್ಷತ್ರ
- ರಾಹುಕಾಲ - 04:51 ರಿಂದ 06 : 17
- ಗುಳಿಕಕಾಲ - 03 : 25 ರಿಂದ 04 : 51
- ಯಮಗಂಡಕಾಲ - 12 : 32 ರಿಂದ 01 : 58

## ಸಂಕ್ಷಿಪ್ತ ಸುದ್ದಿ

### ಯಶಸ್ವಿ ಶಸ್ತ್ರಚಿಕಿತ್ಸೆ ಬಳಿಕ ತಾಯ್ನಾಡಿಗೆ ಬಂದಿಳಿದ ಶಿವಣ್ಣ



**ಬೆಂಗಳೂರು:** ಯಶಸ್ವಿ ಶಸ್ತ್ರಚಿಕಿತ್ಸೆ ಬಳಿಕ ಇಂದು (ಜ 26) ಶಿವಣ್ಣ ತಾಯ್ನಾಡಿಗೆ ಬಂದಿಳಿದಿದ್ದಾರೆ. ಮೂತ್ರಕೋಶದ ಕ್ಯಾನ್ಸರ್ ಸಂಬಂಧ ಆಪರೇಷನ್ ಮಾಡಿಸಿಕೊಳ್ಳಲು ನಟ ಶಿವರಾಜಕುಮಾರ್ ಡಿ.18 ರಂದು ಅಮೆರಿಕಕ್ಕೆ ತೆರಳಿದ್ದರು. ಬಳಿಕ ಡಿ.34 ರಂದು ಆಪರೇಷನ್‌ಗೆ ಒಳಗಾಗಿದ್ದು, ಇತ್ತೀಚಿಗಷ್ಟೇ ಶಿವಣ್ಣ ತಾಯ್ನಾಡಿಗೆ ಬರುವ ಸಿಹಿ ಸುದ್ದಿಯನ್ನು ಸ್ವತಃ ವಿಡಿಯೋ ಮೂಲಕ ಹಂಚಿಕೊಂಡಿದ್ದರು. ಪುಟ 2

### ವಕೀಲರ ಅಪಹರಿಸಿ, ಮೈಮೇಲೆ ವಾಹನ ಹತ್ತಿಸಿ ಹತ್ಯೆ



**ಉತ್ತರ ಪ್ರದೇಶ:** ಉತ್ತರ ಪ್ರದೇಶದ ಬಸ್ತಿ ಜಿಲ್ಲೆಯಲ್ಲಿ ನಡೆದ ವಕೀಲರೊಬ್ಬರ ಅಪಹರಣ ಪ್ರಕರಣವು ರಾಜ್ಯಾದ್ಯಂತ ಸಂಚಲನ ಮೂಡಿಸಿದೆ. ವಕೀಲರ ಅಪಹರಿಸಿ, ಮೈಮೇಲೆ ವಾಹನ ಹತ್ತಿಸಿ ಹತ್ಯೆ ಮಾಡಲಾಗಿದೆ. ವಕೀಲರ ಸಂಬಂಧಿಯೊಬ್ಬರನ್ನು ಬಂಧಿಸಲಾಗಿದೆ. ಕಪ್ತಗಂಜ್ ಪೊಲೀಸ್ ಠಾಣಾ ವ್ಯಾಪ್ತಿಯ ಬೈಡೋಲಿಯಾ ಅಜೈಬ್ ನಿವಾಸಿ ಚಂದ್ರಶೇಖರ್ ಯಾದವ್ (50) ಶನಿವಾರ ಕಾರ್ಯಕ್ರಮದಲ್ಲಿ ಭಾಗವಹಿಸಲು ಕಪ್ತಂಗಂಜ್‌ಗೆ ತೆರಳಿದ್ದರು. ಸಂಜೆ ದ್ವಿಚಕ್ರ ವಾಹನದಲ್ಲಿ ಮನೆಗೆ ಹಿಂದಿರುಗುತ್ತಿದ್ದಾಗ, ನಾರಾಯಣಪುರ ಗ್ರಾಮದ ಬಳಿ ಸ್ಕಾರ್ಪಿಯೋದಲ್ಲಿ ಬಂದ ಕೆಲವರು ಅವರನ್ನು ಅಪಹರಿಸಿದ್ದರು. ಅಪಹರಣದ ಬಗ್ಗೆ ಪೊಲೀಸರಿಗೆ ಮಾಹಿತಿ ಸಿಗುವಷ್ಟರಲ್ಲಿ ಆರೋಪಿಗಳು ಯಾದವ್‌ಗೆ ಥಳಿಸಿ ವಾಲ್ಟರ್‌ಗಂಜ್‌ನ ರಸ್ತೆಯಲ್ಲಿ ಎಸೆದಿದ್ದರು. ನಂತರ ಆರೋಪಿಗಳು ತಮ್ಮ ವಾಹನದೊಂದಿಗೆ ಅವರ ಮೇಲೆ ಓಡಿಸಿ ಪರಾರಿಯಾಗಿದ್ದಾರೆ. ಪುಟ 2




# ದೇಶದಲ್ಲಿ 76ನೇ ಗಣರಾಜ್ಯೋತ್ಸವ

## ಧ್ವಜಾರೋಹಣ ನೆರವೇರಿಸಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್





**ಬೆಂಗಳೂರು:** ದೇಶದಲ್ಲಿ 76ನೇ ಗಣರಾಜ್ಯೋತ್ಸವ ಸಂಭ್ರಮ ಮನೆ ಮಾಡಿದೆ. ಬೆಂಗಳೂರಿನ ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಗಣರಾಜ್ಯೋತ್ಸವ ಆಚರಿಸಲಾಯಿತು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಧ್ವಾಜರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿದರು. ಬಳಿಕ ಪೊಲೀಸ್ ಬ್ಯಾಂಡ್ ತಂಡದಿಂದ ರಾಷ್ಟ್ರಗೀತೆ ನುಡಿಸಲಾಯಿತು.

ಇದೇ ವೇಳೆ ರಾಜ್ಯವನ್ನು ಉದ್ದೇಶಿಸಿ ಭಾಷಣ ಮಾಡಿದ ಅವರು, ಇಂದು ದೇಶಕ್ಕೆ ಐತಿಹಾಸಿಕ ದಿನವಾಗಿದೆ. ಕಾನೂನಿನ ಮುಂದೆ ಎಲ್ಲರೂ ಒಂದೇ. ನಾವು ಸಂವಿಧಾನವನ್ನು ರಕ್ಷಿಸಿದರೆ, ಸಂವಿಧಾನ ನಮ್ಮನ್ನು ರಕ್ಷಿಸುತ್ತೆ ಎಂದರು.

ರಾಜ್ಯದಲ್ಲಿ 5 ಗ್ಯಾರಂಟಿ ಯೋಜನೆಗಳನ್ನ ಜಾರಿ ಮಾಡಲಾಗಿದೆ. ಗ್ಯಾರಂಟಿಗಳ ಮೂಲಕ ದೇಶದಲ್ಲಿ ಹೊಸ ಸಂದೇಶ ನೀಡಿದೆ. ಗ್ಯಾರಂಟಿಗಳನ್ನು ಟೀಕೆ ಮಾಡುವವರಿಗೆ ಸಂದೇಶವನ್ನು ನೀಡಿದೆ. ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಗೃಹಲಕ್ಷ್ಮೀ ಜಾರಿ ಮಾಡಲಾಗಿದೆ. ಪ್ರತಿ ಮಹಿಳೆಗೆ ತಿಂಗಳಿಗೆ 2 ಸಾವಿರ ಹಣ ನೀಡಲಾಗುತ್ತಿದೆ. ಕೋಟ್ಯಂತರ ಮಹಿಳೆಯರು ಇದರ ಲಾಭವನ್ನ ಪಡೆದಿದ್ದಾರೆ. ಗೃಹಲಕ್ಷ್ಮೀ ಯೋಜನೆಗೆ 35,180 ಕೋಟಿ ಮೀಸಲಿಟ್ಟಿದ್ದೇವೆ. ಅಷ್ಟೇ ಅಲ್ಲದೇ ಗೃಹಜ್ಯೋತಿ ಯೋಜನೆ ಜಾರಿ ಮಾಡಿದ್ದೇವೆ. ರಾಜ್ಯದ 1.62 ಕೋಟಿ ಜನ ಇದರ ಲಾಭ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಅದೇ ರೀತಿ ಶಕ್ತಿ ಯೋಜನೆ ಮತ್ತು ಯುವನಿಧಿ ಯೋಜನೆ ಜಾರಿ ಮಾಡಲಾಗಿದೆ. ಒಟ್ಟು 35180.20 ಕೋಟಿ ಹಣ ಗೃಹಲಕ್ಷ್ಮೀ ಯೋಜನೆಗಾಗಿ ನೆರವು ನೀಡಲಾಗಿದೆ. 1. ಕೋಟಿ ಜನ ಇದರ ಲಾಭ ಪಡೀತಿದ್ದಾರೆ.ಅದೇ ರೀತಿ ಶಕ್ತಿ ಯೋಜನೆ ಮತ್ತು ಯುವನಿಧಿ ಯೋಜನೆ ಜಾರಿಯಾಗಿದೆ ಎಂದರು.

ಜನರ ಹಸಿವು ನೀಗಿಸಲು ಅನ್ನಭಾಗ್ಯ ಯೋಜನೆ ಜಾರಿ ಮಾಡಲಾಗಿದೆ. ತಲಾ 259 ವಿದ್ಯಾರ್ಥಿಗಳ ಸಾಮರ್ಥ್ಯ ಇರುವ 25 ಮೂರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಪ್ರಾಥಮಿಕ ಮತ್ತು ಉನ್ನತ ಶಿಕ್ಷಣಕ್ಕಾಗಿ ಬಲಪಡಿಸಲು ರಾಜ್ಯಾದ್ಯಂತ ಸರ್ಕಾರ ಹೊಸ ಶಿಕ್ಷಣ ನೀತಿ ಜಾರಿ ಮಾಡುತ್ತಿದೆ. ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ಕಟ್ಟಡದ ಕಾರ್ಯವನ್ನು ಪ್ರಾರಂಭಿಸಲಾಗಿದೆ ಎಂದು ತಿಳಿಸಿದರು.

2024-25ರ ಸಾಲಿನಲ್ಲಿ 2491ಕಿಮೀ ರಾಜ್ಯ ಹೆದ್ದಾರಿ ಮತ್ತು 3103 ಕಿಮೀ ಪ್ರಮುಖ ಜಿಲ್ಲೆ ರಸ್ತೆಯ ಸಾಧಾರಣ ಮಾಡಲಾಗಿದೆ. ರಾಜ್ಯದಿಂದ ರಫ್ತು ಪ್ರಮಾಣ ಹೆಚ್ಚಾಗಿದೆ. ಶೇ. 11.17 ರಷ್ಟು ಬೆಳವಣಿಗೆ ಕಂಡಿದೆ. ಕುಡಿಯುವ ನೀರಿದ ಮೂಲಗಳ ಗುಣಮಟ್ಟ ಕಾಪಾಡಿಕೊಳ್ಳಲು 79 ಪ್ರಯೋಗಾಲಯ ನಿರ್ಮಾಣ ಮಾಡಲಾಗಿದೆ. ರಾಜ್ಯದ ಸಮತೋಲಿತ ಮತ್ತು ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಡಾ. ಡಿ.ಎಂ ನಂಜುಂಡಪ್ಪ ವರದಿ ಅನುಷ್ಠಾನ, ಕಲ್ಯಾಣ ಕರ್ನಾಟಕ ಅಭಿವೃದ್ಧಿಗಾಗಿ ಕ್ರಮ, ಕಲಬುರಗಿಯಲ್ಲಿ ಸಂಪುಟ ಸಭೆ ನಡೆಸಲಾಯಿತು. ಸುಮಾರು 11 ಸಾವಿರ ಕೋಟಿಗೂ ಹೆಚ್ಚಿನ ಯೋಜನೆ ಮತ್ತು ಕಾರ್ಯಕ್ರಮ ಗಳಿಗೆ ಅನುಮೋದನೆ ನೀಡಲಾಗಿದೆ ಎಂದು ಹೇಳಿದರು. ಪುಟ 2

## ದೇಶದ ಜನತೆಗೆ ಶುಭಕೋರಿದ ಪ್ರಧಾನಿ, ಸಿಎಂ



**ನವದೆಹಲಿ / ಬೆಂಗಳೂರು:** ದೇಶದೆಲ್ಲೆಡೆ 76ನೇ ಗಣರಾಜ್ಯೋತ್ಸವದ ಸಂಭ್ರಮ ಮನೆ ಮಾಡಿದೆ. ರಾಜ್ಯದಲ್ಲೂ ಸಂಭ್ರಮ, ಸಡಗರದಿಂದ ಗಣರಾಜ್ಯೋತ್ಸವ ಆಚರಿಸಲಾಗುತ್ತಿದ್ದು, ಗಣತಂತ್ರ ಹಬ್ಬಕ್ಕೆ ಪ್ರಧಾನಿ ನರೇಂದ್ರ ಮೋದಿ ಹಾಗೂ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಭಕೋರಿದ್ದಾರೆ.

**ಪ್ರಧಾನಿ ಮೋದಿ ಸಂದೇಶ ಏನು?:** ದೇಶದ ಸಮಸ್ತ ಜನತೆಗೆ ಗಣರಾಜ್ಯೋತ್ಸವದ ಶುಭಾಶಯಗಳು. ಈ ಸಂದರ್ಭದಲ್ಲಿ, ನಮ್ಮ ಸಂವಿಧಾನವನ್ನು ರಚಿಸುವ ಮೂಲಕ, ನಮ್ಮ ಅಭಿವೃದ್ಧಿ ಪಯಣವು ಪ್ರಜಾಪ್ರಭುತ್ವ, ಘನತೆ ಮತ್ತು ಏಕತೆಯ ಮೇಲೆ ಆಧಾರಿತವಾಗಿದೆ ಎಂದು ಖಚಿತಪಡಿಸಿದ ಎಲ್ಲ ಮಹಾನ್ ವ್ಯಕ್ತಿಗಳಿಗೆ ನಾವು ಗೌರವ ಸಲ್ಲಿಸುತ್ತೇವೆ. ಈ ರಾಷ್ಟ್ರೀಯ ಹಬ್ಬವು ನಮ್ಮ ಸಂವಿಧಾನದ ಮೌಲ್ಯಗಳನ್ನು ರಕ್ಷಿಸುತ್ತದೆ. ಅಲ್ಲದೇ ಬಲಿಷ್ಠ ಮತ್ತು ಸಮೃದ್ಧ ಭಾರತ ರಚಿಸುವ ನಮ್ಮ ಪ್ರಯತ್ನಗಳನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಪುಟ 2

## 10,000 ಗಣ್ಯರಿಗೆ ಆಹ್ವಾನ, ಮಿಲಿಟರಿ ಶಕ್ತಿ ಅನಾವರಣ



**ನವದೆಹಲಿ:** ದೇಶದೆಲ್ಲೆಡೆ 76ನೇ ಗಣರಾಜ್ಯೋತ್ಸವದ ಸಂಭ್ರಮ ಮನೆ ಮಾಡಿದೆ. ರಾಜ್ಯದಲ್ಲೂ ಸಂಭ್ರಮ, ಸಡಗರದಿಂದ ಗಣರಾಜ್ಯೋತ್ಸವ ಆಚರಿಸಲಾಗುತ್ತಿದೆ. ಈ ಹಿನ್ನೆಲೆ ಬೆಂಗಳೂರು ಸೇರಿದಂತೆ ಆಯಾ ಜಿಲ್ಲಾ ಕೇಂದ್ರಗಳಲ್ಲಿ ಧ್ವಜಾರೋಹಣ ಕಾರ್ಯಕ್ರಮ ನೆರವೇರಲಿದೆ. ಇಂದು ದೆಹಲಿಯ ಕರ್ತವ್ಯ ಪಥದಲ್ಲಿ ಆಕರ್ಷಕ ಪಥ ಸಂಚಲನ ನಡೆಯಲಿದೆ.

76ನೇ ಗಣರಾಜೋತ್ಸವ ಆಚರಣೆಗೆ ದೆಹಲಿಯ ಕೆಂಪುಕೋಟೆ ಸಜ್ಜಾಗಿದ್ದು, ಪರೇಡ್‌ನಲ್ಲಿ ದೇಶದ ಮಿಲಿಟರಿ ಶಕ್ತಿ ಜೊತೆಗೆ ದೇಶದ ಭವ್ಯ ಪರಂಪರೆ, ಸಂಸ್ಕೃತಿಯ ಅನಾವರಣ ಆಗಲಿದೆ. ಕರ್ನಾಟಕದ ಲಕ್ಕುಂಡಿ ಶಿಲ್ಪಕಲೆಯ ಸ್ತಬ್ಧಚಿತ್ರ ಮೆರವಣಿಗೆಯಲ್ಲಿ ಕಾಣಿಸಿಕೊಳ್ಳಲಿದೆ.

ಈ ಬಾರಿ ಸುವರ್ಣ ಭಾರತ, ಪರಂಪರೆ ಮತ್ತು ಅಭಿವೃದ್ಧಿ ಥೀಮ್‌ನಲ್ಲಿ ಗಣರಾಜೋತ್ಸವ ಆಚರಣೆ ಮಾಡಲಾಗುತ್ತಿದ್ದು, ಇಂಡೋನೇಷ್ಯಾದ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಸಮ್ಮುಖದಲ್ಲಿ ಪರೇಡ್ ನಡೆಯಲಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ಮೋದಿ ಸೇರಿ ಗಣ್ಯರು ಭಾಗಿಯಾಗಲಿದ್ದಾರೆ. ಈ ಐತಿಹಾಸಿಕ ಕ್ಷಣಕ್ಕೆ ಪ್ರಧಾನಿ ನರೇಂದ್ರ ಮೋದಿ, ಈ ಬಾರಿಯ ವಿಶೇಷ ಅತಿಥಿ ಇಂಡೋನೇಷ್ಯಾ ಅಧ್ಯಕ್ಷರು ಸೇರಿ ಇತರ ಗಣ್ಯರು ಸಾಕ್ಷಿಯಾಗಲಿದ್ದಾರೆ. 10,000 ಗಣ್ಯರಿಗೆ ಆಹ್ವಾನ ನೀಡಲಾಗಿದೆ. ಜೊತೆಗೆ ಇದೇ ಮೊದಲಬಾರಿಗೆ 5,000 ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಪ್ರದರ್ಶಿಸಲಾಗುತ್ತಿದೆ. ಪುಟ 2

## 13 ದಿನಗಳ ಬಳಿಕ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆದ ಲಕ್ಷ್ಮೀ ಹೆಬ್ಬಾಳ್ಕರ್



**ಬೆಂಗಳೂರು:** ಕಾರು ಅಪಘಾತದಲ್ಲಿ ಗಾಯಗೊಂಡು ಬೆಳಗಾವಿಯ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಡಿಸ್ಚಾರ್ಜ್ ಆಗಿದ್ದಾರೆ. ಜನವರಿ 14ರಂದು ಬೆಂಗಳೂರಿನಿಂದ ಬೆಳಗಾವಿಗೆ ತೆರಳುವಾಗ ಅಂಬಡಗಟ್ಟಿ ಬಳಿ ಅಪಘಾತ ಸಂಭವಿಸಿತ್ತು. ಅಪಘಾತದಲ್ಲಿ ಹೆಬ್ಬಾಳ್ಕರ್ ಬೆನ್ನು ಮೂಳೆ ಮುರಿತವಾಗಿ, ಕತ್ತಿಗೆ ಗಾಯವಾಗಿತ್ತು. 13 ದಿನಗಳ ಕಾಲ ಚಿಕಿತ್ಸೆ ಪಡೆದ ಬಳಿಕ ಲಕ್ಷ್ಮೀ ಹೆಬ್ಬಾಳ್ಕರ್ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ.

ಆಸ್ಪತ್ರೆಯಿಂದ ಬಿಡುಗಡೆಯಾದ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಲಕ್ಷ್ಮೀ ಹೆಬ್ಬಾಳ್ಕರ್, ಎಲ್ಲರಿಗೂ ಧನ್ಯವಾದ ತಿಳಿಸುತ್ತೇನೆ. ನನಗೆ ಆಗಬಾರದ ದುರ್ಘಟನೆ ಆಯಿತು. ಕೊನೇ ಹಂತ ನೋಡಿ ಹೋರಾಟ ಮಾಡಿ ಬಂದಿದ್ದೇನೆ. ಇದು ಪುನರ್ಜನ್ಮ ಅನಿಸುತ್ತೆ. ಹಿರಿಯರ ಆಶೀರ್ವಾದ, ತಂದೆ ತಾಯಿ ಆಶೀರ್ವಾದ, ಮುಖ್ಯಮಂತ್ರಿ, ಸಚಿವರು, ಶಾಸಕರು, ಡಿಸಿಎಂ ಮತ್ತು ಸುರ್ಜೇವಾಲ ಆರೋಗ್ಯ ವಿಚಾರಿಸಿ ಧೈರ್ಯ ಹೇಳಿದರು. ಕ್ಷೇತ್ರದ ಎಲ್ಲ ಮತದಾರರಿಗೂ ಧನ್ಯವಾದ ತಿಳಿಸುತ್ತೇನೆ ಎಂದರು. ವಿಡಿಯೋ ಕಾನ್ಫರೆನ್ಸ್ ಮೂಲಕ ಕೆಲಸ ಮಾಡ್ತಿದ್ದೇನೆ. ವೈದ್ಯರು ಇನ್ನೂ ಮೂರು ವಾರಗಳ ಕಾಲ ವಿಶ್ರಾಂತಿ ಪಡೆಯುವಂತೆ ಹೇಳಿದ್ದಾರೆ ಎಂದು ತಿಳಿಸಿದರು.



# ಎಚ್‌ಎಎಲ್ ವಿಮಾನ ನಿಲ್ದಾಣವನ್ನು ಆದಷ್ಟು ಬೇಗ ತೆರೆಯಬೇಕು

**ಬೆಂಗಳೂರು:** ಹೆಚ್‌ಎಎಲ್ ವಿಮಾನ ನಿಲ್ದಾಣವನ್ನು ಆದಷ್ಟು ಬೇಗ ತೆರೆಯಬೇಕು ಎಂದು ಬೆಂಗಳೂರು ದಕ್ಷಿಣ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಆಗ್ರಹಿಸಿದ್ದಾರೆ.



ಬೆಂಗಳೂರು ದಕ್ಷಿಣ ಭಾಗದಲ್ಲಿ ಎರಡನೇ ವಿಮಾನ ನಿಲ್ದಾಣ ತೆರೆಯಲು ಸರ್ಕಾರ ಸಿದ್ಧತೆ ಮಾಡಿಕೊಳ್ಳುತ್ತಿದ್ದಂತೆ ತೇಜಸ್ವಿ ಸೂರ್ಯ ಅವರಿಂದ ಈ ಅಭಿಪ್ರಾಯ ವ್ಯಕ್ತವಾಗಿದೆ. ಹೊಸ ಎರಡನೇ ವಿಮಾನ ನಿಲ್ದಾಣಕ್ಕಾಗಿ ನಾವು ಕಾಯುತ್ತಿರುವಾಗ ಹೆಚ್‌ಎಎಲ್‌ನಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಸಾರ್ವಜನಿಕ ಮೂಲಸೌಕರ್ಯವನ್ನು ವ್ಯರ್ಥ ಮಾಡುವುದರಲ್ಲಿ ಯಾವುದೇ ಅರ್ಥವಿಲ್ಲ. ಇದರಿಂದ ಸಾವಿರಾರು ಪ್ರಯಾಣಿಕರು ಪ್ರಯೋಜನ ಪಡೆಯುತ್ತಾರೆ. ಕೆಂಪೇಗೌಡ ವಿಮಾನ ನಿಲ್ದಾಣಕ್ಕೆ ಹೋಗುವ ದೀರ್ಘ ಪ್ರಯಾಣ ಇದರಿಂದ ಉಳಿತಾಯವಾಗುತ್ತದೆ ಎಂದಿದ್ದಾರೆ.

# ಅನ್ಯ ಭಾಷಿಕರಿಗೆ ಬಿಬಿಎಂಪಿ, ಕನ್ನಡ ಪ್ರಾಧಿಕಾರದಿಂದ ಕನ್ನಡ ಕಲಿಸಲು ನಿರ್ಧಾರ

**ಬೆಂಗಳೂರು:** ನಮ್ಮ ಬೆಂಗಳೂರಿನಲ್ಲಿ ಕನ್ನಡಿಗರಿಗಿಂತ ಅನ್ಯ ಭಾಷೆ ಮಾತನಾಡುವವರೇ ಹೆಚ್ಚು. ಭಾಷೆಯ ವಿಚಾರವಾಗಿ ಆಗಾಗ ಗಲಾಟೆಗಳು ಆಗುತ್ತಿರುತ್ತವೆ. ಈ ಹಿನ್ನೆಲೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಕ್ರಮವೊಂದನ್ನು ಕೈಗೊಂಡಿದೆ. ರಾಜಧಾನಿ ಬೆಂಗಳೂರಲ್ಲಿ ಕನ್ನಡ ಮಾತನಾಡುವವರ ಸಂಖ್ಯೆ ಕಡಿಮೆ. ಅನ್ಯ ಭಾಷಿಕರೇ ತುಂಬಿರುವ ಬೆಂಗಳೂರಿನಲ್ಲಿ ಕನ್ನಡವನ್ನ ಉಳಿಸುವ, ಬೆಳೆಸುವ ಪ್ರಯತ್ನಕ್ಕೆ ಬಿಬಿಎಂಪಿ ಹಾಗೂ ಕನ್ನಡ ಪ್ರಾಧಿಕಾರ ಮುಂದಾಗಿದೆ. ನಗರದಲ್ಲಿರುವ ಅನ್ಯಭಾಷಿಕರಿಗೆ ಕನ್ನಡ ಕಲಿಸುವ ಮಹತ್ವದ ತೀರ್ಮಾನವನ್ನು ಪಾಲಿಕೆ ಮತ್ತು ಕನ್ನಡ ಪ್ರಾಧಿಕಾರ ತೆಗೆದುಕೊಂಡಿದೆ.



ವಾರಕ್ಕೆ ಮೂರು ದಿನ ಒಂದೊಂದು ಗಂಟೆಯಂತೆ, ತಿಂಗಳಿಗೆ 36 ಘಂಟೆಗಳಲ್ಲಿ ಕನ್ನಡವನ್ನು ಕಲಿಸಿ ಕೊಡುವ ಬಗ್ಗೆ ಚಿಂತನೆ ನಡೆದಿದೆ. ಇದಕ್ಕಾಗಿ ಪಾಲಿಕೆಯ ಜೊತೆಯೂ ಕನ್ನಡ ಪ್ರಾಧಿಕಾರ ಮಾತುಕತೆ ನಡೆಸಿದೆ.

ಪ್ರತಿನಿತ್ಯ ಬಳಸುವ ಕನ್ನಡ ಪದಗಳು, ವಾಕ್ಯಗಳನ್ನು ಸರಳವಾಗಿ ಹೇಳಿಕೊಡಲಾಗುತ್ತದೆ. ಕನ್ನಡ ಕಲಿಸಲು 75 ಶಿಕ್ಷಕರನ್ನ ಹೊರಗುತ್ತಿಗೆ ಆಧಾರದಲ್ಲಿ ಪಾಲಿಕೆ ನೇಮಕ ಮಾಡಿಕೊಳ್ಳಲಿದೆ. ಕನ್ನಡ ಪ್ರಾಧಿಕಾರದಿಂದಲೂ ಖಾಸಗಿ ಕಂಪನಿ, ಇತರೆ ಜಾಗಗಳಲ್ಲಿ ಕೆಲಸ ಮಾಡುವವರಿಗೆ ಕನ್ನಡ ಕಲಿಸುವ ಕೆಲಸವನ್ನು ಮಾಡಲಾಗುತ್ತದೆ. ಆಯಾ ಕಚೇರಿ, ಕಂಪನಿಗಳಲ್ಲಿ 30 ಜನರ ತಂಡ ಕನ್ನಡವನ್ನು ಕಲಿಯುತ್ತೇವೆ ಎಂದು ಪಾಲಿಕೆ, ಪ್ರಾಧಿಕಾರಕ್ಕೆ ತಿಳಿಸಿದರೆ ಆ ಜಾಗಕ್ಕೂ ಹೋಗಿ ಶಿಕ್ಷಕರು ಹೇಳಿಕೊಡುತ್ತಾರೆ.

ಬಿಬಿಎಂಪಿಯ ಎಂಟು ವಲಯಗಳಲ್ಲಿ, ಅನ್ಯ ಭಾಷಿಕರಿಗೆ ಕನ್ನಡ ಕಲಿಸಿಕೊಡಲು, ಕನ್ನಡ ಘಟಕಗಳನ್ನ ರಚಿಸುವಂತೆ ಪಾಲಿಕೆಗೆ ಕನ್ನಡ ಪ್ರಾಧಿಕಾರ ಮನವಿ ಮಾಡಿದೆ. ಕನ್ನಡ ಕಲಿಕೆಗೆ ಪ್ರತ್ಯೇಕ ಪಠ್ಯವನ್ನೂ ತಯಾರು ಮಾಡಿದೆ. ಇದಕ್ಕೆ ಸಮ್ಮತಿ ಸೂಚಿಸಿರುವ ಬಿಬಿಎಂಪಿ, ಈ ಕುರಿತು ತನ್ನ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸುವ ನಿರ್ಧಾರಕ್ಕೆ ಬಂದಿದೆ.

# ಡಿಕೆಶಿ ಜೊತೆ ಯಾವುದೇ ಮುನಿಸಿಲ್ಲ

**ಚಿಕ್ಕೋಡಿ:** ಶ್ರೀರಾಮುಲು ಪಕ್ಷದ ಸಿದ್ಧಾಂತ ಒಪ್ಪಿ ಕಾಂಗ್ರೆಸ್ ಪಕ್ಷಕ್ಕೆ ಬಂದರೆ ಸ್ವಾಗತಿಸುತ್ತೇನೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಬೆಳಗಾವಿ ಜಿಲ್ಲೆಯ ಹುಕ್ಕೇರಿ ಪಟ್ಟಣದಲ್ಲಿ ಅಂಬೇಡ್ಕರ್ ಪ್ರತಿಮೆ ಅನಾವರಣ ಬಳಿಕ ಮಾತನಾಡಿದ ಅವರು, ಶ್ರೀರಾಮುಲು ಪಕ್ಷಕ್ಕೆ ಬರಲು ನನ್ನ ವಿರೋಧವಿಲ್ಲ. ಶ್ರೀರಾಮುಲು ಪಕ್ಷಕ್ಕೆ ಬರುತ್ತಾರೆ ಎನ್ನುವುದು ವದಂತಿ ಅಷ್ಟೇ. ವಿರೋಧದ ಬಗ್ಗೆ ಮಾತನಾಡಿದರೆ ಹೈಕಮಾಂಡ್ ನೋಟಿಸ್ ನೀಡುತ್ತದೆ. ಆಗ ನಾನು ಉತ್ತರ ನೀಡಬೇಕಾಗುತ್ತದೆ ಎಂದರು. ಶ್ರೀರಾಮುಲು ಅವರನ್ನು ಕಾಂಗ್ರೆಸ್‌ಗೆ ಕರೆತರುವ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಡಿಕೆಶಿ ಶ್ರೀರಾಮುಲು ಅವರನ್ನು ಸಂಪರ್ಕ ಮಾಡಿದ್ದು ನನಗೆ ಗೊತ್ತಿಲ್ಲ. ಇನ್ನೂ ನಾನು ಸಿಎಂ ಆಗುತ್ತೇನೆ ಎಂದು ಹೇಳಿಲ್ಲ. ನಾನು ಸಿಎಂ ಅಭ್ಯರ್ಥಿ ಎಂದು ಹೇಳಿದ್ದೇನೆ. ಸಿಎಂ ಮಾಡುವುದು ಬಿಡುವುದು ಹೈಕಮಾಂಡ್ ಜವಾಬ್ದಾರಿ. ಸರ್ಕಾರ ಅಧಿಕಾರಕ್ಕೆ ತರಲು ಎಲ್ಲರ ಪಾತ್ರ ಇದೆ. ಅದರಲ್ಲಿ ನಾನು ಭಾಗೀದಾರ. ಡಿಕೆಶಿ ಹಾಗೂ ನನ್ನ ನಡುವೆ ಯಾವುದೇ ಮುನಿಸಿಲ್ಲ. ಎಲ್ಲರೂ ಸೇರಿ ಬೆಳಗಾವಿ ಸಮಾವೇಶ ಯಶಸ್ವಿ ಮಾಡಿದ್ದೇವೆ. ಡಿಕೆಶಿ ನಾನು ಒಗ್ಗಟ್ಟಾಗಿ ಇದ್ದೇವೆ. ರಾಜ್ಯಾಧ್ಯಕ್ಷ ಬದಲಾವಣೆ ವಿಚಾರವನ್ನು ದೆಹಲಿಯಲ್ಲಿ ಕೇಳಬೇಕು. ರಾಜ್ಯಾಧ್ಯಕ್ಷ ಬದಲಾವಣೆ ಮಾಡುವಷ್ಟು ನಮ್ಮ ಬಳಿ ಶಕ್ತಿಯಿಲ್ಲ, ಅಧಿಕಾರ ಇಲ್ಲ. ಚರ್ಚೆ ಅನಾವಶ್ಯಕ ಎಂದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಕಿರಣ ರಜಪೂತ್, ಬಸ್ಸು ಕೋಳಿ, ಮಲ್ಲಿಕಾರ್ಜುನ ರಾಶಿಂಗೆ ಸಂಜು ಗಂಡ್ರೋಳಿ ಉಪಸ್ಥಿತರಿದ್ದರು.

## ಕೇಂದ್ರ ಬಜೆಟ್‌ನಲ್ಲಿ ಬೆಂಗಳೂರಿನ ಪ್ರಮುಖ ಯೋಜನೆಗಳಿಗೆ ಅನುದಾನ ನೀಡಿ

# ನಿರ್ಮಲಾ ಸೀತಾರಾಮನ್‌ಗೆ ಡಿಕೆಶಿ ಪತ್ರ

**ಬೆಂಗಳೂರು:** ಬೆಂಗಳೂರಿನ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಟನಲ್ ರಸ್ತೆ, ಡಬಲ್ ಡೆಕ್ಕರ್ ಮೇಲ್ಸೇತುವೆ, ಪಿಆರ್ ಆರ್ ಬಿಸಿನೆಸ್ ಕಾರಿಡಾರ್, ನೀರು ಸರಬರಾಜು ಸೇರಿ ಅನೇಕ ಪ್ರಮುಖ ಯೋಜನೆ ಕೈಗೊಂಡಿದ್ದು, ಈ ಯೋಜನೆಗಳಿಗೆ 2025-26ನೇ ಸಾಲಿನ ಕೇಂದ್ರ ಬಜೆಟ್‌ನಲ್ಲಿ ಅನುದಾನ ನೀಡುವಂತೆ ಡಿಸಿಎಂ ಡಿ.ಕೆ. ಶಿವಕುಮಾರ್ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್‌ಗೆ ಪತ್ರ ಬರೆದಿದ್ದಾರೆ.

ಮುಂಬರುವ ಫೆಬ್ರವರಿ 1ರಂದು ಕೇಂದ್ರ ಸರ್ಕಾರದ ಬಜೆಟ್ ಮಂಡನೆಯಾಗಲಿದ್ದು, ಈ ಬಜೆಟ್‌ನಲ್ಲಿ ಬೆಂಗಳೂರಿನ ಪ್ರಮುಖ ಮೂಲಸೌಕರ್ಯ ಅಭಿವೃದ್ಧಿಗೆ ಅಗತ್ಯವಾಗಿರುವ ಆರ್ಥಿಕ ಸಹಕಾರ ನೀಡುವಂತೆ ಮನವಿ ಮಾಡಿದ್ದಾರೆ.

ಬೆಂಗಳೂರು ಪ್ರಾದೇಶಿಕ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ತಂತ್ರಜ್ಞಾನ ಪ್ರಗತಿ ಹಾಗೂ ಬಂಡವಾಳ ಹೂಡಿಕೆ ಆಕರ್ಷಣೆಯ ತಾಣವಾಗಿ ಬೆಳೆಯುತ್ತಿದೆ. ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆ ಮೂಲಕ ಬೆಂಗಳೂರು ಜಾಗತಿಕ ನಗರವಾಗಿ ರೂಪುಗೊಂಡಿದ್ದು, ದೇಶದ ಯುವಕರಿಗೆ ಉದ್ಯೋಗ ಸೃಷ್ಟಿಸಿ, ಆರ್ಥಿಕ ಪ್ರಗತಿಗೆ ನೆರವಾಗಿದೆ. ಬೆಂಗಳೂರು ನಿರೀಕ್ಷೆಗೂ ಮೀರಿ ಬೆಳೆಯುತ್ತಿರುವ ಪರಿಣಾಮ, ನಗರದ ಜನಸಂಖ್ಯೆ 1.50 ಕೋಟಿ ಸನಿಹದಲ್ಲಿದೆ. ಹೀಗಾಗಿ ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿ ಮಾಡಿ ಬೆಂಗಳೂರನ್ನು ದೇಶದ ಸಿಲಿಕಾನ್ ವ್ಯಾಲಿ ಎಂಬ ಹಿರಿಮೆ ಉಳಿಸಿಕೊಳ್ಳಬೇಕಿದೆ. ಇದಕ್ಕಾಗಿ ರಾಜ್ಯ ಸರ್ಕಾರ ಅನೇಕ ಮಹತ್ವದ ಯೋಜನೆಗಳನ್ನು ರೂಪಿಸಿದ್ದು, ಮುಂಬರುವ ಬಜೆಟ್‌ನಲ್ಲಿ ಈ ಯೋಜನೆಗಳಿಗೆ ಪೂರಕವಾಗಿ ಅನುದಾನ ನೀಡಬೇಕು ಎಂದು ತಿಳಿಸಿದ್ದಾರೆ.

**ಸಂಚಾರ ದಟ್ಟಣೆ ನಿವಾರಣೆಗೆ ಟನಲ್ ರಸ್ತೆ:** ಭೂಮಿಯ ಕೊರತೆಯಿಂದಾಗಿ ಬೆಂಗಳೂರಿನಲ್ಲಿರುವ ಹಾಲಿ ರಸ್ತೆಗಳ



ಅಗಲೀಕರಣ ಕಷ್ಟವಾಗಿದೆ. ಹೀಗಾಗಿ ಸಂಚಾರ ದಟ್ಟಣೆ ನಿವಾರಣೆಗೆ ಟನಲ್ ರಸ್ತೆ ನಿರ್ಮಿಸಲು ರಾಜ್ಯ ಸರ್ಕಾರ ಮುಂದಾಗಿದೆ. ಹೆಬ್ಬಾಳದ ಎಸ್ಟೀಮ್ ಮಾಲ್‌ನಿಂದ ಹೆಚ್ ಎಸ್‌ಆರ್ ಬಡಾವಣೆಯ ಸಿಲ್ಕ್ ಬೋರ್ಡ್ ಜಂಕ್ಷನ್ ವರೆಗೂ ಉತ್ತರ- ದಕ್ಷಿಣ 18.5 ಕಿ.ಮೀ ಟನಲ್ ರಸ್ತೆ ನಿರ್ಮಾಣಕ್ಕೆ 15 ಸಾವಿರ ಕೋಟಿ ರೂ. ವೆಚ್ಚವಾಗಲಿದೆ. ಕೆ.ಆರ್ ಪುರ ವೃತ್ತದಿಂದ ನಾಯಂಡನಹಳ್ಳಿ ಜಂಕ್ಷನ್‌ವರೆಗೂ 28.5 ಕಿ.ಮೀ ಟನಲ್ ರಸ್ತೆ ನಿರ್ಮಾಣಕ್ಕೆ 25 ಸಾವಿರ ಕೋಟಿ ರೂ. ವೆಚ್ಚವಾಗಲಿದೆ. ಈ ಯೋಜನೆಗಾಗಿ ರಾಜ್ಯ ಸರ್ಕಾರ 19,000 ಕೋಟಿ ಮೌಲ್ಯದ ಡಿಪಿಆರ್ ಸಿದ್ಧಪಡಿಸಿ ಸಾರ್ವಜನಿಕ ಚರ್ಚೆಗೆ ಅವಕಾಶ ನೀಡಿದೆ ಎಂದು ತಿಳಿಸಿದ್ದಾರೆ.

**ಮೆಟ್ರೋ ಸೇರಿದಂತೆ ಎಲಿವೇಟೆಡ್ ಕಾರಿಡಾರ್ (ಡಬಲ್ ಡೆಕ್ಕರ್ ಮೇಲ್ಸೇತುವೆ):** ನಮ್ಮ ಮೆಟ್ರೋದ ಮೂರನೇ ಹಂತದ ಹಳದಿ ಮಾರ್ಗದಲ್ಲಿ ರಾಗಿಗುಡ್ಡದಿಂದ ಸಿಲ್ಕ್ ಬೋರ್ಡ್ ಜಂಕ್ಷನ್ ವರೆಗೂ ನಿರ್ಮಿಸಲಾಗಿರುವ ಡಬಲ್ ಡೆಕ್ಕರ್ ಮೇಲ್ಸೇತುವೆ ಯಶಸ್ವಿ ಹಿನ್ನೆಲೆಯಲ್ಲಿ ಮೆಟ್ರೋ ನಾಲ್ಕನೇ ಹಂತದ ಯೋಜನೆಯನ್ನು ಡಬಲ್ ಡೆಕ್ಕರ್ ಮೂಲಕ ನಿರ್ಮಿಸಲು ತೀರ್ಮಾನಿಸಲಾಗಿದೆ. ಜೆ.ಪಿ ನಗರದಿಂದ ಹೆಬ್ಬಾಳದವರೆಗೆ ಹಾಗೂ ಹೊಸಹಳ್ಳಿಯಿಂದ ಕಡಬಗೆರೆವರೆಗೂ 45 ಕಿ.ಮೀ ಉದ್ದದ ಈ ಮಾರ್ಗಕ್ಕೆ ಹೆಚ್ಚುವರಿಯಾಗಿ 8916 ಕೋಟಿ ರೂ. ಅಗತ್ಯವಿದೆ ಎಂದು ಮಾಹಿತಿ ನೀಡಿದ್ದಾರೆ.

**17 ಮೇಲ್ಸೇತುವೆ, 300 ಕಿ.ಮೀ ಬಫರ್ ವಲಯ ರಸ್ತೆ:** ಇವುಗಳ ಜೊತೆಗೆ ನಗರದ ಸಂಚಾರಿ ದಟ್ಟಣೆ ಇರುವ 11 ಜಂಕ್ಷನ್‌ಗಳಲ್ಲಿ 99.50 ಕಿ.ಮೀನಷ್ಟು 17 ಮೇಲ್ಸೇತುವೆ ನಿರ್ಮಾಣ ಅಗತ್ಯವಿದ್ದು, ಇದಕ್ಕಾಗಿ 12 ಸಾವಿರ ಕೋಟಿ ರೂ. ಹಣ ಬೇಕಾಗಿದೆ. ಪ್ರಮುಖ ನದಿ ಹಾಗೂ ದೊಡ್ಡ ಕೆರೆಗಳು ಹಾಗೂ ರಾಜಕಾಲುವೆ ಪಕ್ಕದ ಬಫರ್ ಪ್ರದೇಶಗಳನ್ನು ಒತ್ತುವರಿ ಮಾಡಿಕೊಳ್ಳಲಾಗುತ್ತಿದೆ. ಇದನ್ನು ತಪ್ಪಿಸಲು ಈ ಬಫರ್ ವಲಯದಲ್ಲಿ 300 ಕಿ.ಮೀ ಉದ್ದದ ರಸ್ತೆ ನಿರ್ಮಾಣ ಮಾಡಲು ಉದ್ದೇಶಿಸಲಾಗಿದ್ದು, ಇದಕ್ಕಾಗಿ 3000 ಕೋಟಿ ರೂ. ಅಗತ್ಯವಿದೆ ಎಂದು ತಿಳಿಸಲಾಗಿದೆ.

**ಪಿಆರ್‌ಆರ್ ಹಾಗೂ ನೀರು ಸರಬರಾಜು ಯೋಜನೆ:** ಬೆಂಗಳೂರಿನ ದಟ್ಟಣೆ ನಿಯಂತ್ರಿಸಲು ಖಾಸಗಿ ಹಾಗೂ ಸರ್ಕಾರಿ ಸಹಭಾಗಿತ್ವದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ 8 ಪಥಗಳ, 73.04 ಕಿ.ಮೀ ಉದ್ದದ ಬಿಸಿನೆಸ್ ಕಾರಿಡಾರ್ ನಿರ್ಮಾಣಕ್ಕೆ ಮುಂದಾಗಿದೆ. ಈ ಯೋಜನೆಯಲ್ಲಿ 21,000 ಕೋಟಿ ರೂ. ಭೂಸ್ವಾಧೀನ ಹಾಗೂ 6,000 ಕೋಟಿ ರೂ. ರಸ್ತೆ ನಿರ್ಮಾಣಕ್ಕೆ ಸೇರಿ ಒಟ್ಟು 27 ಸಾವಿರ ಕೋಟಿ ರೂ. ಅಗತ್ಯವಿದೆ. ಇನ್ನು ಕಾವೇರಿ 5ನೇ ಹಂತದ ಕುಡಿಯುವ ನೀರಿನ ಪೂರೈಕೆ ಮೂಲಕ ಬೆಂಗಳೂರಿನ ಕುಡಿಯುವ ನೀರಿನ ಬೇಡಿಕೆ ಪೂರ್ಣಗೊಳಿಸಲಾಗಿದ್ದು, ಹೆಚ್ಚುವರಿ ಬೇಡಿಕೆ ಪೂರೈಸಲು ಕಾವೇರಿ 6ನೇ ಹಂತದ ಯೋಜನೆ ಮೂಲಕ 2028ರ ವೇಳೆಗೆ 500 ಎಂಎಲ್‌ಡಿ ನೀರು ಪೂರೈಸುವ ಉದ್ದೇಶವಿದೆ. ಸಂಸತ್ತಿನಲ್ಲಿ ಕರ್ನಾಟಕವನ್ನು ಪ್ರತಿನಿಧಿಸುವ ತಾವುಗಳು ಬೆಂಗಳೂರಿನ ಈ ಪ್ರಮುಖ ಯೋಜನೆಗಳಿಗೆ ಕೇಂದ್ರ ಬಜೆಟ್‌ನಲ್ಲಿ ಅನುದಾನ ನೀಡಬೇಕು ಎಂದು ಮನವಿ ಮಾಡಿದ್ದಾರೆ.

## ಬಣಗಳ ಗುದ್ದಾಟ : ರಾಮುಲು, ರೆಡ್ಡಿ ಗಲಾಟೆ

# ಆರ್‌ಎಸ್‌ಎಸ್ ಎಂಟ್ರಿ

**ಬೆಂಗಳೂರು:** ಬಣಗಳ ಗುದ್ದಾಟ, ರಾಮುಲು-ರೆಡ್ಡಿ ಗಲಾಟೆಯಿಂದ ಕರ್ನಾಟಕ ಬಿಜೆಪಿಗೆ ಆಗುತ್ತಿರುವ ಡ್ಯಾಮೇಜ್ ಅನ್ನು ಕಡಿಮೆ ಮಾಡಲು ಕೊನೆಗೆ ಆರ್‌ಎಸ್‌ಎಸ್ ಮಧ್ಯಪ್ರವೇಶ ಮಾಡಲು ಮುಂದಾಗಿದೆ.




ರಾಜೇಶ್ ರಾಜೀನಾಮೆಯಿಂದ ತೆರವಾಗಿದ್ದ ರಾಜ್ಯ ಬಿಜೆಪಿ ಸಂಘಟನಾ ಕಾರ್ಯದರ್ಶಿ ನೇಮಕಕ್ಕೆ ಆರ್‌ಎಸ್‌ಎಸ್ ನಿರ್ಧರಿಸಿದೆ. ಕಳೆದ ಒಂದು ವರ್ಷದಿಂದಲೂ ತೆರವಾಗಿದ್ದ ಸ್ಥಾನಕ್ಕೆ ಯಾರನ್ನೂ ನೇಮಕ ಮಾಡಿರಲಿಲ್ಲ. ಬಿಜೆಪಿ ಹೈಕಮಾಂಡ್, ಆರ್‌ಎಸ್ ಎಸ್‌ನಿಂದಲೂ ಗ್ರೀನ್ ಸಿಗ್ನಲ್ ಸಿಕ್ಕಿರಲಿಲ್ಲ.

ರಾಜ್ಯ ಬಿಜೆಪಿಯಲ್ಲಿ ಕಚ್ಚಾಟ ಹೆಚ್ಚಾಗುತ್ತಿದ್ದಂತೆ ರಾಜ್ಯ ಬಿಜೆಪಿ ಸಂಘಟನಾ ಕಾರ್ಯದರ್ಶಿ ನೇಮಕ ಮಾಡಲು ಹೈಕಮಾಂಡ್ ಮುಂದಾಗಿದೆ. ರಾಜ್ಯಾಧ್ಯಕ್ಷ ವಿಜಯೇಂದ್ರ ಬಳಿ ಹೇಳಲು ಸಾಧ್ಯವಾಗದ ದೂರನ್ನ ಸಂಘಟನಾ ಕಾರ್ಯದರ್ಶಿ ಬಳಿ ಹೇಳಿ ಸರಿಪಡಿಸಿಕೊಳ್ಳುವಂತೆ ಹೈಕಮಾಂಡ್ ಸೂಚಿಸುವ ಸಾಧ್ಯತೆಯಿದೆ.

2024ರ ಮೇ ತಿಂಗಳಿನಲ್ಲಿ ಸಂಘಟನಾ ಕಾರ್ಯದರ್ಶಿ ಹುದ್ದೆಯಿಂದ ಜಿ.ವಿ. ರಾಜೇಶ್ ಅವರನ್ನು ದಿಢೀರ್ ಎತ್ತಂಗಡಿ ಮಾಡಿ ರಾಷ್ಟ್ರೀಯ ಸ್ವಯಸೇವಕ ಸಂಘದ ಸಹ ಸಂಸ್ಥೆ 'ಸಾಮರಸ್ಯ'ದ ಹೊಣೆಯನ್ನು ನೀಡಲಾಗಿತ್ತು.

ದಕ್ಷಿಣ ಕನ್ನಡ ಜಿಲ್ಲೆ ಪುತ್ತೂರಿನವರಾದ ರಾಜೇಶ್, ಆರ್‌ಎಸ್‌ಎಸ್ ಪ್ರಚಾರಕರಾಗಿ ಹಲವು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸಿದ್ದರು. 2022ರ ಜುಲೈನಲ್ಲಿ ಅವರನ್ನು 'ಸಂಘ'ವು ಪಕ್ಷದ ಕೆಲಸಕ್ಕೆ ನಿಯೋಜಿಸಿತ್ತು. ಪ್ರಚಾರಕ ಹುದ್ದೆಯಿಂದ ಸಂಘಟನಾ ಕಾರ್ಯದರ್ಶಿಯಂತಹ ಅತ್ಯಂತ ಜವಾಬ್ದಾರಿಯ, ಮಹತ್ವದ ಹುದ್ದೆಗೆ ಬಂದವರ ಅವಧಿ ಸಾಮಾನ್ಯವಾಗಿ ಮೂರು ವರ್ಷ ಇರುತ್ತದೆ. ಅವಧಿಪೂರ್ಣವೇ ಅವರನ್ನು ಬದಲಾವಣೆ ಮಾಡಿರುವುದು ಪಕ್ಷದೊಳಗೆ ಹಲವು ಚರ್ಚೆಯನ್ನು ಹುಟ್ಟುಹಾಕಿತ್ತು.

# ಗ್ರಾಮೀಣ ಜನರಲ್ಲಿ ಪುಸ್ತಕ ಓದುವ ಹವ್ಯಾಸ ಮೂಡಿಸಿ



**ಬೆಂಗಳೂರು:** ಗ್ರಾಮೀಣ ಜನರಲ್ಲಿ ಹಾಗೂ ವಿದ್ಯಾರ್ಥಿ ಸಮೂಹದಲ್ಲಿ ಪುಸ್ತಕಗಳನ್ನು ಓದುವ ಹವ್ಯಾಸ ಮೂಡಿಸಬೇಕು ಎಂದು ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋಷಿಪ್ ಕಾರ್ಯಕ್ರಮದಡಿ ಆಯ್ಕೆಗೊಂಡು, ಕಲ್ಯಾಣ ಕರ್ನಾಟಕ ಪ್ರದೇಶದ ವಿವಿಧ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 44 ಮಂದಿ ಫೆಲೋಗಳೊಂದಿಗೆ ಏರ್ಪಡಿಸಲಾಗಿದ್ದ ವಿಚಾರ ವಿನಿಮಯ ಕಾರ್ಯಕ್ರಮದಲ್ಲಿ ಸಚಿವರು ಜ.24ರಂದು ಬೆಂಗಳೂರಿನ ವಿಕಾಸಸೌಧದಲ್ಲಿ ಮಾತನಾಡಿದರು.

ಆರ್ಥಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದಿರುವ ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಯ ದೃಷ್ಟಿಯಿಂದ ಫೆಲೋಗಳು ಸೇತುವೆಗಳಂತೆ ಕಾರ್ಯನಿರ್ವಹಿಸಬೇಕು. ಈ ಪ್ರದೇಶದ ಅಭಿವೃದ್ಧಿಗಾಗಿ ಸರ್ಕಾರ ರಚಿಸಿರುವ ಗೋವಿಂದರಾವ್ ಸಮಿತಿಗೆ ಪೂರಕ ಅಂಕಿ ಅಂಶಗಳ ದತ್ತಾಂಶಗಳನ್ನು ನೀಡುವ ದೃಷ್ಟಿಯಲ್ಲಿಯೂ ಫೆಲೋಗಳು ಕಾರ್ಯಪ್ರವೃತ್ತರಾಗಬೇಕೆಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ಗ್ರಾಮ ಪಂಚಾಯತಿಗಳ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಜೊತೆ ನಿಕಟ ಸಂಪರ್ಕ ಇರಿಸಿಕೊಂಡು ಗ್ರಾಮ ಪಂಚಾಯತಿಗಳಲ್ಲಿ ಇರುವ ನ್ಯೂನತೆಗಳನ್ನು ಸರಿಪಡಿಸಲು ವರದಿಯನ್ನು ಸಿದ್ಧಪಡಿಸಿ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಬೇಕು. ಆ ಮೂಲಕ ಗ್ರಾಮ ಪಂಚಾಯತಿಗಳ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಸಚಿವರು ಫೆಲೋಗಳಿಗೆ ಸೂಚಿಸಿದರು.

ರಾಜೀವ್ ಗಾಂಧಿ ಗ್ರಾಮೀಣಾಭಿವೃದ್ಧಿ ಫೆಲೋಷಿಪ್ ಕಾರ್ಯಕ್ರಮದಡಿ 2024ರ ಜೂನ್ ತಿಂಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ 44 ಮಂದಿ ಫೆಲೋಗಳನ್ನು ಆಯ್ಕೆ ಮಾಡಿ ಕಲ್ಯಾಣ ಕರ್ನಾಟಕ ಭಾಗದ ವಿವಿಧ ತಾಲೂಕುಗಳಿಗೆ ನಿಯೋಜಿಸಲಾಗಿದೆ. ಸ್ಥಳೀಯ ಆಡಳಿತವನ್ನು ಬಲಪಡಿಸಲು ಫೆಲೋಗಳು ವಿವಿಧ ಚಟುವಟಿಕೆಗಳಲ್ಲಿ ನಿರತರಾಗಿದ್ದಾರೆ.

ಕಲ್ಯಾಣ ಕರ್ನಾಟಕ ಭಾಗದ ವಿವಿಧ ತಾಲೂಕುಗಳಿಗೆ ನಿಯೋಜನೆಗೊಂಡಿರುವ ಫೆಲೋಗಳು ಕಳೆದ ಐದು ತಿಂಗಳಲ್ಲಿ ಮಾಡಿರುವ ಕಾರ್ಯಚಟುವಟಿಕೆಗಳನ್ನು ಸಭೆಯಲ್ಲಿ ಸಚಿವರ ಗಮನಕ್ಕೆ ತರಲಾಯಿತು. 62 ಪುಸ್ತಕ ಗೂಡುಗಳ ಆರಂಭ, 39 ಅರಿವು ಕೇಂದ್ರಗಳ ಪುನರಾರಂಭ, ವೃತ್ತಪತ್ರಿಕೆಗಳೊಂದಿಗೆ 56 ಅರಿವು ಕೇಂದ್ರಗಳ ಆರಂಭ, 116 ಕೂಸಿನಮನೆ ಪುನರಾರಂಭ, 66 ಕೂಸಿನ ಮನೆಗಳ ಮೂಲಭೂತ ಸೌಲಭ್ಯ ಸುಧಾರಣೆ, 95 ಕೂಸಿನ ಮನೆಗಳ ನಿರ್ವಹಣೆಯಲ್ಲಿ ಸುಧಾರಣೆ, 86 ಕೂಸಿನಮನೆಗಳಲ್ಲಿ ಪೌಷ್ಟಿಕ ಆಹಾರ ವಿತರಣೆಗೆ ಚಾಲನೆ, 61 ಗ್ರಾಮ ಪಂಚಾಯತಿಗಳಲ್ಲಿ ತ್ಯಾಜ್ಯ ಸಂಗ್ರಹ, ವಿಂಗಡಣೆ ಹಾಗೂ ವಿಲೇವಾರಿಗೆ ಚಾಲನೆ, 197 ಗ್ರಾಮ ಪಂಚಾಯತಿಗಳ ಸರ್ವ ಸದಸ್ಯರ ಸಭೆ ಏರ್ಪಾಟು, 104 ಗ್ರಾಮ ಪಂಚಾಯತಿಗಳ ಸಭಾ ನಡಾವಳಿ ಪಿ2.0 ತಂತ್ರಾಂಶದಲ್ಲಿ ಅಳವಡಿಕೆ, 508 ಗ್ರಾಮ ಪಂಚಾಯತಿಗಳಲ್ಲಿ ಉಪ-ಸಮಿತಿಗಳ ರಚನೆ ಮುಂತಾದ ಸುಧಾರಣ ಕಾರ್ಯ ಫೆಲೋಗಳು ಸಾಧ್ಯ ಮಾಡಿರುವುದನ್ನು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಉಮಾ ಮಹಾದೇವನ್ ಮತ್ತು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತರಾದ ಡಾ.ಅರುಂಧತಿ ಚಂದ್ರಶೇಖರ್ ಉಪಸ್ಥಿತರಿದ್ದರು.

## ಬಡ್ಡಿ ಹಣಕ್ಕೆ ಮನಬಂದಂತೆ ಹಲ್ಲೆ

# ಬೆತ್ತಲೆಗೊಳಿಸಿ ಚಿತ್ರಹಿಂಸೆ

**ಗದಗ:** ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್ ಹಾವಳಿ ಬೆನ್ನಲ್ಲೇ, ಮೀಟರ್ ಬಡ್ಡಿ ದಂಧೆಕೋರರ ಹಾವಳಿ ಹೆಚ್ಚಾಗಿದೆ. 1 ಲಕ್ಷ ರೂ ಸಾಲದ ಬಡ್ಡಿ ನೀಡದ್ದಕ್ಕೆ ಮನಬಂದಂತೆ ಹಲ್ಲೆ ಮಾಡಿರುವ ಅಮಾನವೀಯ ಘಟನೆ ನಗರದ ಬೆಟಗೇರಿಯಲ್ಲಿ ನಡೆದಿದೆ.



ದಶರಥ ಬಳ್ಳಾರಿ ಮೇಲೆ ನಾಲ್ಕು ಜನ ಸೇರಿ ಮಾರಣಾಂತಿಕ ಮನಬಂದಂತೆ ಹಲ್ಲೆಮಾಡಿದ್ದಾರೆ. ಬೆಟಗೇರಿ ನಿವಾಸಿ ದಶರಥ ಅವರು ಮಂಜುನಾಥ ಹಂಸನೂರ ಎಂಬಾತನ ಬಳಿ ಎರಡು ವರ್ಷದ ಹಿಂದೆ 1 ಲಕ್ಷ ರೂ.ಹಣ ಪಡೆದಿದ್ದರು. ಈ ಸಾಲಕ್ಕೆ ಅವರಿಗೆ ಬಡ್ಡಿ ಸಹ ನೀಡುತ್ತಾ ಬಂದಿದ್ದರು.

ಇತ್ತೀಚೆಗೆ ಕೆಲಸ ಇಲ್ಲದಕ್ಕೆ ಬಡ್ಡಿ ಹಣ ತುಂಬಲು ವಿಳಂಬ ಮಾಡಿದ್ದಾರೆ. ವಿಳಂಬ ಮಾಡಿದ್ದಕ್ಕೆ ಜ.21 ರಂದು ರಾತ್ರಿ ದಶರಥ ಅವರನ್ನು ಸೆಟಲ್ಮೆಂಟ್ ನಗರದ ಮನೆಯೊಂದರಲ್ಲಿ ಕರೆದೊಯ್ದು ಚಿತ್ರ ಹಿಂಸೆ ನೀಡಿದ್ದಾರೆ.

ಮಂಜುನಾಥ ಹಂಸನೂರ, ಮಹೇಶ್ ಹಂಸನೂರ, ಡಿಸ್ಕವರಿ ಮಂಜು ಹಾಗೂ ಹನುಮಂತ ಕ್ರೌರ್ಯ ಮೆರೆದಿದ್ದಾರೆ. ದಶರಥ ಅವರನ್ನು ಕೂಡಿಹಾಕಿ ಬಟ್ಟೆ ಬಿಚ್ಚಿ, ಬಾಯಿ ಬಟ್ಟೆ ತುಂಬಿ ಕುಡಿಯುತ್ತಾ ರಾತ್ರಿ 10 ಗಂಟೆಗೆ ಹೊಡೆಯಲು ಆರಂಭಿಸಿದವರು ತಡರಾತ್ರಿ 3 ಗಂಟೆಯವರೆಗೆ ಹಲ್ಲೆ ಮಾಡಿದ್ದಾರೆ. ಬೆಲ್ಟ್, ಕೇಬಲ್ ವಯರ್, ಲಾಠಿಯಿಂದ ಮೈ, ಕೈ, ಕಾಲು, ಬೆನ್ನು, ಮುಖ, ತಲೆ ಎಲ್ಲಾ ಬಾಸುಂಡೆ ಬರುವಂತೆ ಚಿತ್ರ ಹಿಂಸೆ ಕೊಟ್ಟಿದ್ದಾರೆ.

ನಸುಕಿನ ಜಾವ 3 ಗಂಟೆ ನಂತರ ಅವರನ್ನು ತಳ್ಳಿ ಬಾಗಿಲು ಹಾಕಿಕೊಂಡು ದಶರಥ ಮನೆಗೆ ಬಂದಿದ್ದಾರೆ. ಈಗ ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಸಂಬಂಧ ಜ.23 ರಂದು ಬೆಟಗೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದಂಧೆಕೋರರ ಟಾರ್ಚರ್

# ಯುವಕ ನೇಣಿಗೆ

**ಮಂಡ್ಯ:** ಮೀಟರ್ ಬಡ್ಡಿ ದಂಧೆಕೋರರ ಕಿರುಕುಳದಿಂದ ಯುವಕನೊಬ್ಬ ನೇಣಿಗೆ ಶರಣಾದ ಘಟನೆ ಕೆ.ಆರ್ .ಪೇಟೆಯ ವಳಗೆರೆ ಮೆಣಸ ಗ್ರಾಮದಲ್ಲಿ ನಡೆದಿದೆ.



ಗ್ರಾಮದ ಲೋಹಿತ್ (35) ಮೃತ ದುರ್ದೈವಿ ಎಂದು ತಿಳಿದು ಬಂದಿದೆ. ಆತ ಖಾಸಗಿ ವ್ಯಕ್ತಿಗಳಿಂದ ಮೀಟರ್ ಬಡ್ಡಿಗೆ ಸಾಲ ಪಡೆದಿದ್ದ. ಸುಮಾರು 30 ಲಕ್ಷ ರೂ. ಸಾಲ ಮಾಡಿಕೊಂಡಿದ್ದ. ಅಲ್ಲದೇ ಲಕ್ಷ ಲಕ್ಷ ಬಡ್ಡಿ ಕೂಡ ಕಟ್ಟಿದ್ದ. ಆದರೂ ಮೀಟರ್ ಬಡ್ಡಿ ದಂಧೆಕೋರರ ಹಾವಳಿ ತಪ್ಪಿರಲಿಲ್ಲ.

ಯುವಕ ಮೈಕ್ರೋ ಫೈನಾನ್ಸ್‌ನಲ್ಲಿ ಸಾಲ ಪಡೆದಿರುವ ಬಗ್ಗೆ ಶಂಕೆ ಇದೆ. ಆತ ಮೂರು ದಿನದ ಹಿಂದೆ ಕೆ.ಆರ್ .ಪೇಟೆ ಪಟ್ಟಣದ ಪೊಲೀಸ್ ಠಾಣೆಗೆ ದೂರು ಸಲ್ಲಿಸಲು ಮುಂದಾಗಿದ್ದ. ಬಳಿಕ ದೂರು ನೀಡದೆ ಗ್ರಾಮಸ್ಥರ ಸಮ್ಮುಖದಲ್ಲಿ ಸಮಸ್ಯೆ ಬಗೆಹರಿಸಿಕೊಳ್ಳುತ್ತೇವೆ ಎಂದು ವಾಪಸ್ಸಾಗಿದ್ದ.

ಇದೀಗ ಮೈಕ್ರೋ ಫೈನಾನ್ಸ್ ಹಾಗೂ ಮೀಟರ್ ಬಡ್ಡಿ ದಂಧೆಕೋರರ ಕಾಟಕ್ಕೆ ಬೇಸತ್ತು ನೇಣಿಗೆ ಶರಣಾಗಿದ್ದಾನೆ. ಕೆ.ಆರ್.ಪೇಟೆ ಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಪ್ರಕರಣ ನಡೆದಿದೆ.

## ತಾರಸಿಯಲ್ಲಿ ಓದುತ್ತಾ ಕುಳಿತಿದ್ದ ವಿದ್ಯಾರ್ಥಿನಿಯನ್ನು

# ತಳ್ಳಿ ಹತ್ಯೆ ಮಾಡಿದ ಮಂಗಗಳು

**ಬಿಹಾರ:** ತಾರಸಿಯಲ್ಲಿ ಓದುತ್ತಾ ಕುಳಿತಿದ್ದ ವಿದ್ಯಾರ್ಥಿನಿಯನ್ನು ಮಂಗಗಳು ತಳ್ಳಿ ಬೀಳಿಸಿ ಹತ್ಯೆ ಮಾಡಿರುವ ಘಟನೆ ಬಿಹಾರದಲ್ಲಿ ನಡೆದಿದೆ. ವಿದ್ಯಾರ್ಥಿನಿ 10ನೇ ತರಗತಿ ಓದುತ್ತಿದ್ದಳು, ಪರೀಕ್ಷೆ ಹತ್ತಿರದಲ್ಲಿರುವುದರಿಂದ ತಾರಸಿಯಲ್ಲಿ ಓದುತ್ತಾ ಕುಳಿತಿರುವಾಗ ಮಂಗಗಳ ಗುಂಪೊಂದು ಆಕೆಯನ್ನು ತಳ್ಳಿ ಬೀಳಿಸಿ ಹತ್ಯೆ ಮಾಡಿರುವ ಘಟನೆ ಇದಾಗಿದೆ. ಮೃತಳ ಹೆಸರು ಪ್ರಿಯಾ ಕುಮಾರ್.



ಕೋತಿಗಳ ಗುಂಪು ತಾರಸಿಯಲ್ಲಿ ವಿದ್ಯಾರ್ಥಿನಿಗೆ ಕಾಟ ಕೊಡಲು ಶುರು ಮಾಡಿದ್ದವು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಪ್ರಿಯಾ ತುಂಬಾ ಗಾಬರಿಯಾದಳು, ಅವಳು ಓಡಲು ಸಾಧ್ಯವಾಗಲಿಲ್ಲ. ಅಕ್ಕಪಕ್ಕದ ಮನೆಯವರು ಆಕೆಯನ್ನು ನೋಡಿದ ತಕ್ಷಣ ಕೂಗಲು ಶುರು ಮಾಡಿದರು. ಆಕೆ ಮೆಟ್ಟಿಲುಗಳ ಕಡೆಗೆ ಓಡಿದ್ದಳು. ಆದರೆ ಕೋತಿಗಳು ಆಕೆಯ ಮೇಲೆ ಆಕ್ರಮಣ ಮಾಡಿ ಆಕೆಯನ್ನು ಮೇಲಿಂದ ಕೆಳಗೆ ತಳ್ಳಿದ್ದವು.

ಆಕೆಯ ತಲೆಯ ಹಿಂಭಾಗಕ್ಕೆ ತೀವ್ರ ಪೆಟ್ಟಾಗಿತ್ತು, ಜತೆಗೆ ದೇಹದ ಇತರೆ ಭಾಗಗಳಲ್ಲೂ ಗಂಭೀರ ಗಾಯಗಳಾಗಿದ್ದವು, ತಕ್ಷಣವೇ ಪ್ರಜ್ಞೆ ತಪ್ಪಿದ್ದಳು. ಕೂಡಲೇ ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ. ಬಾಲಕಿಯ ಕುಟುಂಬಸ್ಥರು ಮರಣೋತ್ತರ ಪರೀಕ್ಷೆ ನಡೆಸಲು ನಿರಾಕರಿಸಿದ್ದಾರೆ ಎಂದು ಭಗವಾನ್‌ಪುರ ಪೊಲೀಸ್ ಠಾಣೆಯ ಸ್ಟೇಷನ್ ಹೌಸ್ ಆಫೀಸರ್ (ಎಸ್‌ಎಚ್‌ಒ) ಸುಜೀತ್ ಕುಮಾರ್ ಚೌಧರಿ ತಿಳಿಸಿದ್ದಾರೆ.

ನಾವು ತನಿಖೆಗಾಗಿ ಅಲ್ಲಿಗೆ ಹೋದೆವು. ಕುಟುಂಬ ಸದಸ್ಯರು ಬಾಲಕಿಯನ್ನು ಸದರ್ ಆಸ್ಪತ್ರೆಗೆ ದಾಖಲಿಸಿದ್ದರು, ಅಲ್ಲಿ ವೈದ್ಯರು ಗಂಭೀರ ಗಾಯಗಳಿಂದ ಸಾವನ್ನಪ್ಪಿದ್ದಾರೆ ಎಂದು ತಿಳಿಸಿರುವುದಾಗಿ ಪೊಲೀಸರು ಹೇಳಿದ್ದಾರೆ.

ಕುಟುಂಬ ಸದಸ್ಯರು ಈ ಪ್ರಕರಣದಲ್ಲಿ ಮರಣೋತ್ತರ ಪರೀಕ್ಷೆ ನಡೆಸಲು ನಿರಾಕರಿಸಿದರು ಮತ್ತು ಯಾರ ವಿರುದ್ಧವೂ ಯಾವುದೇ ದೂರು ದಾಖಲಿಸಿಲ್ಲ, ಎಂದು ಚೌಧರಿ ತಿಳಿಸಿದ್ದಾರೆ. ಕೆಲ ದಿನಗಳಿಂದ ಈ ಪ್ರದೇಶದಲ್ಲಿ ಮಂಗಗಳು ಅವಾಂತರ ಸೃಷ್ಟಿಸುತ್ತಿವೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

## 76ನೇ ಗಣರಾಜ್ಯೋತ್ಸವ

ಮೆಟ್ರೋ ಹಂತ-2ಎ ತಮ್ಮ ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ ಕೃಷ್ಣ ರಾಜಪುರದವರೆಗೆ 19.75 ಕಿಮೀ ಮತ್ತು ಹಂತ 2ಬಿ ರಲ್ಲಿ ಕೆ.ಆರ್ ಪುರಂದಿಂದ ವಿಮಾನ ನಿಲ್ದಾಣದವರೆಗೆ 38.44 ಕಿಮೀ ಮೆಟ್ರೋ, ಅಂದಾಜು 14788 ಕೋಟಿ ವರ್ಷದ ವೆಚ್ಚದ ಕಾಮಗಾರಿ ನಡೆಯುತ್ತಿದೆ. ಡಾ. ಕೆ ಶಿವರಾಮ ಕಾರಂತ ಹಂತ 1 ಬಡಾವಣೆ ನಿರ್ಮಾಣ ಕಾರ್ಯ ವೇಗವಾಗಿ ನಡೆಯುತ್ತಿದೆ ಎಂದು ಹೇಳಿದ್ದಾರೆ.

ಕೆಎಸ್‌ಆರ್‌ಟಿಸಿ ನೌಕರರಿಗೆ 1 ಕೋಟಿ ರೂ. ಮೊತ್ತದ ಅಪಘಾತ ವಿಮಾ ಯೋಜನೆ ಒದಗಿಸಲಾಗಿದೆ. ಬೆಂಗಳೂರಲ್ಲಿ 2519 ರಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳನ್ನು ಪೊಲೀಸ್ ಮಾರ್ಷಲ್ ಆಗಿ ನೇಮಕವಾಗಿದೆ. ಸೈಬರ್ ಹಾವಳಿ ತಡೆಗಟ್ಟಲು ಕ್ರಮ ತೆಗೆದುಕೊಳ್ಳಲಾಗಿದೆ. ಎಲ್ಲ ಶಾಲಾ ಮಕ್ಕಳಿಗೆ ವಾರದ ಆರು ದಿನದಲ್ಲಿ ಮೊಟ್ಟೆ ವಿತರಣೆ ಮಾಡಲಾಗಿದೆ. ಗಾಂಧಿ ಭಾರತ್ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ. ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ 5 ಲಕ್ಷ ಬೆಳೆ ಸಾಲ ನೀಡಲಾಗುತ್ತಿದೆ ಎಂದರು.

ಮತ್ಸ್ಯ ಆಶಾಕಿರಣ ಯೋಜನೆ ಅಡಿ ಮೀನುಗಾರರಿಗೆ ನೀಡಲಾಗುವ ಪರಿಹಾರ ಮೊತ್ತ 3 ಸಾವಿರಕ್ಕೆ ಏರಿಸಲಾಗಿದೆ. ರಾಜ್ಯದ 8.90 ಲಕ್ಷ ಹಾಲು ಉತ್ಪಾದಕರಿಗೆ 1124 ಕೋಟಿ ಪ್ರೋತ್ಸಾಹ ಧನ ನೀಡಲಾಗಿದೆ ಎಂದು ತಿಳಿಸಿದರು.

## ಪ್ರಧಾನಿ, ಸಿಎಂ

**ಸಿಎಂ ಸಿದ್ದರಾಮಯ್ಯ ಎಕ್ಸ್ ಖಾತೆ ಸಂದೇಶ:** ನಾಡಿನ ಸಮಸ್ತ ಬಂಧುಗಳಿಗೆ 76ನೇ ಗಣರಾಜ್ಯೋತ್ಸವದ ಹಾರ್ದಿಕ ಶುಭಾಶಯಗಳು? ಸಂವಿಧಾನ ಜಾರಿಗೊಳಿಸಿ ಪ್ರಜಾಪ್ರಭುತ್ವ ರಾಷ್ಟ್ರ ಎಂದು ಘೋಷಣೆ ಮಾಡಿಕೊಂಡ 75 ವರ್ಷಗಳ ನಂತರವೂ ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ಉಳಿಸಲು ಹೋರಾಟ ನಡೆಸಬೇಕಾದ ವಿಷಾದನೀಯ ಸ್ಥಿತಿಯಲ್ಲಿ ಗಣರಾಜ್ಯೋತ್ಸವವನ್ನು ನಾವು ಆಚರಿಸುತ್ತಿದ್ದೇವೆ. ಇದು ಗತವೈಭವದಲ್ಲಿ ಮೈಮರೆಯದೆ ವರ್ತಮಾನದ ವಾಸ್ತವಗಳಿಗೆ ಮುಖಾಮುಖಿಯಾಗುವ ಕಾಲ. ಕಾರ್ಯಾಂಗ, ಶಾಸಕಾಂಗ

### ಮೊದಲನೇ ಪುಟದಿಂದ...

ಮತ್ತು ನ್ಯಾಯಾಂಗಗಳೆಂಬ ಸಂವಿಧಾನದ ಮೂರು ಮುಖ್ಯ ಆಧಾರ ಸ್ಥಂಭಗಳು ಭದ್ರವಾಗಿದ್ದು ಆರೋಗ್ಯಕರವಾಗಿ ಕಾರ್ಯನಿರ್ವಹಿಸಿದರೆ ಮಾತ್ರ ಸಂವಿಧಾನದ ಪಾಲನೆಯಾಗುತ್ತಿದೆ ಮತ್ತು ಪ್ರಜಾಪ್ರಭುತ್ವ ಸುರಕ್ಷಿತವಾಗಿದೆ ಎಂದು ಅರ್ಥ.

ಸಂವಿಧಾನ ಜಾರಿಗೊಳಿಸಿ ಪ್ರಜಾಪ್ರಭುತ್ವ ರಾಷ್ಟ್ರ ಎಂದು ಘೋಷಣೆ ಮಾಡಿಕೊಂಡ 75 ವರ್ಷಗಳ ನಂತರವೂ ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ಉಳಿಸಲು ಹೋರಾಟ ನಡೆಸಬೇಕಾದ ವಿಷಾದನೀಯ ಸ್ಥಿತಿಯಲ್ಲಿ ಗಣರಾಜ್ಯೋತ್ಸವವನ್ನು ನಾವು ಆಚರಿಸುತ್ತಿದ್ದೇವೆ.

ಕಟುವಾದ ಸತ್ಯ ಏನೆಂದರೆ ಸರ್ವಾಧಿಕಾರದ ದಂಡದಡಿ ನಮ್ಮ ಕಾರ್ಯಾಂಗ ಕರ್ತವ್ಯಭ್ರಷ್ಟಗೊಳ್ಳುತ್ತಿದೆ, ಶಾಸಕಾಂಗವನ್ನು ಖರೀದಿಸಲಾಗುತ್ತಿದೆ ಮತ್ತು ನ್ಯಾಯಾಂಗಕ್ಕೆ ಬೆದರಿಕೆ ಒಡ್ಡಿ ನಿಯಂತ್ರಣದಲ್ಲಿ ಇಟ್ಟುಕೊಳ್ಳುವ ಷಡ್ಯಂತ್ರ ನಡೆಯುತ್ತಿದೆ. ಕಾರ್ಯಾಂಗ, ಶಾಸಕಾಂಗ ಮತ್ತು ನ್ಯಾಯಾಂಗಗಳೆಂಬ ಆಧಾರ ಸ್ಥಂಭಗಳು ದುರ್ಬಲಗೊಂಡು ಶಕ್ತಿಹೀನವಾದಾಗ ಸಂವಿಧಾನವೇ ಅಪ್ರಸ್ತುತವಾಗಿ ಪ್ರಜಾಪ್ರಭುತ್ವ ವ್ಯವಸ್ಥೆ ಬುಡಮೇಲಾಗುವ ಸಾಧ್ಯತೆಗಳಿವೆ. ಇಂತಹದ್ದೊಂದು ಅಪಾಯದ ಸ್ಥಿತಿಯಲ್ಲಿ ಭಾರತ ಇಂದು ನಿಂತಿದೆ. ಪ್ರಜಾಪ್ರಭುತ್ವವನ್ನು ಉಳಿಸುವ ದೊಡ್ಡ ಜವಾಬ್ದಾರಿ ಪ್ರತಿಯೊಬ್ಬ ಪ್ರಜೆಯ ಹೆಗಲ ಮೇಲಿದೆ.

ಜಾತಿ, ಮತ, ಪಂಥ, ಪ್ರದೇಶದ ಭೇದಗಳನ್ನು ಮರೆತು ಇಡೀ ದೇಶ ಒಂದಾಗಿ ಹೊರಗಿನ ಶತ್ರುಗಳನ್ನು ಹೊಡೆದೋಡಿಸಲು ಹೇಗೆ ಸ್ವಾತಂತ್ರ್ಯಹೋರಾಟ ನಡೆಸಲಾಯಿತೋ, ಅಂತಹದ್ದೇ ಒಂದು ಹೋರಾಟವನ್ನು ದೇಶದೊಳಗಿನ ಸಂವಿಧಾನ ವಿರೋಧಿ ಶತ್ರುಗಳ ವಿರುದ್ಧ ನಡೆಸಬೇಕಾಗಿದೆ. ಇದಕ್ಕಾಗಿ ಎರಡನೇ ಸ್ವಾತಂತ್ರ್ಯ ಹೋರಾಟ ನಡೆಯದೆ ಹೋದರೆ ಮುಂದಿನ ಪೀಳಿಗೆಗೆ ಬದುಕುಳಿಯಲು ಪ್ರಜಾಪ್ರಭುತ್ವ ಇರುವುದಿಲ್ಲ. ಇದೊಂದು ಜೀವನ್ಮರಣದ ಪ್ರಶ್ನೆಯಾಗಿದ್ದು, ಗಣರಾಜ್ಯೋತ್ಸವದ ದಿನವಾದ ಇಂದು ನಾವೆಲ್ಲರೂ ಒಗ್ಗೂಡಿ ದೃಢಚಿತ್ತದಿಂದ ಸಂವಿಧಾನವನ್ನು ಉಳಿಸುವ ಸಂಕಲ್ಪ ಮಾಡಬೇಕಾಗಿದೆ. ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ಉಳಿಸುವ ಮೂಲಕ ನಮ್ಮ ಭಾರತವನ್ನು ರಕ್ಷಿಸುವ ಹೋರಾಟಕ್ಕೆ ನಮಗಿರುವ ಅಸ್ತ್ರಗಳೆಂದರೆ ಗಾಂಧೀಜಿ ಮತ್ತು ಅಂಬೇಡ್ಕರ್ ಅವರ ಚಿಂತನೆಗಳು.

ಈ ಹಿನ್ನೆಲೆಯಲ್ಲಿ ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿದ್ದ ನಮ್ಮ ಕಾಂಗ್ರೆಸ್ ಪಕ್ಷ ಜೈ ಬಾಪು, ಜೈ ಭೀಮ್ ಮತ್ತು ಜೈ ಸಂವಿಧಾನ ಎಂಬ ಅಭಿಯಾನವನ್ನು ಪ್ರಾರಂಭಿಸಿದೆ. ನಾಡ ಬಾಂಧವರೆಲ್ಲರೂ ಪಕ್ಷ, ಪಂಥ, ಜಾತಿ-ಧರ್ಮಗಳ ಎಲ್ಲೆಯನ್ನು ಮೀರಿ ಈ ಅಭಿಯಾನದಲ್ಲಿ ಕೈ ಜೋಡಿಸಬೇಕೆಂದು ಮನವಿ ಮಾಡುತ್ತೇನೆ. ಮತ್ತೊಮ್ಮೆ ನಾಡಬಾಂಧವರಿಗೆಲ್ಲ ಗಣರಾಜ್ಯೋತ್ಸವದ ಶುಭಾಶಯಗಳು. ಜೈ ಹಿಂದ್.. ಜೈ ಬಾಪು, ಜೈ ಭೀಮ್, ಜೈ ಸಂವಿಧಾನ್ ಎಂದು ಬರೆದುಕೊಂಡಿದ್ದಾರೆ.

## ಮಿಲಿಟರಿ ಶಕ್ತಿ ಅನಾವರಣ

**ಹೇಗಿದೆ ಭದ್ರತೆ?:** ಪರೇಡ್‌ನಲ್ಲಿ 15 ರಾಜ್ಯಗಳು, ಕೇಂದ್ರಾಳಿತ ಪ್ರದೇಶಗಳು ಹಾಗೂ ಕೇಂದ್ರ ಸರ್ಕಾರದ ವಿವಿಧ ಸಚಿವಾಲಯಗಳಿಂದ ಸ್ತಬ್ಧಚಿತ್ರ ಪ್ರದರ್ಶನ, ಹತ್ತು ಸಾವಿರಕ್ಕೂ ಅಧಿಕ ವಿಶೇಷ ಅತಿಥಿಗಳು, ಒಂದು ಲಕ್ಷಕ್ಕೂ ಅಧಿಕ ಮಂದಿ ಸಾಕ್ಷಿಯಾಗಲಿದ್ದಾರೆ. ಹಾಗಾಗಿ ಕರ್ತವ್ಯ ಪಥದ ಸುತ್ತ ಭದ್ರತೆಯನ್ನು ಹೆಚ್ಚಿಸಲಾಗಿದ್ದು, 15,000ಕ್ಕೂ ಅಧಿಕ ಪೊಲೀಸರು, 70 ಪ್ಯಾರಾ ಮಿಲಿಟರಿ ಕಂಪನಿಗಳ ನಿಯೋಜನೆ ಮಾಡಲಾಗಿದೆ.

ಒಟ್ಟು 6 ಹಂತಗಳಲ್ಲಿ ಭದ್ರತೆಯನ್ನು ಮಾಡಿಕೊಳ್ಳಲಾಗಿದ್ದು, ಎಲ್ಲ ಕಡೆಗಳಲ್ಲಿಯೂ ಸಿಸಿಟಿವಿ ಕ್ಯಾಮೆರಾ, 500 ಎಐ ಕ್ಯಾಮೆರಾಗಳ ಅಳವಡಿಸಲಾಗಿದೆ. 40 ಅಧಿಕ ಕಂಟ್ರೋಲ್ ರೂಂಗಳಿಂದ ಇಡೀ ಕಾರ್ಯಕ್ರಮದ ಮೇಲೆ ಹದ್ದಿನ ಕಣ್ಣು ಇರಿಸಲಾಗಿದೆ.

**139 ಸಾಧಕರಿಗೆ ಪದ್ಮ ಪ್ರಶಸ್ತಿ:** ಗಣರಾಜ್ಯೋತ್ಸವದ ಮುನ್ನಾದಿನ ಪದ್ಮ ಪ್ರಶಸ್ತಿಗಳನ್ನು ಘೋಷಿಸಲಾಯಿತು. ಇದರ ಅಡಿಯಲ್ಲಿ, ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ ಪ್ರಶಸ್ತಿಗಳಿಗೆ ಪಾತ್ರರಾಗುವ ವ್ಯಕ್ತಿಗಳ ಹೆಸರನ್ನು ಘೋಷಿಸಲಾಯಿತು. ಈ ಬಾರಿ ರಾಷ್ಟ್ರಪತಿಗಳು 139 ಪದ್ಮ ಪ್ರಶಸ್ತಿಗಳನ್ನು ಅನುಮೋದಿಸಿದ್ದಾರೆ.

ಪಟ್ಟಿಯಲ್ಲಿ ಏಳು ಪದ್ಮವಿಭೂಷಣ ಮತ್ತು 19 ಪದ್ಮಭೂಷಣ ಪ್ರಶಸ್ತಿಗಳು ಸೇರಿವೆ. ಇದಲ್ಲದೇ, 113 ಪದ್ಮಶ್ರೀ ಪ್ರಶಸ್ತಿಗಳನ್ನು ಸಹ ಘೋಷಿಸಲಾಗಿದೆ. ಪ್ರಶಸ್ತಿ ಪುರಸ್ಕೃತರಲ್ಲಿ 23 ಮಹಿಳೆಯರು ಸೇರಿದ್ದಾರೆ. ಈ ಪಟ್ಟಿಯಲ್ಲಿ 10 ವಿದೇಶಿಯರು, ಓಐಏಗಳು, ಪಿಐಓಗಳು, ಒಸಿಐ ವರ್ಗದ ವ್ಯಕ್ತಿಗಳು ಸೇರಿದ್ದಾರೆ. ಅದೇ ಸಮಯದಲ್ಲಿ, 13 ಮರಣೋತ್ತರ ಪ್ರಶಸ್ತಿಗಳನ್ನು ಸಹ ಘೋಷಿಸಲಾಗಿದೆ. ಇದರಲ್ಲಿ ಭೋಜ್‌ಪುರಿ ಗಾಯಕಿ ಶಾರದಾ ಸಿನ್ಹಾ (ಮರಣೋತ್ತರ), ನ್ಯಾಯಮೂರ್ತಿ (ನಿವೃತ್ತ) ಜಗದೀಶ್ ಸಿಂಗ್ ಖೇಹರ್ ಮತ್ತು ಸುಜುಕಿ ಕಂಪನಿಯ ಒಸಾಮು ಸುಜುಕಿ (ಮರಣೋತ್ತರ), ಬಿಬೇಕ್ ಡೆಬ್ರಾಯ್, ಸುಶೀಲ್ ಮೋದಿ ಮತ್ತು ಮನೋಹರ್ ಜೋಶಿ (ಮರಣೋತ್ತರ) ಅವರ ಹೆಸರುಗಳು ಸೇರಿವೆ. ಪ್ರಮುಖವಾಗಿ ತಮಿಳು ನಟ ಅಜಿತ್ ಕುಮಾರ್ ಹಾಗೂ ತೆಲುಗು ನಟ ನಂದಮೂರಿ ಬಾಲಕೃಷ್ಣ ಅವರಿಗೆ ಪದ್ಮಭೂಷಣ, ಟೀಂ ಇಂಡಿಯಾದ ನಿರ್ಗಮಿತ ಸ್ಟಾರ್ ಆಟಗಾರ ಆರ್. ಅಶ್ವಿನ್ ಅವರಿಗೆ ಪದ್ಮಶ್ರೀ ಪ್ರಶಸ್ತಿ ಘೋಷಿಸಲಾಗಿದೆ.

## ಶಿವಣ್ಣ

ಇದೀಗ ಸಂಪೂರ್ಣ ಗುಣಮುಖರಾಗಿ ತಾಯ್ನಾಡಿಗೆ ಮರಳಿದ್ದಾರೆ.

ಅಮೆರಿಕದಿಂದ ದುಬೈಗೆ ಬಂದಿಳಿದು, ಅಲ್ಲಿಂದ ಕನೆಕ್ಟೆಡ್ ವಿಮಾನದಲ್ಲಿ ಬೆಂಗಳೂರಿಗೆ ಆಗಮಿಸಿದ್ದಾರೆ. ಬೆಳಿಗ್ಗೆ 9ರ ಆಸುಪಾಸಿನಲ್ಲಿ ಬೆಂಗಳೂರಿನ ಏರ್ಪೋರ್ಟ್‌ನಲ್ಲಿ ಲ್ಯಾಂಡ್ ಆಗಿದ್ದು, ವಿಮಾನ ನಿಲ್ದಾಣದ ಪ್ರಕ್ರಿಯೆಗಳನ್ನು ಮುಗಿಸಿ ಆಗಮನ ಗೇಟ್ 1ರಲ್ಲಿ ಹೊರಬಂದಿದ್ದಾರೆ.

ಇನ್ನೂ ಮನೆ ಬಳಿ ಶಿವಣ್ಣರನ್ನ ಸ್ವಾಗತಿಸಲು 500ಕೆ.ಜಿ ಹೂಗಳನ್ನ ತಯಾರಿ ಮಾಡಿಕೊಂಡಿರುವ ದೊಡ್ಮನೆ ಅಭಿಮಾನಿಗಳು ಕಾಯುತ್ತಿದ್ದಾರೆ. ಜೊತೆಗೆ ಮೂರು ಜೆಸಿಬಿಗಳ ಮೂಲಕ ಶಿವರಾಜಕುಮಾರ್ ಹಾಗೂ ಗೀತಾ ಶಿವರಾಜಕುಮಾರ್ ಅವರಿಗೆ ಹೂ ಹಾಕಿ ಸ್ವಾಗತಿಸಲು ಸಿದ್ಧತೆ ಮಾಡಿಕೊಂಡಿದ್ದು, ನಾಗವಾರದ ನಿವಾಸದ ಬಳಿ ಅಭಿಮಾನಿಗಳು ದಂಡು ಹರಿದು ಬಂದಿದೆ.

ಏರ್‌ಪೋರ್ಟ್ ಬಳಿಯ ಟೋಲ್‌ನಿಂದ ಹಿಡಿದು ನಾಗವಾರದ ಮನೆಯವರೆಗೂ ಶಿವಣ್ಣರನ್ನ ಬರಮಾಡಿಕೊಳ್ಳಲು ಫ್ಯಾನ್ಸ್ ಕಾಯ್ತಿದ್ದಾರೆ. ಶಿವಣ್ಣ ಅವರ ನಿವಾಸದ ಬಳಿ ಅಭಿಮಾನಿಗಳು ಬ್ಯಾನರ್, ಕಟೌಟ್ ಹಾಕಿ ಸ್ವಾಗತ ಮಾಡೋದಕ್ಕೂ ತಯಾರಿ ಮಾಡಿಕೊಂಡಿದ್ದಾರೆ. ಇನ್ನೂ ಸೋಮವಾರ ಶಿವಣ್ಣನ ಮನೆಯಲ್ಲಿ ಹೊಸ ವರ್ಷ ಹಾಗೂ ಸಂಕ್ರಾಂತಿ ಸಂಭ್ರಮ ಒಟ್ಟೊಟ್ಟಿಗೆ ನಡೆಯಲಿದೆ.

## ಹತ್ತಿಸಿ ಹತ್ಯೆ

ವಕೀಲರ ಸಹೋದರಿ ಮತ್ತು ಆಕೆಯ ಪತಿ ರಂಜೀತ್ ಯಾದವ್ ವಿಚ್ಛೇದನದಕ್ಕೆ ಅರ್ಜಿ ಸಲ್ಲಿಸಿದ್ದರು, ಆತನೇ ವಕೀಲರನ್ನು ಕೊಲೆ ಮಾಡಿದ್ದಾನೆ ಎಂಬುದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ. ಪ್ರಕರಣದ ಪ್ರಮುಖ ಆರೋಪಿ ರಂಜಿತ್ ಯಾದವ್ ನನ್ನು ಬಂಧಿಸಲಾಗಿದ್ದು, ಇತರ ಆರೋಪಿಗಳನ್ನು ಬಂಧಿಸಲು ಪೊಲೀಸ್ ತಂಡಗಳನ್ನು ನಿಯೋಜಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಘಟನೆ ಕುರಿತು ಮಾಹಿತಿ ಪಡೆದ ವಕೀಲರು ಹೆಚ್ಚಿನ ಸಂಖ್ಯೆಯಲ್ಲಿ ಆಸ್ಪತ್ರೆಗೆ ಆಗಮಿಸಿ ಹಂತಕರನ್ನು ಬಂಧಿಸುವಂತೆ ಒತ್ತಾಯಿಸಿದರು.

2023ರಲ್ಲಿ ಉತ್ತರಪ್ರದೇಶದ ಶಹಜಹಾನ್ ಪುರದ ಜಿಲ್ಲಾ ನ್ಯಾಯಾಲಯ ಸಂಕೀರ್ಣದೊಳಗೆ ವಕೀಲರೊಬ್ಬರಿಗೆ ಗುಂಡಿಟ್ಟು ಹತ್ಯೆ ಮಾಡಿರುವ ಘಟನೆ ವರದಿಯಾಗಿತ್ತು. ಗೂಂಡಾಗಳು ಮತ್ತು ದುಷ್ಕರ್ಮಿಗಳು ರಾಜ್ಯದಿಂದ ಪಲಾಯನ ಮಾಡಿದ್ದಾರೆ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿಗಳು ಹೇಳುತ್ತಿದ್ದರು. ಆದರೆ ಇಲ್ಲಿ ಅವರು ನ್ಯಾಯಾಲಯಕ್ಕೆ ನುಗ್ಗಿ ವಕೀಲರನ್ನು ಕೊಲ್ಲುತ್ತಿದ್ದಾರೆ ಎಂದು ಪ್ರಿಯಾಂಕಾ ಗಾಂಧಿ ಆರೋಪಿಸಿದ್ದರು.

ಹತ್ಯೆಯಾದ ವಕೀಲರನ್ನು ಭೂಪೇಂದ್ರ ಪ್ರತಾಪ್ ಸಿಂಹ ಎಂದು ಗುರ್ತಿಸಲಾಗಿದೆ. ನ್ಯಾಯಾಲಯದ ಮೂರನೇ ಮಹಡಿಯಲ್ಲಿ ವಕೀಲರ ಶವ ಪತ್ತೆಯಾಗಿತ್ತು. ಮೃತದೇಹದ ಬಳಿ ದೇಶೀಯ ನಿರ್ಮಿತ ಪಿಸ್ತೂಲ್ ಕೂಡ ಕಂಡುಬಂದಿದೆ ಎಂದು ವರದಿಯಾಗಿದೆ. ಹತ್ಯೆಗೆ ಪ್ರಮುಖ ಕಾರಣಗಳು ತಿಳಿದುಬಂದಿಲ್ಲ. ಘಟನೆ ಬಳಿಕ ಸ್ಥಳಕ್ಕಾಗಮಿಸಿರುವ ಪೊಲೀಸರು ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದು, ತನಿಖೆ ಆರಂಭಿಸಿದ್ದಾರೆಂದು ತಿಳಿದುಬಂದಿತ್ತು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಅನಂತ್ ನಾಗ್‌ಗೆ ಪದ್ಮಭೂಷಣ, ನೀವೇ ನನಗೆ ಸ್ಫೂರ್ತಿ ಎಂದ ರಿಷಬ್ ಶೆಟ್ಟಿ

ಕನ್ನಡ ಚಿತ್ರರಂಗದ ಹಿರಿಯ ನಟ ಅನಂತ್ ನಾಗ್ ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಅನಂತ್ ನಾಗ್ ಅವರಿಗೆ ಕೇಂದ್ರ ಸರ್ಕಾರ ಪದ್ಮಭೂಷಣ ಪ್ರಶಸ್ತಿ ಘೋಷಿಸಿದೆ. ಆ ಮೂಲಕ ಕನ್ನಡ ಸಿನಿಮಾ ಪ್ರೇಮಿಗಳ ಹಲವು ವರ್ಷಗಳ ಬೇಡಿಕೆ ಈಡೇರಿದಂತಾಗಿದೆ. ಇದೀಗ ಕನ್ನಡ ಸಿನಿಮಾ ರಂಗದ ಪ್ರಮುಖ ನಟರು ಸೇರಿದಂತೆ ಹಲವಾರು ಮಂದಿ ಸೆಲೆಬ್ರಿಟಿಗಳು ಅನಂತ್ ನಾಗ್ ಅವರಿಗೆ ಶುಭಾಶಯಗಳನ್ನು ತಿಳಿಸಿದ್ದಾರೆ. ಅನಂತ್ ನಾಗ್ ಅವರಿಗೆ ಯಾರ ಹೇಗೆ ಅಭಿನಂದಿಸಿದ್ದಾರೆ, ಇಲ್ಲಿದೆ ಮಾಹಿತಿ.

ಅನಂತ್ ನಾಗ್ ಅವರೊಟ್ಟಿಗಿನ ಚಿತ್ರ ಹಂಚಿಕೊಂಡು ಟ್ವೀಟ್ ಮಾಡಿರುವ ರಿಷಬ್ ಶೆಟ್ಟಿ, 'ನನ್ನ ಸ್ಫೂರ್ತಿಯಾಗಿರುವ ಅನಂತ್ ನಾಗ್ ಅವರಿಗೆ ಪದ್ಮ ಭೂಷಣ ಪ್ರಶಸ್ತಿ ದೊರೆತಿದ್ದಕ್ಕೆ ಅಭಿನಂದನೆಗಳು. ಚಿತ್ರರಂಗಕ್ಕೆ ಹಾಗೂ ನಾಟಕ ರಂಗಕ್ಕೆ ನಿಮ್ಮ ಸೇವೆ ತಲೆಮಾರುಗಳಿಗೆ ಸ್ಫೂರ್ತಿ ತುಂಬಿದೆ. ಸರಳತೆಯಲ್ಲಿ ಸಾಧಕತೆ ಅಡಗಿದೆ ಎಂದು ತೋರಿಸಿದ್ದಕ್ಕೆ ಧನ್ಯವಾದಗಳು. ಕನ್ನಡ ಚಿತ್ರರಂಗದ ರತ್ನ, ನಮ್ಮೆಲ್ಲರ



ಪ್ರಿಯ ಅನಂತ್ ನಾಗ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ಲಭಿಸಿದ ಸುದ್ದಿ ಕೇಳಿ ಅಪಾರ ಸಂತೋಷವಾಯಿತು. ನಿಮ್ಮ ಕಲಾ ಸಾಧನೆ ಕನ್ನಡ ನಾಡಿನ ಕೀರ್ತಿಯನ್ನು ಹೆಚ್ಚಿಸಿದೆ. ನಿಮ್ಮ ಈ ಸಾಧನೆಗೆ ನನ್ನ ಹೃದಯಪೂರ್ವಕ ಅಭಿನಂದನೆಗಳು' ಎಂದಿದ್ದಾರೆ.

ಅನಂತ್ ನಾಗ್ ಅವರಿಗೆ ಒಂದೇ ರೀತಿಯ ಗಂಭೀರ ಪಾತ್ರಗಳನ್ನೇ ನಿರ್ದೇಶಕರುಗಳು ನೀಡುತ್ತಿದ್ದ ಸಮಯದಲ್ಲಿ ರಿಷಬ್ ಶೆಟ್ಟಿ ಅನಂತ್ ನಾಗ್ ಅವರನ್ನು ಭಿನ್ನವಾಗಿ ತೆರೆಯ ಮೇಲೆ ತೋರಿಸುವ ಪ್ರಯತ್ನ ಮಾಡಿದ್ದರು. ರಿಷಬ್ ಶೆಟ್ಟಿ ನಿರ್ದೇಶನದ 'ಸರ್ಕಾರಿ ಹಿರಿಯ ಪಾಠ ಶಾಲೆ ಕಾಸರಗೋಡು' ಸಿನಿಮಾದಲ್ಲಿ ಅನಂತ್ ನಾಗ್ ಅವರಿಗೆ ಭಿನ್ನವಾದ ಪಾತ್ರವನ್ನು ನೀಡಿದರು. ಆ ಸಿನಿಮಾ ಸೂಪರ್ ಹಿಟ್ ಆಗಿತ್ತು. ಅನಂತ್ ನಾಗ್ ಅವರನ್ನು ಭಿನ್ನ ರೀತಿಯಲ್ಲಿ ರಿಷಬ್ ಆ ಸಿನಿಮಾದಲ್ಲಿ ತೋರಿಸಿದ್ದರು.

ಹಿರಿಯ ನಟ ಅನಂತ್ ನಾಗ್ ಅವರಿಗೆ ಪದ್ಮ ಪ್ರಶಸ್ತಿ ಸಿಗಬೇಕು ಎಂಬುದು ಬಹು ವರ್ಷದ ಬೇಡಿಕೆ ಆಗಿತ್ತು. ಕಳೆದ ವರ್ಷ ನಟ ಮೆಗಾಸ್ಟಾರ್ ಚಿರಂಜೀವಿಗೆ ಪದ್ಮ ವಿಭೂಷಣ ಘೋಷಣೆಯಾದಾಗಲೂ ಅನಂತ್ ನಾಗ್ ಅವರನ್ನು ನಿರ್ಲಕ್ಷ್ಯ ಮಾಡಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಲಾಗಿತ್ತು. ಆದರೆ ಈಗ ಕೊನೆಗೂ ಅನಂತ್ ನಾಗ್ ಅವರಿಗೆ ಪದ್ಮ ಭೂಷಣ ಪ್ರಶಸ್ತಿ ಘೋಷಣೆ ಆಗಿದೆ.

# ಪದ್ಮಭೂಷಣ ಪ್ರಶಸ್ತಿಯನ್ನು ಕರ್ನಾಟಕ ಜನರಿಗೆ ಅರ್ಪಿಸಿದ ಅನಂತ್ ನಾಗ್

ಕನ್ನಡ ಚಿತ್ರರಂಗದ ಹಿರಿಯ ನಟ ಅನಂತ್ ನಾಗ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ಘೋಷಿಸಲಾಗಿದೆ. ಅನಂತ್ ನಾಗ್ ಅವರಿಗೆ ಪದ್ಮ ಪ್ರಶಸ್ತಿ ನೀಡಬೇಕು ಎಂಬುದು ಹಲವು ವರ್ಷಗಳ ಆಗ್ರಹವಾಗಿತ್ತು. ಪ್ರತಿ ಬಾರಿ ಪದ್ಮ ಪ್ರಶಸ್ತಿಗಳ ಘೋಷಣೆ ಆದಾಗಲೂ ಸಹ ಅನಂತ್ ನಾಗ್ ಅವರಿಗೆ ಪದ್ಮ ಪ್ರಶಸ್ತಿ ನೀಡಬೇಕು ಎಂಬ ಕೂಗು ಕರ್ನಾಟಕದಿಂದ ಏಳುತ್ತಿತ್ತು. ಕೊನೆಗೆ ಈ ವರ್ಷ ಅನಂತ್ ನಾಗ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ಘೋಷಣೆ ಮಾಡಲಾಗಿದೆ. ಪದ್ಮ ಪ್ರಶಸ್ತಿ ದೊರಕಿದ ಬಳಿಕ ಪ್ರತಿಕ್ರಿಯೆ ನೀಡಿರುವ ಅನಂತ್ ನಾಗ್, ಪ್ರಶಸ್ತಿಯನ್ನು ಕರ್ನಾಟಕದ ಜನರಿಗೆ ಅರ್ಪಿಸಿದ್ದಾರೆ.

ಪ್ರಶಸ್ತಿ ಘೋಷಣೆಯಾದ ಬಳಿಕ ಮಾತನಾಡಿರುವ ಅನಂತ್ ನಾಗ್, 'ಈ ಪ್ರಶಸ್ತಿಯನ್ನು ನಾನು ಕರ್ನಾಟಕದ ಜನರಿಗೆ ಅರ್ಪಿಸುತ್ತೇನೆ' ಎಂದಿದ್ದಾರೆ. ಪ್ರಶಸ್ತಿ ಘೋಷಣೆಯಾದ ಬಳಿಕ ಒಂದು ರೀತಿಯ ನಿರಾಳ ಭಾವ ನನ್ನಲ್ಲಿ ಮೂಡಿತು. ನನಗಾಗಿ ಇಷ್ಟು ವರ್ಷ ನನ್ನನ್ನು ಬೆಂಬಲಿಸಿದ ಜನರಿಗೆ ಕೊನೆಗೂ ಸಂತೋಷವಾಗಲಿದೆ ಎಂದೆನಿಸಿತು'



ಎಂದಿದ್ದಾರೆ. 'ನನಗೆ ಪದ್ಮ ಪ್ರಶಸ್ತಿ ಸಿಗಬೇಕು ಎಂದು ಜನ ಒತ್ತಾಯಿಸುತ್ತಲೇ ಬಂದಿದ್ದರು. ಇಂಥಹಾ ಚಳವಳಿಗಳು ಎಷ್ಟು ಕಾಲ ಇರುತ್ತವೆ ಎಂದು ನನಗೆ ಅನಿಸಿತ್ತು. ಆದರೆ ಜನರ ಬೆಂಬಲ ಕೊನೆಯಾಗಲೇ ಇಲ್ಲ' ಎಂದಿದ್ದಾರೆ ಅನಂತ್ ನಾಗ್.

ಪ್ರಧಾನಿ ಮೋದಿ ಅವರಿಗೂ ಧನ್ಯವಾದ ಹೇಳಿರುವ ಅನಂತ್ ನಾಗ್, 'ಪ್ರಶಸ್ತಿಗಳ ಆಯ್ಕೆಯಲ್ಲಿ ಜನರ ಅಭಿಪ್ರಾಯವನ್ನೂ ಪಡೆಯುವ ಪದ್ಧತಿ ಆರಂಭವಾಗಿದ್ದರಿಂದಲೇ ಇದು ಸಾಧ್ಯವಾಯಿತು. ಇದಕ್ಕೆ ಮೋದಿ ಅವರಿಗೆ ಧನ್ಯವಾದ ಹೇಳಲೇ ಬೇಕು' ಎಂದಿದ್ದಾರೆ. ಇದೇ ಸಂದರ್ಭದಲ್ಲಿ ತಮ್ಮ ನಟನೆಯ ಆರಂಭದ ದಿನಗಳನ್ನು ನೆನಪು ಮಾಡಿಕೊಂಡ ಅನಂತ್ ನಾಗ್, 'ನಾನು ನಾಟಕಗಳಲ್ಲಿ ನಟಿಸಲು ಆರಂಭಿಸಿದಾಗ ಬ್ಯಾಂಕ್ ನಲ್ಲಿ ಕೆಲಸ ಮಾಡುತ್ತಿದ್ದೆ. ಬರುವ ಸಂಬಳದಿಂದ ಎಲ್ಲವೂ ನಡೆಯುತ್ತಿತ್ತು. ಆದರೆ ಸಿನಿಮಾಕ್ಕೆ ಸೇರಿಕೊಂಡ ಮೇಲೆ ಹಣ ಬೇಕೇ ಬೇಕಾಯ್ತು. ಸಂಭಾವನೆಯೇ ನನ್ನ ಮೊದಲ ಆದ್ಯತೆ ಆಗಿತ್ತು ಆ ಸಂದರ್ಭದಲ್ಲಿ' ಎಂದಿದ್ದಾರೆ ಅನಂತ್ ನಾಗ್.

1973 ರಿಂದಲೂ ಸಿನಿಮಾಗಳಲ್ಲಿ ಅನಂತ್ ನಾಗ್ ನಟಿಸುತ್ತಿದ್ದಾರೆ. ಕನ್ನಡ ಮಾತ್ರವೇ ಅಲ್ಲದೆ ಹಿಂದಿ, ತೆಲುಗು, ಮಲಯಾಳಂ, ತಮಿಳು, ಇಂಗ್ಲೀಷ್, ಮರಾಠಿ, ಬೆಂಗಾಳಿ ಸಿನಿಮಾಗಳಲ್ಲಿ ಅನಂತ್ ನಾಗ್ ನಟಿಸಿದ್ದಾರೆ. ನಾಲ್ಕು ಬಾರಿ ಅತ್ಯುತ್ತಮ ನಟ ರಾಜ್ಯ ಪ್ರಶಸ್ತಿಯನ್ನು ಅನಂತ್ ನಾಗ್ ಪಡೆದಿದ್ದಾರೆ. ಆರು ಬಾರಿ ಫಿಲಂ ಫೇರ್ ಪ್ರಶಸ್ತಿಗಳನ್ನು ಅವರು ಪಡೆದಿದ್ದಾರೆ.

# 'ಬಿಗ್ ಬಾಸ್'ನಿಂದ ಭವ್ಯಾ ಔಟ್

'ಬಿಗ್ ಬಾಸ್ ಕನ್ನಡ 11'ರ ಶೋನಲ್ಲಿ ವಿನ್ನರ್ ಯಾರೆಂದು ತಿಳಿದುಕೊಳ್ಳಲು ಕೌಂಟ್ ಡೌನ್ ಶುರುವಾಗಿದೆ. ದೊಡ್ಮನೆಯ ಡೇರಿಂಗ್ ಗರ್ಲ್ ಎಂದೇ ಸೌಂಡ್ ಮಾಡಿದ್ದ ಭವ್ಯಾ ಎಲಿಮಿನೇಟ್ ಆಗಿದ್ದಾರೆ. ಭವ್ಯಾ ಆಟಕ್ಕೆ ಬಿಗ್ ಬಾಸ್ ಬ್ರೇಕ್ ಹಾಕಿದ್ದಾರೆ.



ಬಿಗ್ ಬಾಸ್ ಮನೆಯಲ್ಲಿ ಭವ್ಯಾ ಗೌಡ ಅವರು ಫಿನಾಲೆ ವಾರ ತಲುಪಿದ ಸ್ಪರ್ಧಿಗಳಲ್ಲಿ ಒಬ್ಬರಾಗಿ ಆಟ ಆಡಿದ್ದರು. ಅವರ ಆಟ ಅನೇಕರಿಗೆ ಇಷ್ಟ ಆಗುತ್ತಿದೆ. ಅವರು ಸಾಕಷ್ಟು ಬಾರಿ ಎಡವಿದರೂ ಮತ್ತೆ ಎದ್ದು ನಿಂತು ಆಟ ಆಡಿದ್ದರು. ಅವರು ಮೂರು ಬಾರಿ ಕ್ಯಾಪ್ಟನ್ ಆದರೂ ಅವರ ಬಗ್ಗೆ ಇರೋ ಆರೋಪಗಳು ಸಾಕಷ್ಟಿತ್ತು.

ಭವ್ಯಾ ಅವರು ಎರಡು ಶೇಡ್‌ನಲ್ಲಿ ಕಾಣಿಸಿಕೊಂಡಿದ್ದರು. ವಾರದ ದಿನಗಳಲ್ಲಿ ಹಾರಾಟ-ಚೀರಾಟ ನಡೆಸುವ ಅವರು ವೀಕೆಂಡ್‌ನಲ್ಲಿ ಸೈಲೆಂಟ್ ಆಗಿರುತ್ತಿದ್ದರು. ಸಾಕಷ್ಟು ವಿಚಾರಗಳಲ್ಲಿ ಅವರು ಡ್ರಾಮಾ ಮಾಡಿದ್ದು ಇದೆ. ಅವರು ತ್ರಿವಿಕ್ರಮ್‌ನ ಸ್ವಾರ್ಥಕ್ಕಾಗಿ ಬಳಸಿಕೊಂಡರು ಎಂಬ ಆರೋಪ ಇದೆ. ಸ್ವತಃ ತ್ರಿವಿಕ್ರಮ್ ಅವರೇ ಈ ಆರೋಪ ಮಾಡಿದ್ದರು. ಅದಷ್ಟೇ ಅಲ್ಲ, ತ್ರಿವಿಕಮ್ ಜೊತೆಗಿನ ಗೆಳೆತನದ ವಿಚಾರವಾಗಿಯೂ ಹೈಲೆಟ್ ಆಗಿದ್ದರು ಭವ್ಯಾ. ಇಬ್ಬರೂ ಪ್ರೇಮಿಗಳು ಎಂದೇ ಹೈಲೆಟ್ ಆಗಿದ್ದಾರೆ.

ಇದೀಗ ಬಿಗ್ ಬಾಸ್ ಆಟದ ರೇಸ್‌ನಲ್ಲಿ ಭವ್ಯಾ ಕೂಡ ಇದ್ದು ಕಪ್ ಗೆಲ್ಲುವ ಭರವಸೆಯಲ್ಲಿದ್ದರು. ಆದರೆ ಆಸೆಗೆ ಬ್ರೇಕ್ ಬಿದ್ದಿದೆ.

## ದರ್ಶನ್‌ಗೆ ಕಡಿಮೆಯಾದ ಬೆನ್ನು ನೋವು

# ಸದ್ಯಕ್ಕಿಲ್ಲ ಆಪರೇಷನ್

ಬೆನ್ನು ನೋವಿನಿಂದ ಬಳಲುತ್ತಿರುವ ನಟ ದರ್ಶನ್‌ಗೆ ಕಳೆದ ವಾರ ಮೈಸೂರಿನ ವೈದ್ಯ ಡಾ. ಅಜಯ್ ಹೆಗ್ಡೆ ನೀಡಿದ್ದ ಎಪಿಡ್ಯೂರಲ್ ಇಂಜೆಕ್ಷನ್ ವರ್ಕ್ ಆಗಿದೆ. ಹೀಗಾಗಿ ಕೊಲೆ ಆರೋಪಿ ದರ್ಶನ್‌ಗೆ ಸದ್ಯಕ್ಕೆ ಆಪರೇಷನ್ ಅವಶ್ಯಕತೆ ಇಲ್ಲ. ನಾನು ಮೊದಲಿಗಿಂತಲೂ ಚೆನ್ನಾಗಿದ್ದೇನೆ ಎಂದು ವೈದ್ಯರಿಗೆ ದರ್ಶನ್ ದೂರವಾಣಿ ಮೂಲಕ ಹೇಳಿದ್ದಾರೆ.

ಕಳೆದ ವಾರ ಕೊಟ್ಟ ಇಂಜೆಕ್ಷನ್‌ನಿಂದ ದರ್ಶನ್ ಬೆನ್ನು ನೋವಿನಲ್ಲಿ ಬಹಳಷ್ಟು ಸುಧಾರಣೆ ಆಗಿದೆ. ಬಹುತೇಕ ಇಂಜೆಕ್ಷನ್‌ನಿಂದಲೇ ನೋವು ನಿವಾರಣೆಯಾಗುವ ಸಾಧ್ಯತೆ ಹೆಚ್ಚಿದೆ. ಹೀಗಾಗಿ ಈಗಾಗಲೇ ಪ್ರತಿನಿತ್ಯ ವರ್ಕೌಟ್ ಶುರು ಮಾಡಿರುವ ದರ್ಶನ್ ಫುಲ್ ಬಾಡಿ ವರ್ಕೌಟ್ ಶುರು ಮಾಡಿದ ನಂತರ ಏನಾದರು ನೋವು ಕಾಣಿಸಿಕೊಂಡರೆ ಮತ್ತೆ ಪರೀಕ್ಷೆಗೆ ಒಳಪಡಲಿದ್ದಾರೆ. ಫೆಬ್ರವರಿಯಿಂದ ಶೂಟಿಂಗ್‌ನಲ್ಲಿ ನಿರಂತರವಾಗಿ ಭಾಗವಹಿಸುವ ನಟ ದರ್ಶನ್ ದೇಹವನ್ನು ಮೊದಲಿನ ರೀತಿ ತರಲು ವರ್ಕೌಟ್‌ಗಳನ್ನು ಹೆಚ್ಚು ಮಾಡಿಕೊಳ್ಳುತ್ತಿದ್ದಾರೆ. ವೈದ್ಯರ ಸಲಹೆಯಂತೆ ಮತ್ತೆ ಎಂದಿನ ಶೈಲಿಯಲ್ಲೇ ದರ್ಶನ್ ನಿಧಾನವಾಗಿ ಜಿಮ್‌ನಲ್ಲಿ ಕಸರತ್ತು ಆರಂಭಿಸಿದ್ದಾರೆ.



## ಪದ್ಮ ಪ್ರಶಸ್ತಿಗೆ ಭಾಜನರಾದ ಚಿತ್ರರಂಗದ ಸಾಧಕರ ಪಟ್ಟಿ

ಕೇಂದ್ರ ಸರ್ಕಾರ ಇಂದು ಪದ್ಮ ಪ್ರಶಸ್ತಿಗಳನ್ನು ಘೋಷಣೆ ಮಾಡಿದೆ. 7 ಮಂದಿಗೆ ಪದ್ಮವಿಭೂಷಣ, 119 ಮಂದಿಗೆ ಪದ್ಮ ಭೂಷಣ ಹಾಗೂ 113 ಮಂದಿಗೆ ಪದ್ಮಶ್ರೀ ಪ್ರಶಸ್ತಿಗಳನ್ನು ಘೋಷಿಸಲಾಗಿದೆ. ಹಲವು ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಮಹನೀಯರಿಗೆ ಪ್ರಶಸ್ತಿಗಳನ್ನು ಘೋಷಣೆ ಮಾಡಲಾಗಿದೆ. ಸಿನಿಮಾ ರಂಗದಲ್ಲಿ ಸಾಧನೆ ಮಾಡಿದ ಹಲವರನ್ನು ಗುರುತಿಸಿ ಪ್ರಶಸ್ತಿ ಘೋಷಣೆ ಮಾಡಲಾಗಿದ್ದು. ಕನ್ನಡ ಚಿತ್ರರಂದ ಹಿರಿಯ ನಟ ಅನಂತ್ ನಾಗ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ಘೋಷಣೆ ಮಾಡಲಾಗಿದೆ. ಪದ್ಮ ಪ್ರಶಸ್ತಿಗೆ ಭಾಜನರಾದ ಸಿನಿಮಾ ರಂಗದ ಗಣ್ಯರ ಪಟ್ಟಿ ಇಲ್ಲಿ.

**ಅನಂತ್ ನಾಗ್:** ಕನ್ನಡ ಚಿತ್ರರಂಗದ ಹಿರಿಯ ನಟ ಅನಂತ್ ನಾಗ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ಘೋಷಿಸಲಾಗಿದೆ. ಕನ್ನಡ ಮಾತ್ರವೇ ಅಲ್ಲದೆ ಹಲವು ಭಾಷೆಗಳಲ್ಲಿ ಅವರು ನಟಿಸಿದ್ದು, ದಶಕಗಳಿಂದಲೂ ಸಿನಿಮಾ ಮೂಲಕ ಮನೊರಂಜನೆ, ಸಾಮಾಜಿಕ ಸಂದೇಶಗಳನ್ನು ನೀಡುತ್ತಾ ಬಂದಿದ್ದಾರೆ.

**ರಿಕ್ಕಿ ಕೇಜ್:** ಕನ್ನಡದ ಕೆಲವು ಸಿನಿಮಾ ಸೇರಿದಂತೆ ಹಲವು ಆಲ್ಬಂಗಳಿಗೆ ಸಂಗೀತ ನೀಡಿರುವ ಕನ್ನಡಿಗ ರಿಕ್ಕಿ ಕೇಜ್ ಅವರಿಗೆ ಪದ್ಮಶ್ರೀ ಪ್ರಶಸ್ತಿ ಘೋಷಿಸಲಾಗಿದೆ. ಗ್ರ್ಯಾಮಿ ಪ್ರಶಸ್ತಿ ವಿಜೇತ ರಿಕ್ಕಿ ಕೇಜ್ ಅವರು ಪದ್ಮಶ್ರೀ ಪ್ರಶಸ್ತಿಗೆ ಭಾಜನರಾಗಿದ್ದಾರೆ.

**ನಂದಮೂರಿ ಬಾಲಕೃಷ್ಣ:** ತೆಲುಗು ಚಿತ್ರರಂಗದ ಹಿರಿಯ ನಟ ನಂದಮೂರಿ ಬಾಲಕೃಷ್ಣ ಅವರಿಗೆ ಪದ್ಮಭೂಷಣ ಪ್ರಶಸ್ತಿ ಘೋಷಿಸಲಾಗಿದೆ. ರಾಜಕಾರಣಿಯೂ ಆಗಿರುವ ಬಾಲಕೃಷ್ಣ ಅವರಿಗೆ ಇದು ಮೊದಲ ಪದ್ಮ ಪ್ರಶಸ್ತಿ. ಕಳೆದ ವರ್ಷ ಮೆಗಾಸ್ಟಾರ್ ಚಿರಂಜೀವಿಗೆ ಪದ್ಮವಿಭೂಷಣ ಪ್ರಶಸ್ತಿ ಘೋಷಿಸಲಾಗಿದೆ.







**ಅಜಿತ್ ಕುಮಾರ್:** ತಮಿಳು ಚಿತ್ರರಂಗದ ಸ್ಟಾರ್ ನಟ ಅಜಿತ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ಘೋಷಿಸಲಾಗಿದೆ. ಹಲವು ದಶಕಗಳಿಂದಲೂ ಅವರು ತಮಿಳು ಚಿತ್ರರಂಗದಲ್ಲಿ ನಾಯಕ ನಟರಾಗಿ ನಟಿಸುತ್ತಿದ್ದಾರೆ. ಇದೀಗ ಅಜಿತ್ ಕುಮಾರ್ ಅವರಿಗೆ ಪ್ರಶಸ್ತಿ ಘೋಷಿಸಲಾಗಿದೆ.

**ಶೇಖರ್ ಕಪೂರ್:** ಹಿಂದಿ ಚಿತ್ರರಂಗದ ಜನಪ್ರಿಯ ನಟ, ನಿರ್ಮಾಪಕ, ನಿರ್ದೇಶಕ ಶೇಖರ್ ಕಪೂರ್ ಅವರಿಗೆ ಪದ್ಮ ಭೂಷಣ ಪ್ರಶಸ್ತಿ ಘೋಷಿಸಲಾಗಿದೆ. 'ಮಿಸ್ಟರ್ ಇಂಡಿಯಾ', 'ಬ್ಯಾಂಡಿಟ್ ಕ್ವೀನ್', 'ಎಲಿಜಿಬೆತ್' ಇನ್ನೂ ಹಲವು ಖ್ಯಾತ ಸಿನಿಮಾಗಳನ್ನು ಶೇಖರ್ ಕಪೂರ್ ನಿರ್ದೇಶಿಸಿದ್ದಾರೆ.

**ಅರಿಜಿತ್ ಸಿಂಗ್:** ಖ್ಯಾತ ಬಾಲಿವುಡ್ ಗಾಯಕ ಅರಿಜಿತ್ ಸಿಂಗ್ ಅವರಿಗೆ ಪದ್ಮಶ್ರೀ ಪ್ರಶಸ್ತಿ ಘೋಷಣೆ ಮಾಡಲಾಗಿದೆ. ತಮ್ಮ ಅದ್ಭುತ ಧ್ವನಿಯಿಂದಾಗಿ ದೇಶದ ನಂಬರ್ 1 ಗಾಯಕ ಎನಿಸಿಕೊಂಡಿರುವ ಅರಿಜಿತ್ ಸಿಂಗ್ ಹಿಂದಿ ಮಾತ್ರವಲ್ಲದೆ ಹಲವು ಭಾಷೆಗಳ ಸಿನಿಮಾಗಳಲ್ಲಿ ಹಾಡಿದ್ದಾರೆ.

**ಶೋಭನಾ:** ಕನ್ನಡ, ತಮಿಳು ಸೇರಿದಂತೆ ಹಲವು ಭಾಷೆಗಳ ಸಿನಿಮಾಗಳಲ್ಲಿ ನಾಯಕಿಯಾಗಿ ನಟಿಸಿರುವ ಹಿರಿಯ ನಟಿ ಶೋಭನಾಗೆ ಪದ್ಮಭೂಷಣ ಪ್ರಶಸ್ತಿ ಘೋಷಿಸಲಾಗಿದೆ. 1980 ರಲ್ಲಿ ಬಾಲನಟಿಯಾಗಿ ಎಂಟ್ರಿ ಕೊಟ್ಟ ಶೋಭನಾ ಆ ನಂತರ ನಾಯಕಿಯಾಗಿ ಮಲಯಾಳಂ, ತಮಿಳು, ತೆಲುಗು, ಕನ್ನಡ, ಹಿಂದಿ ಮತ್ತು ಇಂಗ್ಲೀಷ್ ಸಿನಿಮಾಗಳಲ್ಲಿ ನಟಿಸಿದ್ದಾರೆ.

**ಮಮತಾ ಶಂಕರ್:** ಖ್ಯಾತ ನಟಿ, ನೃತ್ಯಗಾರ್ತಿ ಮಮತಾ ಶಂಕರ್ ಅವರಿಗೆ ಪದ್ಮಶ್ರೀ ಪ್ರಶಸ್ತಿ ಘೋಷಿಸಲಾಗಿದೆ. ಮಮತಾ ಶಂಕರ್ ಅವರು ಬೆಂಗಾಲಿ ಮತ್ತು ಹಿಂದಿ ಸಿನಿಮಾಗಳಲ್ಲಿ ನಟಿಸಿದ್ದಾರೆ. ರಾಷ್ಟ್ರಪ್ರಶಸ್ತಿಯನ್ನೂ ಸಹ ಪಡೆದಿದ್ದಾರೆ. ಅವರು ಬಹಳ ಒಳ್ಳೆಯ ನೃತ್ಯಗಾರ್ತಿ ಸಹ ಹೌದು. ಇನ್ನೂ ಕೆಲವು ನಟರು, ತಂತ್ರಜ್ಞರಿಗೆ ಪದ್ಮಶ್ರೀ ಪ್ರಶಸ್ತಿ ಘೋಷಿಸಲಾಗಿದೆ.

# ಪಂಜಾಬ್ ವಿರುದ್ಧ ಕರ್ನಾಟಕಕ್ಕೆ ಜಯ

ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆದ ರಣಜಿ ಟೂರ್ನಿ ಪಂದ್ಯದಲ್ಲಿ ಪಂಜಾಬ್ ವಿರುದ್ಧ ಕರ್ನಾಟಕ ತಂಡ ಅಮೋಘ ಜಯ ಸಾಧಿಸಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಕರ್ನಾಟಕ ತಂಡದ ನಾಯಕ ಮಯಾಂಕ್ ಅಗರ್ವಾಲ್ ಬೌಲಿಂಗ್ ಆಯ್ದುಕೊಂಡಿದ್ದರು. ನಾಯಕನ ನಿರ್ಧಾರವನ್ನು ಸಮರ್ಥಿಸುವಂತೆ ವೇಗದ ದಾಳಿ ಸಂಘಟಿಸಿದ ವಾಸುಕಿ ಕೌಶಿಕ್ 4 ವಿಕೆಟ್ ಪಡೆದರೆ, ಅಭಿಲಾಷ್ ಶೆಟ್ಟಿ 3 ವಿಕೆಟ್ ಕಬಳಿಸಿದರು. ಪರಿಣಾಮ ಪಂಜಾಬ್ ತಂಡವು ಮೊದಲ ಇನಿಂಗ್ಸ್‌ನಲ್ಲಿ ಕೇವಲ 55 ರನ್‌ಗಳಿಗೆ ಆಲೌಟ್ ಆಯಿತು.

ಇದರ ಬೆನ್ನಲ್ಲೇ ಪ್ರಥಮ ಇನಿಂಗ್ಸ್ ಆಡಿದ ಕರ್ನಾಟಕ ಪರ ಸ್ಮರಣ್ ರವಿಚಂದ್ರನ್ ಚೊಚ್ಚಲ ದ್ವಿಶತಕ ಸಿಡಿಸಿದರು. 277 ಎಸೆತಗಳನ್ನು ಎದುರಿಸಿದ ಸ್ಮರಣ್ 3 ಸಿಕ್ಸ್ ಹಾಗೂ 25 ಫೋರ್‌ಗಳೊಂದಿಗೆ 203 ರನ್ ಬಾರಿಸಿದರು. ಈ ಡಬಲ್ ಸೆಂಚುರಿ ನೆರವಿನಿಂದ ಕರ್ನಾಟಕ ತಂಡವು ಮೊದಲ ಇನಿಂಗ್ಸ್‌ನಲ್ಲಿ 475 ರನ್ ಗಳಿಸಿ ಆಲೌಟ್ ಆಯಿತು.

**ದ್ವಿತೀಯ ಇನಿಂಗ್ಸ್?:** 420 ರನ್‌ಗಳ ಹಿನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್ ಆರಂಭಿಸಿದ ಪಂಜಾಬ್ ತಂಡವು ಉತ್ತಮ ಆರಂಭ ಪಡೆಯುವಲ್ಲಿ ವಿಫಲವಾಯಿತು. ಆರಂಭಿಕ ಆಟಗಾರ ಪ್ರಭ್‌ಸಿಮ್ರಾನ್ ಸಿಂಗ್ 1 ರನ್ ಗಳಿಸಿ ಔಟಾದರೆ, ಆ ಬಳಿಕ ಬಂದ ಅನ್‌ಮೋಲ್ ಪ್ರೀತ್ ಸಿಂಗ್ 14 ರನ್ ಬಾರಿಸಿ ವಿಕೆಟ್ ಒಪ್ಪಿಸಿದರು.

ಇದಾಗ್ಯೂ ಒಂದೆಡೆ ಕ್ರೀಸ್ ಕಚ್ಚಿ ಆಡಿದ ಶುಭ್‌ಮನ್ ಗಿಲ್ ಆಕರ್ಷಕ ಹೊಡೆತಗಳೊಂದಿಗೆ ಗಮನ ಸೆಳೆದರು. ಅಲ್ಲದೆ ತಂಡದ ಪರ ಏಕಾಂಗಿ ಹೋರಾಟ ನಡೆಸಿ ಸ್ಕೋರ್ ಅನ್ನು 150ರ ಗಡಿದಾಟಿಸಿದರು.



ಇದರ ನಡುವೆ 171 ಎಸೆತಗಳನ್ನು ಎದುರಿಸಿದ ಶುಭ್‌ಮನ್ ಗಿಲ್ 3 ಸಿಕ್ಸ್ ಹಾಗೂ 14 ಫೋರ್‌ಗಳೊಂದಿಗೆ 102 ರನ್ ಬಾರಿಸಿದರು. ಶತಕ ಬೆನ್ನಲ್ಲೇ ಗಿಲ್ ಅವರನ್ನು ಎಲ್‌ಬಿಡಬ್ಲ್ಯೂ ಮಾಡುವಲ್ಲಿ ಶ್ರೇಯಸ್ ಗೋಪಾಲ್ ಯಶಸ್ವಿಯಾದರು.

ಶುಭ್‌ಮನ್ ಗಿಲ್ ವಿಕೆಟ್ ಸಿಗುತ್ತಿದ್ದಂತೆ ಪಂದ್ಯದ ಮೇಲೆ ಹಿಡಿತ ಸಾಧಿಸಿದ ಕರ್ನಾಟಕ ಬೌಲರ್‌ಗಳು, ಅಂತಿಮವಾಗಿ ಪಂಜಾಬ್ ತಂಡವನ್ನು 213 ರನ್‌ಗಳಿಗೆ ಆಲೌಟ್ ಮಾಡಿದರು. ಈ ಮೂಲಕ ಕರ್ನಾಟಕ ತಂಡವು ಇನಿಂಗ್ಸ್ ಹಾಗೂ 207 ರನ್‌ಗಳ ಜಯ ಸಾಧಿಸಿದೆ.

ಈ ಗೆಲುವಿನೊಂದಿಗೆ ಕರ್ನಾಟಕ ತಂಡ ಗ್ರೂಪ್-ಸಿ ಅಂಕಪಟ್ಟಿಯಲ್ಲಿ 4ನೇ ಸ್ಥಾನಕ್ಕೇರಿದೆ. ಈ ಪಾಯಿಂಟ್ ಟೇಬಲ್‌ನಲ್ಲಿ ಮೊದಲ ಸ್ಥಾನದಲ್ಲಿ ಹರ್ಯಾಣ ತಂಡವಿದ್ದು, ದ್ವಿತೀಯ ಸ್ಥಾನದಲ್ಲಿ ಕೇರಳ ತಂಡವಿದೆ. ಇನ್ನು ಬಂಗಾಳ ತಂಡ ಮೂರನೇ ಸ್ಥಾನದಲ್ಲಿದ್ದರೆ, 12 ಅಂಕಗಳೊಂದಿಗೆ ಕರ್ನಾಟಕ 4ನೇ ಸ್ಥಾನ ಅಲಂಕರಿಸಿದೆ.

## ಮೈಕ್ರೋ ಫೈನಾನ್ಸ್ ಹಾವಳಿ

# ಸಿಎಂ ನೇತೃತ್ವದ ಉನ್ನತ ಮಟ್ಟದ ಸಭೆ

**ಬೆಂಗಳೂರು:** ಸಾಲ ವಸೂಲಾತಿಗೆ ರೌಡಿಶೀಟರ್‌ಗಳು, ಗೂಂಡಾಗಳನ್ನು ಬಳಸಲೇಬಾರದು. ಸಾಲ ವಸೂಲಾತಿ ಜವಾಬ್ದಾರಿಯನ್ನು ಫೈನಾನ್ಸ್‌ಗಳು ಔಟ್ ಸೋರ್ಸ್ ಕೊಡಬಾರದು. ಹಾಗೆ ಮಾಡಿದ್ದೇ ಆದರೆ ಅಂಥವರ ವಿರುದ್ಧ ಕೇಸು ದಾಖಲಿಸಿ ಮುಲಾಜಿಲ್ಲದೆ ಕ್ರಮ ಕೈಗೊಳ್ಳುತ್ತೇವೆಂದು ಸಿಎಂ ಸಿದ್ದರಾಮಯ್ಯ ಶನಿವಾರ ಖಡಕ್ ಸಂದೇಶ ರವಾನಿಸಿದ್ದಾರೆ.

ಗೃಹ ಕಚೇರಿ ಕೃಷ್ಣದಲ್ಲಿ ಡಿಸಿಎಂ ಡಿಕೆ ಶಿವಕುಮಾರ್, ಗೃಹ ಸಚಿವ ಪರಮೇಶ್ವರ್ ಹಾಗೂ ಉನ್ನತ ಅಧಿಕಾರಿಗಳ ಜೊತೆ ಸಭೆ ನಡೆಸಿದ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಮೈಕ್ರೋಫೈನಾನ್ಸ್ ಅಸೋಸಿಯೇಷನ್ ಅಭಿಪ್ರಾಯ ಪಡೆದಿದ್ದೇನೆ. ಆರ್‌ಬಿಐ ಅಧಿಕಾರಿಗಳ ಅಭಿಪ್ರಾಯವನ್ನೂ ಕೇಳಿದ್ದೇನೆ. ಯಾರಿಗೂ ಸಾಲ ಕೊಡಬೇಡಿ ಎಂದು ನಾವು ಹೇಳುವುದಿಲ್ಲ, ಆದರೆ ವಸೂಲಿ ಮಾಡುವಾಗ ಕಿರುಕುಳ ಕೊಡಲೇಬಾರದು. ಆರ್‌ಬಿಐ ನಿಯಮದಂತೆ ನಡೆದುಕೊಳ್ಳಬೇಕೆಂದು ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದರು.

**ಸಂಜೆ 5 ರ ನಂತರ ಸಾಲ ವಸೂಲಾತಿಗೆ ಹೋಗಬಾರದು:** ಸಾಲ ವಸೂಲಾತಿ ವೇಳೆ ಆರ್‌ಬಿಐ ನಿಯಮದಂತೆ ನಡೆದುಕೊಳ್ಳಬೇಕು. ಸಂಜೆ 5 ಗಂಟೆ ನಂತರ ಸಾಲ ವಸೂಲಾತಿಗೆ ಹೋಗಬಾರದು. ಮೈಕ್ರೋ ಫೈನಾನ್ಸ್, ಗಿರವಿ ಅಂಗಡಿಯವರು ಕಾನೂನು ಪಾಲಿಸಬೇಕು. ಕಾನೂನು ಉಲ್ಲಂಘಿಸುವವರ ವಿರುದ್ಧ ಮುಲಾಜಿಲ್ಲದೆ ಕ್ರಮಕೈಗೊಳ್ಳುತ್ತೇವೆ. ನಿನ್ನೆ ನಡೆದ ಸಭೆಯಲ್ಲಿ ಎಚ್ಚರಿಕೆ ನೀಡಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

**ಸುಗ್ರೀವಾಜ್ಞೆ ಮೂಲಕ ಕೂಡಲೇ ಹೊಸ ಕಾನೂನು:** ಅನಧಿಕೃತ ವ್ಯವಹಾರ ನಡೆಸುತ್ತಿರುವ ಕಂಪನಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಸಾಲಗಾರರಿಗೆ ಆಗುತ್ತಿರುವ ಕಿರುಕುಳ ತಪ್ಪಿಸಲು



ಕಾನೂನು ತರುತ್ತೇವೆ. ಕಾನೂನು ಇಲಾಖೆ, ಗೃಹ ಇಲಾಖೆ, ಕಂದಾಯ ಇಲಾಖೆಯಿಂದ ಕ್ರಮ ಕೈಗೊಳ್ಳಲಾಗುವುದು. ನೆರೆ ರಾಜ್ಯಗಳಲ್ಲಿರುವ ಕಾನೂನು ಪರಿಶೀಲಿಸಿ ಹೊಸ ಕಾನೂನು ಜಾರಿಗೆ ತರುತ್ತೇವೆ. ಸುಗ್ರೀವಾಜ್ಞೆ ಮೂಲಕ ಕೂಡಲೇ ಹೊಸ ಕಾನೂನನ್ನು ತರುತ್ತೇವೆ. ಒಂದು ವೇಳೆ ಸಾಲಗಾರರಿಗೆ ಕಿರುಕುಳ ನೀಡಿದರೆ ಕೇಸ್ ದಾಖಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಹೇಳಿದರು.

**ಶೇ 17.07ಕ್ಕಿಂತ ಹೆಚ್ಚು ಬಡ್ಡಿ ಪಡೆಯುವಂತಿಲ್ಲ: ಸಿಎಂ:** ಮೈಕ್ರೋ ಫೈನಾನ್ಸ್ ಕಂಪನಿಗಳು ಆರ್‌ಬಿಐ ಅಡಿಯಲ್ಲಿ ಬರುತ್ತವೆ. ಆರ್‌ಬಿಐ ನಿಯಮದಂತೆ ಶೇ 17.07ಕ್ಕಿಂತ ಹೆಚ್ಚು ಬಡ್ಡಿ ಪಡೆಯುವಂತಿಲ್ಲ. ಯಾವುದೇ ಸಾಲಗಾರರಿಗೆ 3 ಬಾರಿಗಿಂತ ಹೆಚ್ಚು ಸಾಲ ಕೊಡುವಂತಿಲ್ಲ, ಮೈಕ್ರೋ ಫೈನಾನ್ಸ್ ಕಂಪನಿಗಳು ಆರ್‌ಬಿಐ ನಿಯಮಕ್ಕಿಂತ ಹೆಚ್ಚು, ಅಂದರೆ, ಸುಮಾರು ಶೇ 28, 29 ರಷ್ಟು ಬಡ್ಡಿ ವಸೂಲಿ ಮಾಡುತ್ತಿರುವ ಬಗ್ಗೆ ಮಾಹಿತಿ ಇದೆ. ಇದರ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಮಾಹಿತಿ ನೀಡುತ್ತೇವೆ. ಅಧಿಕ ಬಡ್ಡಿ ವಸೂಲಿ ಮಾಡ್ತಿರುವ ಫೈನಾನ್ಸ್ ಕಂಪನಿಗಳ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ ಎಂದು ಸಿದ್ದರಾಮಯ್ಯ ತಿಳಿಸಿದರು.

**ಸಂಜೆಯೊಳಗೆ ಆರೋಪಿಗಳ ಬಂಧನ: ಡಿಸಿಎಂ ಡಿಕೆ ಶಿವಕುಮಾರ್ ಭರವಸೆ :** ಮೈಕ್ರೋ ಫೈನಾನ್ಸ್ ಕಂಪನಿಗಳಿಂದ ಕಿರುಕುಳ ತಪ್ಪಿಸಲು ಕ್ರಮ ಕೈಗೊಳ್ಳುತ್ತೇವೆ. ರಾಜ್ಯಾದ್ಯಂತ ದಾಖಲಾಗಿರುವ ಕೇಸ್‌ಗಳ ಬಗ್ಗೆ ಕೂಡಲೇ ಕ್ರಮಕ್ಕೆ ಸೂಚನೆ ನೀಡಿದ್ದೇವೆ. ಸಂಜೆಯೊಳಗೆ ಆರೋಪಿಗಳನ್ನು ಬಂಧಿಸಲು ಸೂಚಿಸಿದ್ದೇವೆ. ಸಾಲಗಾರರಿಗೆ ಕಿರುಕುಳ ಕೊಟ್ಟವರ ವಿರುದ್ಧ ಕ್ರಮಕ್ಕೆ ಸೂಚಿಸಿದ್ದೇವೆ. ಸಭೆಯಲ್ಲಿ ಭಾಗಿಯಾಗಿದ್ದ ಡಿಜಿ ಐಜಿಪಿಗೆ ಸೂಚನೆ ನೀಡಿದ್ದೇವೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದರು.

ಕರ್ನಾಟಕದಲ್ಲಿ ಮೈಕ್ರೋ ಫೈನಾನ್ಸ್‌ಗಳ ಕಿರುಕುಳ ಹೆಚ್ಚಾಗಿದ್ದು, ಇದರ ಪರಿಣಾಮ ಕೆಲವು ಮಂದಿ ಆತ್ಮಹತ್ಯೆಗೆ ಶರಣಾಗಿದ್ದರೆ ಇನ್ನು ಕೆಲವರು ಊರು ಬಿಟ್ಟು ಗುಳೇ ಹೋಗುವಂತಾಗಿದೆ. ಚಿಕ್ಕಮಗಳೂರು, ರಾಮನಗರ, ರಾಯಚೂರು, ಬೆಳಗಾವಿ, ಮಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಮೈಕ್ರೋ ಫೈನಾನ್ಸ್ ದೌರ್ಜನ್ಯ ಹೆಚ್ಚಾದ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ ನಡೆಸಲಾಗಿದ್ದು ಹಲವು ಮಹತ್ವದ ತೀರ್ಮಾನಗಳನ್ನು ತೆಗೆದುಕೊಳ್ಳಲಾಗಿದೆ. ಜತೆಗೆ ಮೈಕ್ರೋಫೈನಾನ್ಸ್ ಸಂಸ್ಥೆಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನೂ ನೀಡಲಾಗಿದೆ.

ಸಿಎಂ ಗೃಹಕಚೇರಿ ಕೃಷ್ಣಾದಲ್ಲಿ ಸಿದ್ದರಾಮಯ್ಯ ನೇತೃತ್ವದಲ್ಲಿ ಸಭೆ ನಡೆದಿದೆ. ಡಿಸಿಎಂ ಡಿ.ಕೆ. ಶಿವಕುಮಾರ್, ಗೃಹಸಚಿವ ಡಾ. ಜಿ ಪರಮೇಶ್ವರ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಕಾನೂನು ಸಚಿವ ಹೆಚ್.ಕೆ.ಪಾಟೀಲ್, ರಾಜ್ಯ ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್ ಸಭೆಯಲ್ಲಿ ಉಪಸ್ಥಿತರಿದ್ದರು.

# ಐಸಿಸಿ ವರ್ಷದ ಟಿ20 ತಂಡಕ್ಕೆ ರೋಹಿತ್ ನಾಯಕ: ಭಾರತದ ನಾಲ್ವರಿಗೆ ಸ್ಥಾನ

**ದುಬೈ:** ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ ಪ್ರಕಟಿಸಿರುವ 2024ರ ವರ್ಷದ ಪುರುಷರ ಟಿ20 ಕ್ರಿಕೆಟ್ ತಂಡಕ್ಕೆ ಭಾರತದ ರೋಹಿತ್ ಶರ್ಮಾ ನಾಯಕರಾಗಿ ಆಯ್ಕೆಯಾಗಿದ್ದಾರೆ.

ನಾಯಕ ರೋಹಿತ್ ಸೇರಿದಂತೆ ನಾಲ್ವರು ಆಟಗಾರರು ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಆಲ್ ರೌಂಡರ್ ಹಾರ್ದಿಕ್ ಪಾಂಡ್ಯ, ಬೌಲರ್‌ಗಳಾದ ಜಸ್‌ಪ್ರೀತ್ ಬೂಮ್ರಾ ಮತ್ತು ಅರ್ಷದೀಪ್ ಸಿಂಗ್ ತಂಡದಲ್ಲಿದ್ದಾರೆ. ಈ ಮೂಲಕ ಐಸಿಸಿ ವರ್ಷದ ಪುರುಷರ ಟಿ20 ತಂಡದಲ್ಲಿ ಭಾರತೀಯ ಆಟಗಾರರು ಅಧಿಪತ್ಯ ಸ್ಥಾಪಿಸಿದ್ದಾರೆ.

ಆಸ್ಟ್ರೇಲಿಯಾದ ಟ್ರಾವಿಸ್ ಹೆಡ್, ಇಂಗ್ಲೆಂಡ್‌ನ ಫಿಲ್ ಸಾಲ್ಟ್, ಪಾಕಿಸ್ತಾನದ ಬಾಬರ್ ಅಜಂ, ವೆಸ್ಟ್ ಇಂಡೀಸ್‌ನ ನಿಕೋಲಸ್ ಪೂರನ್ (ವಿಕೆಟ್ ಕೀಪರ್),



ಅಫ್ಘಾನಿಸ್ತಾನದ ರಶೀದ್ ಖಾನ್ ಮತ್ತು ಶ್ರೀಲಂಕಾದ ವನಿಂದು ಹಸರಂಗ ತಂಡದಲ್ಲಿದ್ದಾರೆ.

ರೋಹಿತ್ ಶರ್ಮಾ ನಾಯಕತ್ವದಲ್ಲೇ ಭಾರತ ಐಸಿಸಿ ಟ್ವೆಂಟಿ-20 ವಿಶ್ವಕಪ್ ಜಯಿಸಿತ್ತು. ಈ ಅವಧಿಯಲ್ಲಿ ರೋಹಿತ್ 11 ಪಂದ್ಯಗಳಲ್ಲಿ 42ರ ಸರಾಸರಿಯಲ್ಲಿ (160.16) 378 ರನ್ ಗಳಿಸಿದ್ದರು. ಒಂದು ಶತಕವನ್ನು (121) ಸಿಡಿಸಿದ್ದರು.

ಹಾರ್ದಿಕ್ ಪಾಂಡ್ಯ 17 ಪಂದ್ಯಗಳಲ್ಲಿ 352 ರನ್ ಮತ್ತು 16 ವಿಕೆಟ್‌ಗಳನ್ನು ಗಳಿಸಿದ್ದಾರೆ. ಬಲಗೈ ವೇಗದ ಬೌಲರ್ ಜಸ್‌ಪ್ರೀತ್ ಬೂಮ್ರಾ 8 ಪಂದ್ಯಗಳಲ್ಲಿ 15 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಹಾಗೆಯೇ ಗಮನಾರ್ಹ ಪ್ರದರ್ಶನ ನೀಡಿರುವ ಅರ್ಷದೀಪ್ ಸಿಂಗ್ 18 ಪಂದ್ಯಗಳಲ್ಲಿ 36 ವಿಕೆಟ್‌ಗಳನ್ನು ಗಳಿಸಿದ್ದಾರೆ.

## ಶಾಸಕ ಇಕ್ಬಾಲ್ ಹುಸೇನ್ ವಿರುದ್ಧ ಭೂಕಬಳಿಕೆ ಆರೋಪ

# ಗ್ರಾಮಸ್ಥರಿಂದ ದಾಖಲೆ ಬಿಡುಗಡೆ

**ರಾಮನಗರ:** ಶಾಸಕ ಇಕ್ಬಾಲ್ ಹುಸೇನ್ ವಿರುದ್ಧ ಭೂಕಬಳಿಕೆ ಆರೋಪ ವಿಚಾರ ಕುರಿತು ಕನಕಪುರ ತಾಲೂಕಿನ ಹೊಂಗಣಿದೊಡ್ಡಿ ಗ್ರಾಮಸ್ಥರು ಇಂದು ದಾಖಲೆ ಬಿಡುಗಡೆ ಮಾಡಿದ್ದಾರೆ.

1957ರಲ್ಲಿ ಭೂ ಮಾಲೀಕರು ಗ್ರಾಮಸ್ಥರಿಗೆ ಹಿಂದೆ ಕ್ರಯ ಮಾಡಿಕೊಟ್ಟ ದಾಖಲಾತಿ ಹಾಗೂ 19 ಜನ ಗೇಣಿದಾರರ ಗೇಣಿ ಅರ್ಜಿಯನ್ನ ಬಿಡುಗಡೆ ಮಾಡಿ ಸುದ್ದಿಗೋಷ್ಠಿ ನಡೆಸಿ ಗ್ರಾಮಸ್ಥರು ಮಾತನಾಡಿದರು. ಗ್ರಾಮದ 67 ಎಕರೆ ಜಮೀನನ್ನು ರಾಮನಗರ ಶಾಸಕರು ತಮ್ಮ ಹೆಸರಿಗೆ ನೋಂದಣಿ ಮಾಡಿಸಿಕೊಂಡಿದ್ದಾರೆ. ಇಡೀ ಗ್ರಾಮವೇ ಶಾಸಕರ



ಹೆಸರಲ್ಲಿ ಇದೆ ಎಂಬುದನ್ನು ಸ್ವತಃ ಶಾಸಕರೇ ಒಪ್ಪಿಕೊಂಡಿದ್ದಾರೆ. ಈಗ ಗ್ರಾಮವನ್ನ ಮಾತ್ರ ಬಿಟ್ಟುಕೊಡುತ್ತೇನೆ ಎನ್ನುತ್ತಾರೆ. ಕೇವಲ ಗ್ರಾಮದ ಜಮೀನು ಮಾತ್ರವಲ್ಲ ನಮ್ಮ ಕೃಷಿ ಭೂಮಿಯನ್ನೂ ನಮಗೆ ಬಿಟ್ಟುಕೊಡಬೇಕು ಎಂದು ಆಗ್ರಹಿಸಿದರು.

19 ಗೇಣಿದಾರರ ಜಮೀನುಗಳನ್ನು ವಾಪಸ್ ನೀಡಿ. ಸ್ಥಳಕ್ಕೆ ಡಿಸಿ ಭೇಟಿ ನೀಡಿ ನಮ್ಮ ಜಾಗಕ್ಕೆ ಮಂಜೂರಾತಿ ಪತ್ರಗಳ ನೀಡಬೇಕು. ಕಳೆದ 60-70 ವರ್ಷದಿಂದ ನಾವು ಅಲ್ಲಿ ವ್ಯವಸಾಯ ಮಾಡ್ತಿದ್ದೇವೆ. ನಮ್ಮ ಜಮೀನುಗಳನ್ನ ನಮಗೆ ಉಳಿಸಿಕೊಡಿ. ಲೋಕಾಯುಕ್ತ ಅಧಿಕಾರಿಗಳು ಈ ಬಗ್ಗೆ ಸೂಕ್ತ ತನಿಖೆ ನಡೆಸಬೇಕು. ನ್ಯಾಯ ಒದಗಿಸಲಿಲ್ಲ ಅಂದರೆ ದಯಾಮರಣ ನೀಡುವಂತೆ ಸುದ್ದಿಗೋಷ್ಠಿಯಲ್ಲಿ ಗ್ರಾಮಸ್ಥರು ಮನವಿ ಮಾಡಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com

# ಅಮೆರಿಕದಿಂದ ಅಕ್ರಮ ವಲಸಿಗರ ಗಡೀಪಾರು ಪ್ರಕ್ರಿಯೆ ಆರಂಭ

**ವಾಷಿಂಗ್ಟನ್:** ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಾಗ್ದಾನ ಮಾಡಿದಂತೆ ಅಕ್ರಮ ವಲಸಿಗರನ್ನು ದೇಶದಿಂದ ಹೊರಹಾಕುವ ಪ್ರಕ್ರಿಯೆಯನ್ನು ಆರಂಭಿಸಿದ್ದಾರೆ. 538 ಅಕ್ರಮ ವಲಸಿಗರನ್ನು ಬಂಧಿಸಿ, ಅದರಲ್ಲಿ ನೂರಾರು ಜನರನ್ನು ಎರಡು ವಿಮಾನಗಳಲ್ಲಿ ಗ್ವಾಟೆಮಾಲಕ್ಕೆ ತರಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಕ್ರಮ ನಿವಾಸಿಗಳನ್ನು ಸ್ಥಳಾಂತರಿಸುತ್ತಿರುವ ಚಿತ್ರಗಳನ್ನು ಶ್ವೇತಭವನವು ತನ್ನ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದೆ. ಟ್ರಂಪ್ ಅವರು ಕೊಟ್ಟ ಭರವಸೆಯಂತೆ ಗಡೀಪಾರು ಕಾರ್ಯಾಚರಣೆ ಆರಂಭಿಸಲಾಗಿದೆ. ಅಕ್ರಮವಾಗಿ ಅಮೆರಿಕ ಪ್ರವೇಶಿಸಿದವರು ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ. ಮೊದಲ ದಿನವೇ 538 ಜನರನ್ನು ಬಂಧಿಸಲಾಗಿದೆ. ಇದರಲ್ಲಿ ಹಲವು ಕ್ರಿಮಿನಲ್ಗಳು ಇದ್ದಾರೆ ಎಂದು ಅದರಲ್ಲಿ ತಿಳಿಸಲಾಗಿದೆ. 48 ಪುರುಷರು,



31 ಮಹಿಳೆಯರು ಸೇರಿ ಒಟ್ಟು 79 ಅಕ್ರಮ ವಲಸಿಗರನ್ನು ಮೊದಲ ಸೇನಾ ವಿಮಾನದಲ್ಲಿ ಶುಕ್ರವಾರ ಮಧ್ಯರಾತ್ರಿ ಗ್ವಾಟೆಮಾಲಾಕ್ಕೆ ಕರೆತರಲಾಗಿದೆ. ಎರಡನೇ ವಿಮಾನದವೂ ಹೆಚ್ಚಿನ ಸಂಖ್ಯೆಯ ಜನರನ್ನು ಹೊತ್ತು ತಂದಿದೆ. ನೂರಾರು ಜನರನ್ನು ಮಿಲಿಟರಿ ವಿಮಾನಗಳು ಗಡೀಪಾರು ಮಾಡಿವೆ. ಇತಿಹಾಸದಲ್ಲಿ ಅತಿದೊಡ್ಡ ಗಡೀಪಾರು ಕಾರ್ಯಾಚರಣೆ ಚುರುಕು ಪಡೆದಿದೆ ಎಂದು ಶ್ವೇತಭವನ ತಿಳಿಸಿದೆ. ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ಅವರು ತಿಳಿಸಿದಂತೆ, ದೊಡ್ಡ ಪ್ರಮಾಣದ ಗಡೀಪಾರು ಕಾರ್ಯಾಚರಣೆ ಆರಂಭವಾಗಿದೆ. ಮೊದಲ ದಿನವೇ, ಶಂಕಿತ ಭಯೋತ್ಪಾದಕರು, ಕ್ರಿಮಿನಲ್ಗಳು, ಗ್ಯಾಂಗ್ಸ್ಟರ್ಗಳು ಮತ್ತು ಅಪರಾಧ ಕೃತ್ಯ ನಡೆಸಿ ಶಿಕ್ಷೆಗೊಳಗಾದವರು ಇದ್ದಾರೆ. ಎಲ್ಲರನ್ನೂ ಬಂಧಿಸಿ ಗಡೀಪಾರು ಮಾಡಲಾಗುತ್ತಿದೆ ಎಂದು ಹೇಳಿದರು.

# ದೆಹಲಿ ಚುನಾವಣೆ: ಬಿಜೆಪಿ ಮೂರನೇ ಸಂಕಲ್ಪಪತ್ರ ಬಿಡುಗಡೆ

**ನವದೆಹಲಿ:** ದೆಹಲಿ ವಿಧಾನಸಭಾ ಚುನಾವಣೆಗೆ ಬಿಜೆಪಿ ಶನಿವಾರ ತನ್ನ ಸಂಪೂರ್ಣ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿತು. ಸಂಕಲ್ಪ ಪತ್ರದ ಮೂರನೇ ಮತ್ತು ಅಂತಿಮ ಭಾಗವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಪ್ರಕಟ ಮಾಡಿದರು.



ಬಳಿಕ ಮಾತನಾಡಿದ ಅವರು, 2014ರಿಂದ ಪ್ರಧಾನಿ ಮೋದಿ ದೇಶದ ರಾಜಕೀಯದಲ್ಲಿ ಮಹತ್ತರ ಬದಲಾವಣೆ ತಂದಿದ್ದಾರೆ. ಪ್ರತಿಯೊಬ್ಬರ ಅಭಿಪ್ರಾಯದ ಮೇರೆಗೆ ಬಿಜೆಪಿ ಪ್ರಣಾಳಿಕೆ ರೂಪಿಸಿದೆ. ಇದಕ್ಕಾಗಿ ಒಂದು ಲಕ್ಷ ಎಂಟು ಸಾವಿರ ಜನರಿಂದ ಸಲಹೆ ಪಡೆಯಲಾಗಿದೆ. ಮೊದಲು ಎರಡು ಹಂತದಲ್ಲಿ ಭರವಸೆಗಳನ್ನು ನೀಡಲಾಗಿತ್ತು. ಇದೀಗ ಕೊನೆಯ ಮತ್ತು ಮೂರನೇ ಆಶ್ವಾಸನೆಗಳ ಪ್ರಣಾಳಿಕೆ ಬಿಡುಗಡೆ ಮಾಡಲಾಗಿದೆ ಎಂದರು.

ಪ್ರಣಾಳಿಕೆ ಬಿಡುಗಡೆಗೂ ಮುನ್ನ ಕೇಜ್ರಿವಾಲ್ ವಿರುದ್ಧ ವಾಗ್ದಾಳಿ ನಡೆಸಿದ ಅಮಿತ್ ಶಾ ಅವರು, ನನ್ನ ರಾಜಕೀಯ ಜೀವನದಲ್ಲಿ ಕೇಜ್ರಿವಾಲ್ ಅವರಂತಹ ಸುಳ್ಳು ಭರವಸೆಗಳನ್ನು ನೀಡುವ ವ್ಯಕ್ತಿಯನ್ನು ನಾನು ನೋಡಿಲ್ಲ. ಆಪ್ ನೀಡಿದ ಯಾವುದೇ ಭರವಸೆಗಳನ್ನು ಈಡೇರಿಸುವುದಿಲ್ಲ. ನಾನು ಮತ್ತು ನನ್ನ ಸಚಿವರು ಸರ್ಕಾರಿ ಬಂಗಲೆ ಬಳಸುವುದಿಲ್ಲ ಎಂದಿದ್ದರು. 10 ವರ್ಷಗಳಿಂದ ಸರ್ಕಾರಿ ಬಂಗಲೆಯನ್ನು 51 ಕೋಟಿ ರೂಪಾಯಿ ವೆಚ್ಚದಲ್ಲಿ ನವೀಕರಿಸಿ ಐಷಾರಾಮಿ ಜೀವನ ನಡೆಸಿದರು ಎಂದು ಆರೋಪಿಸಿದರು.

## ಇಸ್ರೇಲಿ ಮಹಿಳಾ ಸೈನಿಕರು ಬಿಡುಗಡೆ

**ಗಾಝಾ:** ಗಾಝಾ ಕದನ ವಿರಾಮದ ಬಳಿಕ 477 ದಿನಗಳ ಕಾಲ ಸೆರೆಯಲ್ಲಿದ್ದ ನಾಲ್ವರು ಇಸ್ರೇಲಿ ಮಹಿಳಾ ಸೈನಿಕರನ್ನು ಹಮಾಸ್ ಬಿಡುಗಡೆ ಮಾಡಿದೆ.ನಾಲ್ವರು ಇಸ್ರೇಲಿ ಸೈನಿಕರನ್ನ ಹಮಾಸ್ ಇಂದು ಬಿಡುಗಡೆ ಮಾಡಿದ್ದು, ಇನ್ನವ್ರು ಮಿಲಿಟರಿ ಸಮವಸ್ತ್ರದಲ್ಲಿ ಕರೆತಂದು ವೇದಿಕೆಯ ಮೇಲೆ ನಿಂತು ಕೈ ಬೀಸಿದರು. ಅವರನ್ನು ರೆಡ್ ಕ್ರಾಸ್ ಸದಸ್ಯರಿಗೆ ಹಸ್ತಾಂತರಿಸಲಾಯಿತು ಮತ್ತು ವಾಹನವು ಈಗ ಒತ್ತೆಯಾಳುಗಳೊಂದಿಗೆ ಗಾಝಾದಿಂದ ಹೊರಟಿದೆ. ಅಕ್ಟೋಬರ್ 7, 2023 ರಿಂದ ಒತ್ತೆಯಾಳುಗಳಾಗಿದ್ದ ನಾಲ್ವರು ಇಸ್ರೇಲಿ ಮಹಿಳಾ ಸೈನಿಕರನ್ನು ಬಿಡುಗಡೆ ಮಾಡುವುದಾಗಿ ಹಮಾಸ್ ಶುಕ್ರವಾರ ಉಲ್ಲೇಖಿಸಿತ್ತು. ಇಸ್ರೇಲ್ ಮತ್ತು ಗಾಜಾ ನಡುವಿನ ಕದನ ವಿರಾಮ ಒಪ್ಪಂದದ ಅಡಿಯಲ್ಲಿ ಇದು ಎರಡನೇ ವಿನಿಮಯವಾಗಿದೆ.



## ಒಂದು ರಾಷ್ಟ್ರ ಒಂದು ಚುನಾವಣೆ ಮಸೂದೆ: ರಾಷ್ಟ್ರಪತಿ ದ್ರೌಪದಿ ಮುರ್ಮು ಬೆಂಬಲ



**ಹೊಸದಿಲ್ಲಿ:** ಒಂದು ರಾಷ್ಟ್ರ ಒಂದು ಚುನಾವಣೆ ಮಸೂದೆಗೆ ಬೆಂಬಲ ಸೂಚಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಷ್ಟು ದೊಡ್ಡ ಸುಧಾರಣೆಗಳಿಗೆ ದೂರದೃಷ್ಟಿಯ ಧೈರ್ಯ ಬೇಕು. ಇದು ಉತ್ತಮ ಆಡಳಿತದ ನಿಯಮಗಳನ್ನು ಮರು ವ್ಯಾಖ್ಯಾನಿಸುತ್ತದೆ. ರಾಜ್ಯದ ಮೇಲಿನ ಆರ್ಥಿಕ ಹೊರೆಗಳನ್ನು ಕಡಿಮೆ ಮಾಡುವ ಮೂಲಕ ದೇಶದಲ್ಲಿ ಉತ್ತಮ ಆಡಳಿತವನ್ನು ಒಂದು ರಾಷ್ಟ್ರ, ಒಂದು ಚುನಾವಣೆ ಪ್ರತಿಪಾದಿಸುತ್ತದೆ?? ಎಂದರು. ಗಣರಾಜ್ಯೋತ್ಸವ ದ ಮುನ್ನಾ ದಿನವಾರ ಜ. 25 ರಾಷ್ಟ್ರವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಸಂವಿಧಾನವು ಭಾರತೀಯರಾದ ನಮ್ಮ ಗುರುತಿಗೆ ಉತ್ತಮ ಅಡಿಪಾಯ ಒದಗಿಸುತ್ತದೆ. ಅದು ನಮ್ಮನ್ನು ಒಂದು ಕುಟುಂಬವಾಗಿ ಒಟ್ಟು ಸೇರಿಸುತ್ತದೆ ಎಂದು ಅವರು ತಿಳಿಸಿದರು. ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವವು ಯಾವಾಗಲೂ ಭಾರತದ ನಾಗರಿಕ ಪರಂಪರೆಯ ಭಾಗ ಎಂದು ಅವರು ಬಣ್ಣಿಸಿದರು.

ನಾಗರಿಕ ಸದ್ಗುಣಗಳು ಸಹಸ್ರಮಾನಗಳಿಂದ ನಮ್ಮ ನೈತಿಕ ದಿಕ್ಸೂಚಿಯ ಭಾಗವಾಗಿರುವುದರಿಂದ ಸಂವಿಧಾನವು ಜೀವಂತ ದಾಖಲೆ ಎನಿಸಿಕೊಂಡಿದೆ. ಕಳೆದ 75 ವರ್ಷಗಳಲ್ಲಿ, ಸಂವಿಧಾನವು ನಮ್ಮ ಅಭಿವೃದ್ಧಿಗೆ ದಾರಿ ಮಾಡಿಕೊಟ್ಟಿದೆ. ಕರಡು ಸಮಿತಿಯ ಅಧ್ಯಕ್ಷ ಡಾ. ಭೀಮರಾವ್ ಅಂಬೇಡ್ಕರ್ ಮತ್ತು ನಮಗೆ ಸಂವಿಧಾನವನ್ನು ನೀಡಿದ ಇತರ ಸದಸ್ಯರಿಗೆ ಈ ಸಂದರ್ಭದಲ್ಲಿ ಕೃತಜ್ಞತೆ ಸಲ್ಲಿಸುತ್ತಿದ್ದೇವೆ. ಸಂವಿಧಾನ ಅನುಷ್ಠಾನಗೊಂಡ ನಂತರದ ಈ 75 ವರ್ಷಗಳು ನಮ್ಮ ಯುವ ಗಣರಾಜ್ಯದ ಸರ್ವಾಂಗೀಣ ಪ್ರಗತಿಯ ಒಡನಾಡಿಗಳಾಗಿವೆ ಎಂದು ಅವರು ಹೇಳಿದರು. ತಮ್ಮ 3ನೇ ಗಣರಾಜ್ಯೋತ್ಸವದ ಮುನ್ನಾದಿನದ ಭಾಷಣದಲ್ಲಿ ಮುರ್ಮು ಅವರು, ಸರ್ಕಾರವು ಅಭಿವೃದ್ಧಿಯ ಕಲ್ಪನೆಯನ್ನು ಮರು ವ್ಯಾಖ್ಯಾನಿಸಿದೆ, ಮೂಲಭೂತ ಅವಶ್ಯಕತೆಗಳನ್ನು ಅರ್ಹತೆಯ ವಿಷಯವನ್ನಾಗಿ ಮಾಡಿದೆ ಎಂದು ಹೇಳಿದರು.

# ಪವಿತ್ರ ಸ್ನಾನಕ್ಕಾಗಿ ಫೆ.1 ರಂದು 73 ರಾಷ್ಟ್ರಗಳ ರಾಯಭಾರಿಗಳ ಆಗಮನ!

**ನವದೆಹಲಿ:** ಉತ್ತರ ಪ್ರದೇಶದ ಪ್ರಯಾಗ್ ರಾಜ್ ನಲ್ಲಿ ನಡೆಯುತ್ತಿರುವ ಜಗತ್ತಿನ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮ ಮಹಾಕುಂಭ ಮೇಳದ ವೇಳೆ ಸಂಗಮದಲ್ಲಿ ಸ್ನಾನ ಮಾಡಲು ವಿವಿಧ ದೇಶಗಳ ರಾಯಭಾರಿಗಳು ಆಗಮಿಸುತ್ತಿದ್ದಾರೆ.

ರಷ್ಯಾ ಮತ್ತು ಉಕ್ರೇನ್‌ನ ರಾಯಭಾರಿಗಳು ಸೇರಿದಂತೆ 73 ದೇಶಗಳ ರಾಜತಾಂತ್ರಿಕರು ಇದೇ ಮೊದಲ ಬಾರಿಗೆ ಕುಂಭ ಮೇಳದಲ್ಲಿ ಸ್ನಾನ ಮಾಡಲು ಆಗಮಿಸುತ್ತಿದ್ದು, ಅವರು ಫೆಬ್ರವರಿ 1 ರಂದು ಬರಲಿದ್ದಾರೆ ಎಂದು ಮೇಳದ ಅಧಿಕಾರಿ ವಿಜಯ್ ಕಿರಣ್ ಆನಂದ್ ಖಚಿತಪಡಿಸಿದ್ದಾರೆ.

ಈ ಸಂಬಂಧ ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಉತ್ತರ ಪ್ರದೇಶದ ಮುಖ್ಯ ಕಾರ್ಯದರ್ಶಿಗೆ ಪತ್ರವನ್ನೂ ಬರೆದಿದ್ದು, ಜಪಾನ್, ಯುಎಸ್ಎ, ರಷ್ಯಾ, ಉಕ್ರೇನ್, ಜರ್ಮನಿ, ನೆದರ್ಲ್ಯಾಂಡ್ಸ್, ಕ್ಯಾಮರೂನ್, ಕೆನಡಾ, ಸ್ವಿಟ್ಜರ್ಲೆಂಡ್, ಸ್ವೀಡನ್, ಪೋಲೆಂಡ್, ಬೊಲಿವಿಯಾ ಸೇರಿದಂತೆ ವಿವಿಧ ರಾಷ್ಟ್ರಗಳ ರಾಜತಾಂತ್ರಿಕರು ಮಹಾ



ಕುಂಭದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಈ ಎಲ್ಲಾ ವಿದೇಶಿ ರಾಜತಾಂತ್ರಿಕರು ದೋಣಿ ಮೂಲಕ ಸಂಗಮ ತಲುಪಲಿದ್ದು, ಪವಿತ್ರ ಸ್ನಾನ ಮಾಡುತ್ತಾರೆ. ತದನಂತರ ಅವರು ಅಕ್ಷಯವತ್ ಮತ್ತು ಬಡೇ ಹನುಮಾನ್ ದೇವಾಲಯಕ್ಕೂ ಭೇಟಿ ನೀಡಲಿದ್ದಾರೆ. ಡಿಜಿಟಲ್ ಮಹಾಕುಂಭ ಅನುಭವ ಕೇಂದ್ರದಲ್ಲಿ ಮಹಾ ಕುಂಭ ಮೇಳ ಕುರಿತು ಅರಿತುಕೊಳ್ಳಲಿದ್ದಾರೆ. ಎಂಇಎ ಮತ್ತು ಗೃಹ ಸಚಿವಾಲಯದ ಅಧಿಕಾರಿಗಳು ರಾಜತಾಂತ್ರಿಕರಿಗೆ ಸುಗಮ ಅನುಭವ ಖಾತ್ರಿಗಾಗಿ ಸಿದ್ಧತೆಗಳಲ್ಲಿ ನಿರತರಾಗಿದ್ದಾರೆ ಎಂದು ಪತ್ರದಲ್ಲಿ ತಿಳಿಸಲಾಗಿದೆ.

# ಏ.1ರಿಂದ ಏಕೀಕೃತ ಪಿಂಚಣಿ ಯೋಜನೆ ಜಾರಿ

**ದೆಹಲಿ:** ಕೇಂದ್ರ ಸರ್ಕಾರಿ ನೌಕರರಿಗೆ ನೀಡುವ ಏಕೀಕೃತ ಪಿಂಚಣಿ ಯೋಜನೆ ಏಪ್ರಿಲ್ 1, 2025 ರಿಂದ ಜಾರಿಗೆ ಬರಲಿದೆ. ರಾಷ್ಟ್ರೀಯ ಪಿಂಚಣಿ ವ್ಯವಸ್ಥೆ ಅಡಿಯಲ್ಲಿ ಕೇಂದ್ರ ಸರ್ಕಾರದ ನೌಕರರಿಗೆ ಯುಪಿಎಸ್ ನ್ನು ವರ್ಧಿತ ಆಯ್ಕೆಯಾಗಿ ಪರಿಚಯಿಸಲು ಸರ್ಕಾರ ಈ ಹಿಂದೆ ನಿರ್ಧರಿಸಿತ್ತು.

ನಿನ್ನೆ ಶನಿವಾರ ಹೊರಡಿಸಿದ ಅಧಿಸೂಚನೆಯಲ್ಲಿ, ಸರ್ಕಾರಿ ಉದ್ಯೋಗಿ - ಈಗಿನ ಅಥವಾ ಭವಿಷ್ಯದ - ಏಕೀಕೃತ ಪಿಂಚಣಿ ಯೋಜನೆಯನ್ನು ಆಯ್ಕೆ ಮಾಡಿಕೊಂಡ ನಂತರ, ಮತ್ತೆ ಎನ್ ಪಿಎಸ್ ಗೆ ಹಿಂತಿರುಗಲು ಸಾಧ್ಯವಾಗುವುದಿಲ್ಲ ಎಂದು ಹೇಳಿದೆ.

ರಾಜ್ಯ ಸರ್ಕಾರಗಳು ಕೂಡ ತಮ್ಮ ಉದ್ಯೋಗಿಗಳಿಗೆ ಈ ಯೋಜನೆಯನ್ನು ಜಾರಿಗೆ ತರಬಹುದು. ಮಾರ್ಚ್ 31, 2024 ರಂತೆ, 26 ಲಕ್ಷ ಕೇಂದ್ರ ಸರ್ಕಾರ ಮತ್ತು 66 ಲಕ್ಷ ರಾಜ್ಯ ಸರ್ಕಾರಿ ನೌಕರರು ಎನ್‌ಪಿಎಸ್‌ಗೆ ಕೊಡುಗೆಗಳನ್ನು ನೀಡುತ್ತಿದ್ದರು. ಎನ್‌ಪಿಎಸ್ ಅಡಿಯಲ್ಲಿ 11.7 ಲಕ್ಷ ಕಾರ್ಪಸ್‌ನಲ್ಲಿ, ರಾಜ್ಯ ಮತ್ತು ಕೇಂದ್ರ ಸರ್ಕಾರಿ ನೌಕರರು 9 ಲಕ್ಷ ಕೋಟಿ ರೂಪಾಯಿಗಳ ಪಾಲನ್ನು ಹೊಂದಿದ್ದಾರೆ. ಕನಿಷ್ಠ 25 ವರ್ಷ ಸೇವೆ ಸಲ್ಲಿಸಿರುವ ಉದ್ಯೋಗಿಗಳಿಗೆ ನಿವೃತ್ತಿಗೆ ಮೊದಲು ಹನ್ನೆರಡು ಮಾಸಿಕ ಸರಾಸರಿ ಮೂಲ ವೇತನದ ಶೇಕಡಾ 50ರಷ್ಟು ಖಚಿತವಾದ ಮಾಸಿಕ ಪಾವತಿಯನ್ನು ಈ ಯೋಜನೆ ಖಾತರಿಪಡಿಸುತ್ತದೆ. ಈ ಯೋಜನೆಯು 25 ವರ್ಷಗಳಿಗಿಂತ ಕಡಿಮೆ ಸೇವೆ ಸಲ್ಲಿಸಿದ ಆದರೆ 10 ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯನ್ನು ಪೂರ್ಣಗೊಳಿಸಿದ ಸರ್ಕಾರಿ ನೌಕರರಿಗೆ ಕನಿಷ್ಠ 10,000 ರೂಪಾಯಿ ಮಾಸಿಕ ಪಿಂಚಣಿಯನ್ನು ಖಾತರಿಪಡಿಸುತ್ತದೆ. ಕನಿಷ್ಠ 25 ವರ್ಷಗಳ ನಂತರ ಸ್ವಯಂಪ್ರೇರಿತ ನಿವೃತ್ತಿಯ ಸಂದರ್ಭಗಳಲ್ಲಿ, ಉದ್ಯೋಗಿ ಸೇವೆಯಲ್ಲಿ ಮುಂದುವರಿದಿದ್ದರೆ, ಅವರು ನಿವೃತ್ತರಾಗುತ್ತಿದ್ದ ದಿನಾಂಕದಿಂದ ಖಚಿತ ಪಾವತಿಯು ಪ್ರಾರಂಭವಾಗುತ್ತದೆ.

## ಕುರ್ಸಿಯಾಂಗ್‌ನಲ್ಲಿ ಅಪರೂಪದ ಕಪ್ಪು ಚಿರತೆ ಪತ್ತೆ

**ಕೋಲ್ಕತಾ:** ಪ್ರಸ್ತುತ ನಾವು ವಿಶಿಷ್ಟ ವನ್ಯಜೀವ ಪ್ರಭೇದಗಳನ್ನು ನೋಡುವುದು ಅಪರೂಪವಾದರೂ ಪಶ್ಚಿಮ ಬಂಗಾಳದ ಕುರ್ಸಿಯಾಂಗ್ನಲ್ಲಿ ಕಪ್ಪು ಚಿರತೆಯೊಂದು ಪತ್ತೆಯಾಗಿದೆ. ಅರಣ್ಯ ಪ್ರದೇಶದಲ್ಲಿ ಸಫಾರಿಗೆ ಪ್ರವಾಸಿಗರು ತೆರಳುತ್ತಿದ್ದ ಸಂದರ್ಭದಲ್ಲಿ ಈ ಕರಿ ಚಿರತೆ ಕಾಣಿಸಿಕೊಂಡಿದೆ. ಇದರ ವಿಡಿಯೊ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಅರಣ್ಯ ಅಧಿಕಾರಿಯೊಬ್ಬರು ಕಪ್ಪು ಪ್ಯಾಂಥರ್ ಓಡಾಡುವ ವಿಡಿಯೊ ವೊಂದನ್ನು ಹಂಚಿಕೊಂಡಿದ್ದಾರೆ. ಸದ್ಯ ಈ ವಿಡಿಯೊ ಬಹಳಷ್ಟು ವೈರಲ್ ಆಗುತ್ತಿದೆ. ಅರಣ್ಯ ಪ್ರದೇಶದ ರಸ್ತೆ ಪಕ್ಕವೊಂದರಲ್ಲಿ ಸಫಾರಿಗೆ ಅಂತ ತೆರಳಿದ್ದ ಕಪ್ಪು ಚಿರತೆಯ ವಿಡಿಯೊವನ್ನು ಪರ್ವೀನ್ ಕಸ್ವಾನ್ ಎನ್ನುವವರು ಹಂಚಿಕೊಂಡಿದ್ದಾರೆ. ಉತ್ತರ ಬಂಗಾಳದ ಈ ಕಪ್ಪು ಪ್ಯಾಂಥರ್ಗಳ ವಿಶಿಷ್ಟ ಲಕ್ಷಣಗಳನ್ನು ಅವರು ವಿವರಿಸಿದ್ದಾರೆ. ಇತ್ತೀಚಿನ ದಿನದಲ್ಲಿ ಈ ಅರಣ್ಯ ಪ್ರದೇಶದಲ್ಲಿ ಅಪರೂಪದ ಪ್ರಾಣಿ-ಪಕ್ಷಿ ಪತ್ತೆಯಾಗಿದ್ದವು. ಇಲ್ಲಿನ ಅಪರೂಪದ ಪ್ರಾಣಿಗಳ ಪಟ್ಟಿಗೆ ಇದೀಗ ಕಪ್ಪು ಚಿರತೆಯೂ ಸೇರ್ಪಡೆಯಾದಂತಾಗಿದೆ. ಚಿರತೆ ಕಪ್ಪು ಬಣ್ಣದಲ್ಲಿ ಇರಲು ಕಾರಣವೇನು ಎಂಬುದನ್ನು ಇವರು ತಿಳಿಸಿದ್ದಾರೆ. ದೇಹದಲ್ಲಿ ಮೆಲಾನಿನ್ ಅಂಶ ಹೆಚ್ಚಾದರೆ ಅಥವಾ ಮೆಲನಿಸಮ್ ಎಂಬ ಆನುವಂಶಿಕ ಕಾರಣದಿಂದಾಗಿ ಈ ಪ್ರಾಣಿಗಳು ಕಪ್ಪು ಬಣ್ಣದಲ್ಲಿ ಕಾಣಿಸಿಕೊಳ್ಳುತ್ತವೆ. ಇದರಿಂದಾಗಿ ಪ್ರಾಣಿಗಳು ತಮ್ಮ ಸಾಮಾನ್ಯ ಬಣ್ಣ ಕಳೆದುಕೊಳ್ಳುತ್ತದೆ. ಅದೇ ರೀತಿ ಚಿರತೆ ಕೂಡ ತಮ್ಮ ಸಹಜವಾದ ಬಣ್ಣ ಕಳೆದುಕೊಂಡು ಕಪ್ಪು ಬಣ್ಣಕ್ಕೆ ತಿರುಗಿದೆ. ಬಣ್ಣ ಹೊರತುಪಡಿಸಿದರೆ ಇತರ ಗುಣಗಳಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದಿದ್ದಾರೆ.



## ಅಜ್ಮೀರ್ ಸಮೀಪ ಹಿಂದೂ ಸೇನೆ ಅಧ್ಯಕ್ಷರ ಕಾರಿನ ಮೇಲೆ ಗುಂಡು

**ಜೈಪುರ:** ಹಿಂದೂ ಸೇನೆಯ ಅಧ್ಯಕ್ಷ ವಿಷ್ಣು ಗುಪ್ತರ ಕಾರಿನತ್ತ ಇಬ್ಬರು ಗುಂಡು ಹಾರಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ವಿಷ್ಣು ಗುಪ್ತ ಶನಿವಾರ ಮುಂಜಾನೆ ಅಜ್ಮೀರ್‌ನಿಂದ ದಿಲ್ಲಿಗೆ ವಾಪಸಾಗುತ್ತಿದ್ದಾಗ ದಾಳಿ ನಡೆದಿದೆ ಎನ್ನಲಾಗಿದೆ.ಭಾರತೀಯ ಪುರಾತತ್ವ ಇಲಾಖೆ (ಎಎಸ್‌ಐ)ಯು ಅಜ್ಮೀರ್ ಶರೀಫ್ ದರ್ಗಾದ ಸಮೀಕ್ಷೆ ನಡೆಸಬೇಕು ಎಂದು ಕೋರಿ ವಿಷ್ಣು ಶರ್ಮಾ ಕಳೆದ ವರ್ಷ ನ್ಯಾಯಾಲಯವೊಂದರಲ್ಲಿ ಅರ್ಜಿ ಸಲ್ಲಿಸಿದ್ದರು.''ಅಜ್ಮೀರ್-ದಿಲ್ಲಿ ಎಕ್ಸ್‌ಪ್ರೆಸ್‌ವೇಯಲ್ಲಿ ಗಂಗ್ ವಾನಾ ಗ್ರಾಮದ ಸಮೀಪ ಬೆಳಗ್ಗೆ 6 ಗಂಟೆಯ ಸುಮಾರಿಗೆ ಈ ಘಟನೆ ನಡೆದಿದೆ. ಮೇಲ್ನೋಟಕ್ಕೆ ಕಾರಿನಲ್ಲಿ ಗುಂಡಿನ ರಂಧ್ರವೊಂದು ಪತ್ತೆಯಾಗಿದೆ. ಕಾರು ಮತ್ತು ಸುತ್ತಲಿನ ಪ್ರದೇಶವನ್ನು ಪರಿಶೀಲಿಸಲು ವಿಧಿವಿಜ್ಞಾನ ಪ್ರಯೋಗಾಲಯ ತಂಡವನ್ನು ನಾವು ಕರೆದಿದ್ದೇವೆ. ಸ್ಥಳದ ಸಿಸಿಟಿವಿ ದೃಶ್ಯಗಳನ್ನೂ ಪರಿಶೀಲಿಸುತ್ತಿದ್ದೇವೆ. ವಿಷ್ಣು ಗುಪ್ತಾ ಕ್ಷೇಮವಾಗಿದ್ದಾರೆ. ನಾವು ಅವರನ್ನು ಪ್ರಶ್ನಿಸುತ್ತಿದ್ದೇವೆ ಮತ್ತು ಪಾತಕಿಗಳಿಗಾಗಿಯೂ ಹುಡುಕಾಡುತ್ತಿದ್ದೇವೆ'' ಎಂದು ಅಜ್ಮೀರ್ ಪೊಲೀಸ್ ಸೂಪರಿಂಟೆಂಡೆಂಡ್ ವಂದಿತಾ ರಾಣಾ ತಿಳಿಸಿದರು.ಅಜ್ಮೀರ್ ದರ್ಗಾಕ್ಕೆ ಸಂಬಂಧಿಸಿದ ಪ್ರಕರಣದ ವಿಚಾರಣೆಗಾಗಿ ವಿಷ್ಣು ಗುಪ್ತಾ ಶುಕ್ರವಾರ ಅಜ್ಮೀರ್‌ಗೆ ಬಂದಿದ್ದರು.



# ಇಂಡೋ - ಬಾಂಗ್ಲಾ ಗಡಿಯಲ್ಲಿ ನಿಷೇಧಿತ ಕೆಮ್ಮಿನ ಸಿರಪ್ ಪತ್ತೆ

**ಕೃಷ್ಣಗಂಜ್:** ನಾಡಿಯಾದ ಕೃಷ್ಣಗಂಜ್ನ ಮಜ್ದಿಯಾದಲ್ಲಿರುವ ಭಾರತ - ಬಾಂಗ್ಲಾದೇಶ ಗಡಿಯಲ್ಲಿ ಕೋಟ್ಯಂತರ ರೂಪಾಯಿ ಮೌಲ್ಯದ ನಿಷೇಧಿತ ಕೆಮ್ಮು ಸಿರಪ್ಗಳನ್ನ ತುಂಬಿದ್ದ ಮೂರು ಭೂಗತ ಕಬ್ಬಿಣದ ಬಂಕರ್ಗಳನ್ನು ಬಿಎಸ್‌ಎಫ್ ಸಿಬ್ಬಂದಿ ಶುಕ್ರವಾರ ಪತ್ತೆ ಮಾಡಿದ್ದಾರೆ. ಈ ಘಟನೆಗೆ ಸಂಬಂಧಿಸಿದಂತೆ ಯಾರನ್ನೂ ಬಂಧಿಸಿಲ್ಲ.

ಬಿಎಸ್‌ಎಫ್ ಮೂಲಗಳ ಪ್ರಕಾರ, ನಾಡಿಯಾದ ಸುಧೀರಂಜನ್ ಮಹಾವಿದ್ಯಾಲಯದ ಬಳಿಯ ಉದ್ಯಾನದಲ್ಲಿ ಮೂರು ಬಂಕರ್ಗಳು ಇರುವ ಬಗ್ಗೆ ಸುಳಿವು ಸಿಕ್ಕಿತ್ತು. ನಂತರ ಬಿಎಸ್‌ಎಫ್ ದಕ್ಷಿಣ ಬಂಗಾಳದ 32 ಬೆಟಾಲಿಯನ್ ಯೋಧರು ದಾಳಿ ನಡೆಸಿ ಅವುಗಳನ್ನ ಪತ್ತೆ ಮಾಡಿದ್ದಾರೆ. 1.41 ಕೋಟಿ ಮೌಲ್ಯದ 62,200 ಫೆನ್ಸೆಡಿಲ್ ಸಿರಪ್ ಬಾಟಲಿಗಳು ಬಂಕರ್ನಲ್ಲಿ ಪತ್ತೆಯಾಗಿವೆ. ನಂತರ ಸಿರಪ್ ಬಾಟಲಿಗಳನ್ನು ಕಾನೂನು ಕ್ರಮಕ್ಕಾಗಿ ಸಂಬಂಧಪಟ್ಟ ಇಲಾಖೆಗೆ ಕಳುಹಿಸಿದ್ದಾರೆ. ಕೆಮ್ಮಿನ ಸಿರಪ್ಗಳನ್ನು ಬಾಂಗ್ಲಾದೇಶಕ್ಕೆ ಕಳ್ಳಸಾಗಣೆ ಮಾಡಲು ಸಂಗ್ರಹಿಸಲಾಗಿದೆ ಎಂದು ಬಿಎಸ್ ಎಫ್ ಯೋಧರು ತಿಳಿಸಿದ್ದಾರೆ. ಗಣರಾಜ್ಯೋತ್ಸವ ಆಚರಣೆ ಹಿನ್ನೆಲೆ



ಗಡಿಯಲ್ಲಿ ಹೆಚ್ಚಿನ ಭದ್ರತೆ ಒದಗಿಸಿದ್ದರಿಂದಾಗಿ ಕಳ್ಳಸಾಗಾಣಿಕೆದಾರರು ಸಿರಪ್ ಬಾಟಲಿಗಳನ್ನ ಸಾಗಿಸದೇ ನೆಲದಡಿ ಹುದುಗಿಸಿಟ್ಟಿದ್ದರು. ಬಿಎಸ್ ಎಫ್ ಯೋಧರು ಇವುಗಳನ್ನ ಪತ್ತೆ ಮಾಡಿದ ನಂತರ, ವಿಷಯ ತಿಳಿದು ಕೃಷ್ಣಗಂಜ್ ಪೊಲೀಸರು ಸ್ಥಳಕ್ಕೆ ಬಂದು ಪರಿಶೀಲಿಸಿದ್ದಾರೆ. ಆದರೆ, ಘಟನೆಯ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದ್ದಾರೆ.

# ಎಎಪಿ ವಿರುದ್ಧ ಚುನಾವಣಾ ಆಯೋಗಕ್ಕೆ ಕಾಂಗ್ರೆಸ್ ದೂರು

**ನವದೆಹಲಿ:** ಎಎಪಿ ತನ್ನ ನಾಯಕರ ವಿರುದ್ಧ ಸಾಮಾಜಿಕ ಮಾಧ್ಯಮದಲ್ಲಿ ''ಮಾನಹಾನಿಕರ ಪೋಸ್ಟರ್'' ಅಪ್ಲೋಡ್ ಮಾಡಿದೆ ಎಂದು ದೆಹಲಿ ಕಾಂಗ್ರೆಸ್ ಶನಿವಾರ ಭಾರತದ ಚುನಾವಣಾ ಆಯೋಗಕ್ಕೆ ದೂರು ನೀಡಿದೆ.

ದೂರಿನ ಪ್ರಕಾರ, ದೆಹಲಿಯ ಆಡಳಿತ ಪಕ್ಷವು ತನ್ನ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಮತ್ತು ಇತರ ನಾಯಕರನ್ನ ಗುರಿಯಾಗಿಸಿಕೊಂಡಿದೆ.



ಶನಿವಾರ ಎಎಪಿ (ಆಮ್ ಆದ್ಮಿ ಪಕ್ಷ) ತನ್ನ ಅಧಿಕೃತ ಎಕ್ಸ್ ಹ್ಯಾಂಡಲ್ನಲ್ಲಿ ವಿವಿಧ ಹಿರಿಯ ಕಾಂಗ್ರೆಸ್ ನಾಯಕರಾದ ಲೋಕಸಭಾ ಎಲ್‌ಒಪಿ ರಾಹುಲ್ ಗಾಂಧಿ, ಎಐಸಿಸಿ ಖಜಾಂಚಿ ಅಜಯ್ ಮಾಕೆನ್ ಮತ್ತು ಸಂದೀಪ್ ದೀಕ್ಷಿತ್ ವಿರುದ್ಧ ಮಾನಹಾನಿಕರ ಚಿತ್ರವನ್ನು ಪೋಸ್ಟ್ ಮಾಡಿದೆ ಎಂದು ನಿಮ್ಮ ಗಮನಕ್ಕೆ ತರುತ್ತೇನೆ.

ಈ ಪೋಸ್ಟ್ಗೆ ''ಏಕ್ ಅಕೇಲಾ ಪಡೇಗಾ ಸಬ್ ಪರ್ ಭಾರಿ'' ಎಂಬ ಶೀರ್ಷಿಕೆ ನೀಡಲಾಗಿದ್ದು, ಅರವಿಂದ್ ಕೇಜ್ರಿವಾಲ್ ಅವರ ಚಿತ್ರವನ್ನ 'ಕೇಜ್ರಿವಾಲ್ ಕಿ ಇಮಾಂದಾರಿ' ಎಂಬ ಶೀರ್ಷಿಕೆಯೊಂದಿಗೆ ಮತ್ತು ಅವರ ಕೆಳಗೆ ಕಾಂಗ್ರೆಸ್ ನಾಯಕರ ಚಿತ್ರವನ್ನ ''ಸಾರೆ ಬೀಮಾನೊ ಪರ್ ಪಡೇಗಿ ಭಾರ್'' ಎಂಬ ಶೀರ್ಷಿಕೆಯೊಂದಿಗೆ ಹಾಕಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

## ಮುಂಬೈ ದಾಳಿ ರೂವಾರಿ ತಹವ್ವುರ್ ಹಸ್ತಾಂತರಕ್ಕೆ ಸಮ್ಮತಿ

**ವಾಷಿಂಗ್ಟನ್:** ಮುಂಬೈ ದಾಳಿಯ ರೂವಾರಿ ತಹವ್ವುರ್ ರಾಣಾನನ್ನು ಭಾರತಕ್ಕೆ ಹಸ್ತಾಂತರಿಸಲು ಅಮೆರಿಕ ಸುಪ್ರೀಂ ಕೋರ್ಟ್ ಸಮ್ಮತಿಸಿದೆ.

ಪಾಕಿಸ್ತಾನ ಮೂಲದ ಕೆನಡಾ ಪ್ರಜೆಯಾಗಿರುವ ರಾಣಾನ ಹಸ್ತಾಂತರಕ್ಕೆ ಭಾರತವು ಮನವಿ ಮಾಡಿತ್ತು. 2008ರ ಮುಂಬೈ ದಾಳಿಯ ಪ್ರಕರಣದಲ್ಲಿ ವಾಂಟೆಡ್ ಅಪರಾಧಿ ಈತನಾಗಿದ್ದಾನೆ. ಭಾರತಕ್ಕೆ ಹಸ್ತಾಂತರ ಕುರಿತು ನಡೆದ ಕಡೆಯ ಕಾನೂನು ಸಾಧ್ಯತೆ ಹೋರಾಟ ಕೂಡ ಇದಾಗಿತ್ತು. ಈ ಮೊದಲು ಸ್ಯಾನ್ ಫ್ರಾನ್ಸಿಸ್ಕೊದಲ್ಲಿನ ನಾರ್ಥ್ ಸರ್ಕ್ಯೂಟ್ಗೆ ಕೂಡ ಅಮೆರಿಕ ಕೋರ್ಟ್ ಮನವಿ ಸೇರಿದಂತೆ ಅನೇಕ ಫೆಡರಲ್ ಕೋರ್ಟ್ನಲ್ಲಿ ಈ ಕುರಿತು ಹೋರಾಟ ನಡೆಸಲಾಗಿತ್ತು.



ಅಮೆರಿಕ ಸುಪ್ರೀಂ ಕೋರ್ಟ್ಗೆ ಸರ್ಟಿಯೊರಾರಿ ರಿಟ್ಗಾಗಿ ರಾಣಾ ನವೆಂಬರ್ 13ರಂದು ಅರ್ಜಿ ಸಲ್ಲಿಸಿದ್ದ. ಅಮೆರಿಕ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಪ್ರಮಾಣವಚನ ಸ್ವೀಕರಿಸುವ ಮುನ್ನಾದಿನ ಜನವರಿ 21ರಂದು ಇದನ್ನು ಸುಪ್ರೀಂ ಕೋರ್ಟ್ ಅರ್ಜಿ ನಿರಾಕರಿಸಿತ್ತು. 64 ವರ್ಷದ ರಾಣಾ ಸದ್ಯ ಲಾಸ್ ಏಂಜಲೀಸ್ನ ಮೆಟ್ರೋಪಾಲಿಟನ್ ಡಿಟೆನ್ಷನ್ ಸೆಂಟರ್ನಲ್ಲಿ ಬಂಧಿಯಾಗಿದ್ದಾನೆ. ಈ ಮೊದಲು ಕೂಡ ಅಮೆರಿಕ ಸರ್ಕಾರ ರಾಣಾ ಸರ್ಟಿಯೊರಾರಿ ರಿಟ್ ಅರ್ಜಿ ಮನವಿಯನ್ನು ನಿರಾಕರಿಸುವಂತೆ ಮನವಿ ಮಾಡಿತ್ತು. ಅಮೆರಿಕ ಸಾಲಿಸಿಟರ್ ಜನರಲ್ ಎಲಿಜಬೆತ್ ಬಿ ಪ್ರೆಕೊಗರ್, ಡಿಸೆಂಬರ್ 16ರಂದು ಸುಪ್ರೀಂ ಕೋರ್ಟ್ಗೆ ಅರ್ಜಿ ಸಲ್ಲಿಕೆಗೂ ಮುನ್ನ ಇದನ್ನೇ ವಾದಿಸಿದ್ದರು. ರಾಣಾನನ್ನು ಈ ಪ್ರಕರಣದಲ್ಲಿ ಭಾರತಕ್ಕೆ ಹಸ್ತಾಂತರಿಸುವುದರಿಂದ ವಿನಾಯಿತಿ ನೀಡಬಾರದು ಎಂದಿದ್ದರು.

# ಜಮ್ಮು ಕಾಶ್ಮೀರದಲ್ಲಿ ನಿಗೂಢ ಕಾಯಿಲೆ: ಕಂಟೈನ್ಮೆಂಟ್ ಝೋನ್ ಘೋಷಣೆ

**ಶ್ರೀನಗರ:** ಜಮ್ಮು ಕಾಶ್ಮೀರದಲ್ಲಿ ನಿಗೂಢ ಕಾಯಿಲೆಯೊಂದು ಕಾಣಿಸಿಕೊಂಡು ಇದು ವರೆಗೂ 17 ಜೀವಗಳನ್ನು ಬಲಿ ಪಡೆದಿದೆ. ಸಾವಿನ ಪ್ರಮಾಣ ಹೆಚ್ಚಾಗುತ್ತಿದ್ದಂತೆ ಶನಿವಾರ ರಜೌರಿ ಜಿಲ್ಲೆಯ ಬಾಧಲ್ ಗ್ರಾಮದಲ್ಲಿ ಕಂಟೈನ್ಮೆಂಟ್ ವಲಯ ಮತ್ತು ಸೆಕ್ಷನ್ 144 ಅನ್ನು ವಿಧಿಸಲಾಗಿದೆ. ಜಿಲ್ಲಾಡಳಿತದ ಅಧಿಕಾರಿಗಳು ಗ್ರಾಮಕ್ಕೆ ಹೋಗುವ ಎಲ್ಲಾ ಮಾರ್ಗಗಳಲ್ಲಿ ಚೆಕ್ಪೋಸ್ಟ್ಗಳನ್ನು ಸ್ಥಾಪಿಸಿ ಪಡಿತರದಿಂದ ಹಿಡಿದು ಕುಡಿಯುವ ನೀರಿನವರೆಗೆ ಸೌಲಭ್ಯಗಳನ್ನು ಒದಗಿಸುತ್ತಿದ್ದಾರೆ.

ನಿಗೂಢ ಕಾಯಿಲೆ ಹರಡುವುದನ್ನು ತಡೆಗಟ್ಟಲು ಸಾರ್ವಜನಿಕ ಮತ್ತು ಖಾಸಗಿ ಕಾರ್ಯಕ್ರಮಗಳ ಮೇಲೆ ನಿರ್ಬಂಧವನ್ನು ಹೇರಲಾಗಿದೆ. ಅನಾರೋಗ್ಯದ ಕಾರಣ ಪತ್ತೆ ಮಾಡಲು ಗ್ರಾಮಗಳಿಗೆ ವೈದ್ಯಕೀಯ ತಂಡಗಳನ್ನು ನಿಯೋಜಿಸಲಾಗಿದೆ. ತಜ್ಞರ ಕೇಂದ್ರ ತಂಡವು ಸಾವಿನ ಕಾರಣವನ್ನು ತನಿಖೆ ನಡೆಸುತ್ತಿದೆ ಮತ್ತು 200 ಕ್ಕೂ ಹೆಚ್ಚು ಮಾದರಿಗಳನ್ನು ವಿವಿಧ ಸಂಸ್ಥೆಗಳಿಗೆ ಪರೀಕ್ಷೆಗೆ ಕಳುಹಿಸಲಾಗಿದೆ. ಪರಿಸ್ಥಿತಿ ಹದಗೆಡದಂತೆ ವೈದ್ಯರ ತಂಡ ಹಾಗೂ ನರ್ಸ್‌ಗಳು




ನಿರಂತರವಾಗಿ ಕೆಲಸ ಮಾಡುತ್ತಿದ್ದಾರೆ. ಪೀಡಿತರ ಸಂಪರ್ಕಕ್ಕೆ ಬಂದ ಜನರನ್ನು ಕ್ವಾರಂಟೈನ್ ಕೇಂದ್ರಗಳಿಗೆ ಕಳುಹಿಸಲಾಗುತ್ತಿದೆ.

ಈ ಬಗ್ಗೆ ಮಾತನಾಡಿದ ಶಾಸಕ ಬೂದಾಲ್ ಜಾವೈದ್ ಇಕ್ಬಾಲ್ ಆಡಳಿತ ತಂಡವು ಸರಿಯಾದ ಕಾಳಜಿ ಮತ್ತು ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳುತ್ತಿದೆ. ಹೆಚ್ಚುವರಿಯಾಗಿ, ಸುಧಾರಿತ ಆರೈಕೆ ಆಂಬ್ಯುಲೆನ್ಸ್‌ಗಳು ಆಸ್ಪತ್ರೆಯಲ್ಲಿ ಸಿದ್ಧವಾಗಿವೆ ಹೆಚ್ಚಿನ ಚಿಕಿತ್ಸೆ ನೀಡಲಾಗುವುದು. ಯಾರೂ ಭಯ ಪಡಬೇಕಾಗಿಲ್ಲ ಎಂದು ಹೇಳಿದ್ದಾರೆ.



ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

75 ವರ್ಷ ಸಂವಿಧಾನಕ್ಕೆ

ಗಾಂಧಿ ಭಾರತ

## ಭಾರತದ ಸಂವಿಧಾನ

### ಪ್ರಸ್ತಾವನೆ

ಭಾರತದ ಜನಗಳಾದ ನಾವು
ಭಾರತವನ್ನು ಒಂದು ಸಾರ್ವಭೌಮ ಸಮಾಜವಾದೀ
ಸರ್ವಧರ್ಮ ಸಮಭಾವದ ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ
ರಚಿಸಲು ಮತ್ತು ಅದರ ಸಮಸ್ತ ನಾಗರಿಕರಿಗೆ;
ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ:
ವಿಚಾರ, ಅಭಿವ್ಯಕ್ತಿ, ವಿಶ್ವಾಸ, ಧರ್ಮಶ್ರದ್ಧೆ ಮತ್ತು
ಉಪಾಸನಾ ಸ್ವಾತಂತ್ರ್ಯ:
ಸ್ಥಾನಮಾನ ಹಾಗೂ ಅವಕಾಶ ಸಮಾನತೆ
ದೊರೆಯುವಂತೆ ಮಾಡಲು ಮತ್ತು ವ್ಯಕ್ತಿ ಗೌರವವನ್ನು
ರಾಷ್ಟ್ರದ ಏಕತೆಯನ್ನು ಹಾಗೂ ಅಖಂಡತೆಯನ್ನು ಸುನಿಶ್ಚಿತಗೊಳಿಸಿ ಅವರಲ್ಲಿ
ಭ್ರಾತೃಭಾವನೆಯನ್ನು ವೃದ್ಧಿಗೊಳಿಸಲು
ಶ್ರದ್ಧಾಪೂರ್ವಕ ಸಂಕಲ್ಪ ಮಾಡಿದವರಾಗಿ;
ನಮ್ಮ ಸಂವಿಧಾನ ಸಭೆಯಲ್ಲಿ
1949ನೆಯ ಇಸವಿ ನವೆಂಬರ್ ತಿಂಗಳ ಇಪ್ಪತ್ತಾರನೆಯ ತಾರೀಖಾದ ಈ ದಿವಸ
ಈ ಮೂಲಕ ಈ ಸಂವಿಧಾನವನ್ನು ಅಂಗೀಕರಿಸಿ,
ಅಧಿನಿಯಮಿಸಿ ಅರ್ಪಿಸಿಕೊಂಡಿದ್ದೇವೆ.

ನಾಡಿನ ಸಮಸ್ತ ಜನತೆಗೆ

# ಗಣರಾಜ್ಯೋತ್ಸವದ ಶುಭಾಶಯಗಳು

**ಫ್ಯಾಸಿಸಂ ಅನ್ನು** ತಿರಸ್ಕರಿಸೋಣ
**ಕೋಮುವಾದವನ್ನು** ಹಿಮ್ಮೆಟ್ಟಿಸೋಣ
**ಸಂವಿಧಾನವನ್ನು** ಬಲಪಡಿಸೋಣ
**ಪ್ರಜಾಪ್ರಭುತ್ವದ ಮೌಲ್ಯಗಳನ್ನು** ಎತ್ತಿಹಿಡಿಯೋಣ
ಬನ್ನಿ, **ಗಾಂಧಿ ಭಾರತವನ್ನು** ಮರುನಿರ್ಮಿಸೋಣ

"75 ವರ್ಷಗಳ ಹಿಂದೆ ಇದೇ ದಿನ ಭಾರತ ಸಂವಿಧಾನವನ್ನು ಅಂಗೀಕರಿಸಿ **ಸಾರ್ವಭೌಮ ಗಣರಾಜ್ಯವಾಯಿತು.** ಇಂದು ನಮ್ಮ ಗಣರಾಜ್ಯ ಮತ್ತು ನಮ್ಮ ಸಂವಿಧಾನ ಅಪಾಯದಲ್ಲಿದೆ. ಫ್ಯಾಸಿಸ್ಟ್ ಮತ್ತು ವಿಭಜಕ ಶಕ್ತಿಗಳು ನಮ್ಮ ರಾಷ್ಟ್ರದ ಒಕ್ಕೂಟ ವ್ಯವಸ್ಥೆ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ದುರ್ಬಲಗೊಳಿಸುತ್ತಿವೆ. **ನಮ್ಮ ಗಣರಾಜ್ಯವನ್ನು ಸಾರ್ವಭೌಮವನ್ನಾಗಿಸಲು** ನಮ್ಮ ಬದ್ಧತೆಯನ್ನು ವ್ಯಕ್ತಪಡಿಸುವ **ಸಮಯವಿದು. ಬನ್ನಿ, ಭಾಗಿಯಾಗೋಣ...**"

ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು



ನಮ್ಮ ಕರ್ನಾಟಕ
**ಗ್ಯಾರಂಟಿ ಕರ್ನಾಟಕ**

ಶಕ್ತಿ — ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ

ಅನ್ನಭಾಗ್ಯ — ಬಡವರಿಗೆ ಪ್ರತಿ ತಿಂಗಳು 10 kg (5 ಕೆಜಿ ಆಹಾರಧಾನ್ಯ ಬದಲಿಗೆ ರೂ. 170)

ಗೃಹಜ್ಯೋತಿ — ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ

ಗೃಹಲಕ್ಷ್ಮಿ — ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು ₹2000

ಯುವನಿಧಿ — ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ₹3000 ಪದವೀಧರರಿಗೆ | ₹1500 ಡಿಪ್ಲೋಮಾ ಪದವೀಧರರಿಗೆ

"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ